12 February 2026 Thursday | SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ನೆನಪುಗಳು ಇರುವರೆಗೂ ನಿನ್ನೆಗಳು ಜೀವಂತವಾಗಿರುತ್ತವೆ! ಭರವಸೆಗಳು ನಾಳೆಯಾಗಿ ನಮಗಾಗಿ ಕಾಯುತ್ತಿರುತ್ತವೆ!

-ಸ್ನೇಹಾ ಆನಂದ್

info.varthaman@gmail.com



ಬಾಲ್ಯ ವಿವಾಹ ತಡೆ: ಎಲ್ಲರ ಜವಾಬ್ದಾರಿ: ಜಿಲ್ಲಾಧಿಕಾರಿ ಲಕ್ಷ್ಮೀಕಾಂತ್ ರೆಡ್ಡಿ ಹೇಳಿಕೆ ಪುಟ ಸಂ. 2



ಪ್ರಧಾನಿ ಮೋದಿಗೆ ಅವಮಾನ: ಕಾಂಗ್ರೆಸ್ ವಿರುದ್ಧ ಕ್ರಮಕ್ಕೆ ರಾಜ್ಯಪಾಲರಿಗೆ ಮನವಿ ಪುಟ ಸಂ. 4



ಜೀತಪದ್ಧತಿ: ನಿರ್ಮೂಲನೆಯಾಗಲಿ: ನ್ಯಾ. ಸವಿತಾ ಸೂಚನೆ ಪುಟ ಸಂ. 4

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್


VARTHAMAN | Volume: 69 | Issue: 89 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# ಸಿದ್ದು 'ಕೊಟ್ಟ ಮಾತು ತಪ್ಪಲ್ಲ!'

## ಅಧಿಕಾರ ಹಸ್ತಾಂತರಕ್ಕೆ ಡಿಕೆ ಬ್ರದರ್ಸ್ ಒತ್ತಡ ತಂತ್ರ | ವಾಗ್ದಾನ ನೆನಪಿಸಿದ ಡಿಕೆಸು

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೊಟ್ಟ ಮಾತು ತಪ್ಪಲ್ಲ. ತಮ್ಮ ಮಾತು ಉಳಿಸಕೊಳ್ಳುತ್ತಾರೆ ಎಂಬ ನಂಬಿಕೆ ನನಗೆ ಈಗಲೂ ಇದೆ ಎಂದು ಡಿ.ಕೆ.ಶಿವಕುಮಾರ್ ಅವರ ಸಹೋದರ ಡಿ.ಕೆ.ಸುರೇಶ್ ಅವರು ಕುರ್ಚಿ ಕಿತ್ತಾಟದ ವಿಚಾರಕ್ಕೆ ಟಾಂಗ್ ನೀಡಿದ್ದಾರೆ.

ಮಾಧ್ಯಮಗಳ ಜೊತೆ ಬುಧವಾರ ಮಾತನಾಡಿದ ಅವರು, ಅಧಿಕಾರ ಹಸ್ತಾಂತರದ ಬಗ್ಗೆ ಸಿದ್ದರಾಮಯ್ಯ ಅವರು ನೀಡಿರುವ ವಾಗ್ದಾನವನ್ನು ಮತ್ತೊಮ್ಮೆ ನೆನಪಿಸಿದರು. ಈ ಮೂಲಕ ಒತ್ತಡ ತಂತ್ರಕ್ಕೆ ಡಿಕೆಶಿ ಸಹೋದರ ಮುಂದಾಗಿದ್ದಾರೆ. ಅಲ್ಲದೆ, ಕೊಟ್ಟ ಮಾತು ಉಳಿಸಿಕೊಳ್ಳುತ್ತಾರೆ ಎಂದು ಹೇಳುವ ಮೂಲಕ ಸಿದ್ದರಾಮಯ್ಯ ಮಾತು ಕೊಟ್ಟಿರುವುದನ್ನು ಒತ್ತಿ ಹೇಳಿದ್ದಾರೆ.



ಅಲ್ಲದೆ, ನಿನ್ನೆ ಮಾತನಾಡಿದ್ದ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು, ಅಧಿಕಾರ ಹಂಚಿಕೆ ವಿಚಾರದಲ್ಲಿ ನಾವು ಕದ್ದು ಮುಚ್ಚಿ ಮಾತನಾಡಿಕೊಂಡಿಲ್ಲ. ನಾನು ಮತ್ತು ಸಿದ್ದರಾಮಯ್ಯ ಏನು ಮಾತಾಡಿಕೊಂಡಿದ್ದೇವೆ ಎನ್ನುವುದು ನನಗೆ ಗೊತ್ತಿದೆ ಎಂದು ಬಹಿರಂಗವಾಗಿ ಹೇಳಿದ್ದರು.



ಈ ಬಗ್ಗೆ ಗೊಂದಲ ಬೇರೆಯವರಿಗೆ ಇರಬಹುದು. ಆದರೆ ನನಗೆ ಯಾವುದೇ ಗೊಂದಲ ಇಲ್ಲ. ನಾವು, ನಮ್ಮ ವರಿಷ್ಠರು ಮಾತಾಡಿಕೊಂಡಿದ್ದೇವೆ ಎಂದಿದ್ದರು. ದೆಹಲಿಯಿಂದ ಗುಡ್ ನ್ಯೂಸ್ ತಗೊಂಡು ಬತ್ತೀರಾ ಎಂಬ ಪ್ರಶ್ನೆಗೆ ಉತ್ತರಿಸಿದ ಡಿಕೆಶಿ, ಪ್ರತಿ ದಿನವೂ ನನಗೆ ಒಳ್ಳೆಯದೇ, ಪ್ರತೀ ದಿನವೂ ಸಂತೋಷನೇ, ಜೊತೆಗೆ ಪ್ರತೀ ದಿನವೂ ಕಷ್ಟದ ದಿನವೇ. ಯಾವುದೂ ಏನೂ ಸುಲಭವಲ್ಲ ಎಂದು ಮಾರ್ಮಿಕವಾಗಿ ಹೇಳಿದ್ದರು. ದೆಹಲಿಗೆ ತೆರಳಿದ್ದ ಅವರು ಬುಧವಾರ ವಾಪಸ್ ಬಂದಿದ್ದಾರೆ.

### ಹೈಕಮಾಂಡ್‌ಗೆ ಎಲ್ಲವೂ ಗೊತ್ತು: ಪತ್ರಕರ್ತರ ಪ್ರಶ್ನೆಗೆ ಸಿದ್ದು ಸಿಡಿಮಿಡಿ



**ಬೆಂಗಳೂರು:** ಅಧಿಕಾರ ಹಂಚಿಕೆ ವಿಚಾರದಲ್ಲಿ ಹೈಕಮಾಂಡ್ ತೀರ್ಮಾನವೇ ಅಂತಿಮ. ಹೈಕಮಾಂಡ್ ಹೇಳಿದಂತೆ ನಾನು, ಡಿ.ಕೆ.ಶಿವಕುಮಾರ್ ನಡೆದುಕೊಳ್ಳಬೇಕು ಅಂತ ಸಿಎಂ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.

ಸಿಎಂ ಸಿದ್ದರಾಮಯ್ಯ ಕುರ್ಚಿ ಬಿಟ್ಟು ಕೊಡ್ತಾರೆ ಎಂಬ ವಿಶ್ವಾಸ ಇದೆ ಎಂಬ ಡಿ.ಕೆ.ಸುರೇಶ್ ಹೇಳಿಕೆ ಕುರಿತು ಪ್ರಶ್ನೆ ಕೇಳಿದ ಮಾಧ್ಯಮದವರ ವಿರುದ್ಧ ಸಿದ್ದರಾಮಯ್ಯ ಸಿಟ್ಟಾದರು. ಅದನ್ನ ಬಿಟ್ಟು ಬೇರೆ ಏನು ಕೇಳೋಕೆ ಬರಲ್ವಾ ನಿಮಗೆ? ಇನ್ನೇನು ಕೇಳೋದೆ ಇಲ್ಲವಲ್ಲ. 3 ತಿಂಗಳು ಆಯ್ತು ಇದನ್ನ ನೀವು ಶುರು ಮಾಡಿ. ಇನ್ನು ಮೇಲೆ ಇದನ್ನ ಕೇಳಬೇಡಿ. ಹೈಕಮಾಂಡ್‌ಗೆ ಎಲ್ಲವೂ ಗೊತ್ತು. ಹೈಕಮಾಂಡ್ ಅವರು ಎಲ್ಲವನ್ನ ತೀರ್ಮಾನ ಮಾಡ್ತಾರೆ ಅಂತ ತಿಳಿಸಿದರು.

ಹೈಕಮಾಂಡ್ ಏನು ತೀರ್ಮಾನ ಮಾಡುತ್ತದೆಯೋ ಅದರಂತೆ ನಡೆದುಕೊಳ್ಳೋನು ನಾನು. ಇದನ್ನ ಎಷ್ಟು ಸಾರಿ ಹೇಳೋದು ನಿಮಗೆ. ಯಾರು ಮತ್ತೆ ಮತ್ತೆ ಕೇಳೋಕೆ ಹೋಗಬೇಡಿ. ಹೈಕಮಾಂಡ್ ತೀರ್ಮಾನದಂತೆ ನಡೆದುಕೊಳ್ಳುತ್ತೇವೆ. ಹೈಕಮಾಂಡ್ ಹೇಳಿದಂತೆ ನಾನು ನಡೆದುಕೊಳ್ಳಬೇಕು. ಡಿಕೆ ಶಿವಕುಮಾರ್ ಕೂಡ ನಡೆದುಕೊಳ್ಳಬೇಕು. ಅದು ಬಿಟ್ಟು ಬೇರೆ ಏನು ಪುಟ 2ಕ್ಕೆ

# ಕೆಎಂಎಫ್ 'ಕುರ್ಚಿ ಕದನ'

## ಸಿದ್ದರಾಮಯ್ಯ-ಡಿ.ಕೆ.ಶಿವಕುಮಾರ್ ಬೆಂಬಲಿಗರ ನಡುವೆ ಹಗ್ಗಜಗ್ಗಾಟ



**ಬೆಂಗಳೂರು:** ರಾಜ್ಯ ಹಾಲು ಮಹಾಮಂಡಳ ಅಧ್ಯಕ್ಷ ಸ್ಥಾನದ ಚುನಾವಣೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಬಲಿಗರ ನಡುವೆ ಪೈಪೋಟಿ ಜೋರಾಗಿದೆ.

ರಾಜ್ಯ ಕಾಂಗ್ರೆಸ್‌ನಲ್ಲಿ ಅಧಿಕಾರ ಹಸ್ತಾಂತರದ ಮೇಲಾಟಗಳ ನಡುವೆಯೇ ಕೆಎಂಎಫ್ ಚುನಾವಣೆ ಸಮೀಪಿಸಿದೆ. ಹಾಲು ಮಹಾಮಂಡಳದ ಅಧ್ಯಕ್ಷ ಸ್ಥಾನಕ್ಕೆ ಕಾಂಗ್ರೆಸ್‌ನ ಮೂವರ ನಡುವೆ ತುರುಸಿನ ಸ್ಪರ್ಧೆ ಏರ್ಪಟ್ಟಿದೆ. ಬೆಂಗಳೂರು ಹಾಲು ಒಕ್ಕೂಟದ (ಬಮೂಲ್) ಅಧ್ಯಕ್ಷ ಡಿ.ಕೆ.ಸುರೇಶ್, ಬಳ್ಳಾರಿ, ಕೊಪ್ಪಳ ರಾಯಚೂರು ಒಕ್ಕೂಟದ ಅಧ್ಯಕ್ಷರಾದ ಕೊಪ್ಪಳ ಶಾಸಕ ರಾಘವೇಂದ್ರ ಹಿಟ್ನಾಳ ಹಾಗೂ ಕೋಲಾರ ಹಾಲು ಒಕ್ಕೂಟದ ಅಧ್ಯಕ್ಷ ಮಾಲೂರು ಶಾಸಕ ಕೆ.ವೈ.ನಂಜೇಗೌಡ ಪ್ರಮುಖ ಆಕಾಂಕ್ಷಿಗಳು.

ಹಿಂದಿನ ಅವಧಿಯಲ್ಲಿ ನಿಮ್ಮ ಬೆಂಬಲಿಗರಿಗೆ ಅವಕಾಶ ಮಾಡಿಕೊಟ್ಟಿದ್ದರಿಂದ ಈ ಅವಧಿಗೆ ನಮ್ಮ ಕಡೆಯವರಿಗೆ ಅಧ್ಯಕ್ಷ ಸ್ಥಾನ ಬಿಟ್ಟು ಕೊಡಿ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮೇಲೆ ಒತ್ತಡ ಹೇರಿದ್ದಾರೆ ಎನ್ನಲಾಗಿದೆ.

ಲೋಕಸಭಾ ಚುನಾವಣೆಯಲ್ಲಿ ಸೋತಿರುವ ಸಹೋದರ ಡಿ.ಕೆ.ಸುರೇಶ್ ಅವರಿಗೆ ಕೆಎಂಎಫ್ ಚುಕ್ಕಾಣಿ ಕೊಡಿಸಲು ಡಿ.ಕೆ.ಶಿವಕುಮಾರ್ ಮುಂದಾಗಿದ್ದಾರೆ. ಅಲ್ಲದೆ, ಸಿದ್ದರಾಮಯ್ಯ ಅವರು ತಮ್ಮ ಆಪ್ತ ರಾಘವೇಂದ್ರ ಹಿಟ್ನಾಳ ಪರ ನಿಂತಿದ್ದಾರೆ. ಹಿಟ್ನಾಳ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ನೀಡಿ ಮಾತುಕತೆ ನಡೆಸಿದ್ದಾರೆ. ಹಿಂದಿನ ಅವಧಿಯಲ್ಲಿ ಅವಕಾಶ ತಪ್ಪಿದ್ದರಿಂದ ನನಗೂ ಒಂದು ಅವಕಾಶ ಮಾಡಿಕೊಡಿ ಎಂದು ನಂಜೇಗೌಡ ಬೇಡಿಕೆ ಇಟ್ಟಿದ್ದಾರೆ. ಈಗ ಹೈಕಮಾಂಡ್ ಯಾರ ಪರ ನಿಲ್ಲಲಿದೆ ಎಂಬುದು ಸಹ ಮುಖ್ಯವಾಗಿದೆ.

## ಕಸ ಎಸೆದವರಿಗೆ 14 ಲಕ್ಷ ರೂ. ದಂಡ

**ಮೈಸೂರು:** ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ ನಿಯಮಾವಳಿಗಳನ್ವಯ ಪ್ಲಾಸ್ಟಿಕ್ ನಿಷೇಧವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಈ ನಿಯಮಾವಳಿಗಳನ್ನು ಉಲ್ಲಂಘಿಸಿದವರಿಗೆ 2025ರ ಏ.1ರಿಂದ ಫೆ.10ರ ವರೆಗೆ ನಗರದಲ್ಲಿ ಬರೋಬ್ಬರಿ 14.35,500 ರೂ. ಮೊತ್ತವನ್ನು ದಂಡದ


# ಮಹದೇಶ್ವರನ ಭಕ್ತರಿಗೆ ಚಿರತೆ ದಾಳಿ ಆತಂಕ

## ಮಹಾಶಿವರಾತ್ರಿ ಜಾತ್ರೆಗೆ ಪಾದಯಾತ್ರೆಯಲ್ಲಿ ಸಹಸ್ರಾರು ಭಕ್ತರ ಆಗಮನ



**ಚಾಮರಾಜನಗರ:** ಮಹದೇಶ್ವರ ಬೆಟ್ಟದ ದಾರಿಯಲ್ಲಿ ಮತ್ತೆ ಮತ್ತೆ ಚಿರತೆ ದಾಳಿ ನಡೆಯುತ್ತಿರುವುದರಿಂದ ಪಾದಯಾತ್ರೆ ತೆರಳುತ್ತಿರುವ ಭಕ್ತರು ಆತಂಕಗೊಂಡಿದ್ದಾರೆ. ಇದರಿಂದ ಮಹಾಶಿವರಾತ್ರಿ ಜಾತ್ರೆಗೆ ಪಾದಯಾತ್ರೆ ಮೂಲಕ ಬರುತ್ತಿರುವ ಸಹಸ್ರಾರು ಭಕ್ತರಲ್ಲಿ ಆತಂಕ ಸೃಷ್ಟಿಯಾಗಿದೆ.

ಮತ್ತೊಂದೆಡೆ ಸಹಸ್ರಾರು ಸಂಖ್ಯೆಯಲ್ಲಿ ಭಕ್ತರು ಕಾವೇರಿ ನದಿ ದಾಟಿ ಬರುತ್ತಿದ್ದಾರೆ. ಭಕ್ತರ ರಕ್ಷಣೆಯೇ ಜಿಲ್ಲಾಡಳಿತ, ಪೊಲೀಸ್ ಹಾಗೂ ಅರಣ್ಯ ಇಲಾಖೆಗೆ ಸವಾಲಾಗಿದೆ.



ಸಾಂದರ್ಭಿಕ ಚಿತ್ರ

ಮಂಡ್ಯ ಜಿಲ್ಲೆಯ ಚೀರನಹಳ್ಳಿಯ ಪ್ರವೀಣ್ ಎಂಬ ಯುವಕ ಮಹದೇಶ್ವರ ಬೆಟ್ಟದ ರಂಗಸ್ವಾಮಿ ಒಡ್ಡು ಬಳಿ ಚಿರತೆ ದಾಳಿಗೆ ಬಲಿಯಾಗಿದ್ದ. ಈ ಘಟನೆ ಮಾಸುವ ಮುನ್ನವೇ ಮತ್ತೊಂದು ಅವಘಡ ನಡೆದಿದೆ. ಭಕ್ತರು ಪಾದಯಾತ್ರೆ ಮೂಲಕ ಮಹದೇಶ್ವರನ ದರ್ಶನಕ್ಕೆ ಹೊರಟಿದ್ದರು. ಆದರೆ ತಾಳಬೆಟ್ಟದ ಮುಂದೆ 2ನೇ ತಿರುವಿನಲ್ಲಿ ಇದ್ದಕ್ಕಿದ್ದಂತೆ ಚಿರತೆ ಪಾದ ಯಾತ್ರಿಗಳ ಗುಂಪಿನ ಮೇಲೆ ದಾಳಿ ನಡೆಸಿದೆ. ಈ ವೇಳೆ ಚೇತನ್ ಎಂಬ 10 ವರ್ಷದ ಬಾಲಕ ಪುಟ 2ಕ್ಕೆ

### ಹರಿದು ಬರಲಿದೆ ಭಕ್ತಸಾಗರ

ಮಲೆಮಹದೇಶ್ವರ ಬೆಟ್ಟ ದಕ್ಷಿಣ ಭಾರತದ ಪ್ರಸಿದ್ದ ಯಾತ್ರಾ ಸ್ಥಳ. ಫೆಬ್ರುವರಿ 15ರಂದು ನಡೆಯಲಿರುವ ಮಹಾಶಿವರಾತ್ರಿ ಜಾತ್ರೆಗೆ ಮಲೆ ಮಹದೇಶ್ವರ ಬೆಟ್ಟದತ್ತ ಭಕ್ತಸಾಗರ ಪುಟ 2ಕ್ಕೆ

# ವಂದೇ ಮಾತರಂ ಕಡ್ಡಾಯ

## ಎಲ್ಲಾ ಶಾಲೆಗಳಲ್ಲೂ ರಾಷ್ಟ್ರಗೀತೆಗೂ ಮುನ್ನ ಹಾಡುವಂತೆ ಆದೇಶ

**ನವದೆಹಲಿ:** ದೇಶದ ಸಾಂಸ್ಕೃತಿಕ ಮತ್ತು ದೇಶಭಕ್ತಿಯ ಸಂಕೇತವಾದ ವಂದೇ ಮಾತರಂ ಗೀತೆಗೆ ಸಂಬಂಧಿಸಿದಂತೆ ಕೇಂದ್ರ ಗೃಹ ಸಚಿವಾಲಯ ಮಹತ್ವದ ನಿರ್ಧಾರ ತೆಗೆದುಕೊಂಡಿದೆ. ರಾಷ್ಟ್ರಗೀತೆಗೂ ಮುನ್ನ ವಂದೇ ಮಾತರಂ ಗೀತೆಯನ್ನ ಹಾಡಬೇಕು ಅಥವಾ ನುಡಿಸಬೇಕು ಎಂದು ಕೇಂದ್ರ ಗೃಹ ಸಚಿವಾಲಯ ಆದೇಶ ಹೊರಡಿಸಿದೆ.

ರಾಷ್ಟ್ರದ ಗೌರವಕ್ಕೆ ಅಪಮಾನ ತಡೆ ಕಾಯ್ದೆ ಅಡಿಯಲ್ಲಿ ರಾಷ್ಟ್ರಗೀತೆಗೆ ಅಡ್ಡಿಪಡಿಸುವ ಅಥವಾ ಇತರರು ಗೌರವಿಸುವುದನ್ನ ತಡೆಯುವ ಯಾವುದೇ ವ್ಯಕ್ತಿಗೆ ಗರಿಷ್ಠ 3 ವರ್ಷಗಳ ಜೈಲು ಶಿಕ್ಷೆ ವಿಧಿಸಬಹುದಾಗಿದೆ.



ವಂದೇ ಮಾತರಂ ಗೀತೆಗೆ 150 ವರ್ಷ ತುಂಬಿದರ ಪ್ರಯುಕ್ತ ಗೌರವ ಸಲ್ಲಿಸಲು ಕೇಂದ್ರ ಸರ್ಕಾರ ಈ ನಿರ್ಧಾರ ತೆಗೆದುಕೊಂಡಿದೆ. ಪದ್ಮ ಪ್ರಶಸ್ತಿಗಳಂತೆ ನಾಗರಿಕ ಪ್ರಶಸ್ತಿ ಪ್ರದಾನ ಸಮಾರಂಭಗಳಲ್ಲಿ, ರಾಷ್ಟ್ರಪತಿಗಳು ಭಾಗವಹಿಸುವ ಇತರ ಎಲ್ಲಾ ಕಾರ್ಯಕ್ರಮಗಳು, ಅಧಿಕೃತ ಸರ್ಕಾರಿ ಕಾರ್ಯಕ್ರಮಗಳು, ಚಿತ್ರಮಂದಿರಗಳಲ್ಲಿ ವಂದೇ ಮಾತರಂ ಗೀತೆ ನುಡಿಸಬೇಕು ಅಥವಾ ಹಾಡಬೇಕು. 3 ನಿಮಿಷ 10 ಸೆಕೆಂಡುಗಳ ಅವಧಿಯ ವಂದೇ ಮಾತರಂ ಗೀತೆಯ 6 ಚರಣಗಳ ಗೀತೆ ನುಡಿಸುವಾಗ ಅಥವಾ ಹಾಡುವಾಗ ಎಲ್ಲರೂ ಕಡ್ಡಾಯವಾಗಿ ಎದ್ದು ನಿಲ್ಲಬೇಕು ಎಂದು ಮಾರ್ಗಸೂಚಿಯಲ್ಲಿ ತಿಳಿಸಿದೆ.

ಇದರಲ್ಲಿ ತ್ರಿವರ್ಣ ಧ್ವಜ ಹಾರಿಸುವಾಗ, ಸರ್ಕಾರಿ ಕಾರ್ಯಕ್ರಮಗಳಿಗೆ ರಾಷ್ಟ್ರಪತಿಗಳ ಆಗಮನದ ಸಮಯದಲ್ಲಿ, ಅವರ ಭಾಷಣಗಳು ಮತ್ತು ರಾಷ್ಟ್ರವನ್ನುದ್ದೇಶಿಸಿ ಪುಟ 3ಕ್ಕೆ

# ಕೈ ಶಾಸಕರ ವಿದೇಶ ಪ್ರವಾಸ

## ರಾಜ್ಯ ಉಸ್ತುವಾರಿ ಸುರ್ಜೇವಾಲಾ ಮಾತಿಗೂ ಕಿಮ್ಮತ್ತಿಲ್ಲ

**ಬೆಂಗಳೂರು:** ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ ಅಧಿಕಾರ ಹಗ್ಗಜಗ್ಗಾಟ ಮುಂದುವರಿದಿರುವ ಸಮಯದಲ್ಲಿಯೇ ಕಾಂಗ್ರೆಸ್ ಶಾಸ ಕರು ಫಾರಿನ್ ಟೂರ್ ಫಿಕ್ಸ್ ಆಗಿದೆ.

ಕಾಂಗ್ರೆಸ್ 20ಕ್ಕೂ ಹೆಚ್ಚು ಶಾಸಕರು ಮತ್ತು ಅವರ ಕುಟುಂಬ ಸದಸ್ಯರು ವಿದೇಶ ಪ್ರವಾಸ ಹೊರಡಲಿದ್ದಾರೆ. ಕಾಂಗ್ರೆಸ್ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ವಾರ್ನಿಂಗ್‌ಗೂ ಶಾಸಕರು ತಲೆಕೆಡಿಸಿಕೊಂಡಿಲ್ಲ. ವಿದೇಶಿ ಪ್ರವಾಸವನ್ನು ಫಿಕ್ಸ್ ಮಾಡಿದ್ದಾರೆ.

ಇಬ್ಬರು ಸಚಿವರ ಉಸ್ತುವಾರಿಯಲ್ಲಿ ಶಾಸಕರ ಫಾರಿನ್ ಟೂರ್ ಹೋಗಲಿದ್ದಾರೆ. ಪ್ರವಾಸದ ಎಲ್ಲಾ ವೆಚ್ಚ, ಜವಾಬ್ದಾರಿಯನ್ನು ಇಬ್ಬರು ಸಚಿವರು ವಹಿಸಿಕೊಳ್ಳಲಿದ್ದಾರೆ ಎನ್ನಲಾಗಿದೆ. ಪುಟ 2ಕ್ಕೆ

### ಅವರ ಖರ್ಚಿನಲ್ಲಿ ಹೋಗ್ತಾರೆ

ಶಾಸಕರು ಫಾರಿನ್ ಟ್ರಿಪ್ ಹೋಗ್ತಿರೋದು ನನಗೆ ಗೊತ್ತಿಲ್ಲ. ಅವರ ಹಣದಲ್ಲಿ ಅವರು ವಿದೇಶಿ ಪ್ರವಾಸಕ್ಕೆ ಹೋದ್ರೆ ಬೇಡ ಅನ್ನೋಕೆ ಆಗುತ್ತಾ ಅಂತ ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ. ಶಾಸಕರ ಫಾರಿನ್ ಟ್ರಿಪ್ ವಿಚಾರಕ್ಕೆ ಬೆಂಗಳೂರಿನಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಶಾಸಕರು ಅವರ ಸ್ವಂತ ದುಡ್ಡಿನಲ್ಲಿ ಹೋದ್ರೆ ನಾನು ಬೇಡ ಅನ್ನೋಕೆ ಸಾಧ್ಯವೇ? ಅವರ ಸ್ವಂತ ಪುಟ 2ಕ್ಕೆ

## ಚಂದ್ರಗ್ರಹಣ: ಕುಕ್ಕೆಯಲ್ಲಿ ದೇವರ ದರ್ಶನ ಸ್ಥಗಿತ



**ಸುಬ್ರಹ್ಮಣ್ಯ:** ಚಂದ್ರಗ್ರಹಣದ ಅಂಗವಾಗಿ ಕುಕ್ಕೆ ಸುಬ್ರಹ್ಮಣ್ಯ ದೇವಸ್ಥಾನದಲ್ಲಿ ಮಾರ್ಚ್ 2 ಮತ್ತು 3ರಂದು ದೇವರ ದರ್ಶನ ಹಾಗೂ ಸೇವೆಗಳಲ್ಲಿ ವ್ಯತ್ಯಯವಾಗಲಿದೆ. ಮಾರ್ಚ್ 2 ಮತ್ತು 3ರಂದು ಸರ್ಪಸಂಸ್ಕಾರ ಪೂಜೆ ನಡೆಯುವುದಿಲ್ಲ. 3ರಂದು ಯಾವುದೇ ಸೇವೆಗಳು ಇರುವುದಿಲ್ಲ. ಅಂದು ಮಧ್ಯಾಹ್ನದ ಮಹಾಪೂಜೆ ಬೆಳಿಗ್ಗೆ 8ಕ್ಕೆ ನಡೆಯಲಿದೆ. 9 ಗಂಟೆಯ ಬಳಿಕ ದೇವರ ದರ್ಶನಕ್ಕೆ ಅವಕಾಶ ಇರುವುದಿಲ್ಲ. ಸಂಜೆ 7ರ ನಂತರ ದೇವರ ಮಹಾಪೂಜೆ ನಡೆಯಲಿದೆ.

## ಮೈಸೂರು-ಕುಶಾಲನಗರ ರೈಲ್ವೆ ಯೋಜನೆಗೆ ಯದುವೀರ್ ಮನವಿ

**ಮೈಸೂರು:** ನನೆಗುದಿಗೆ ಬಿದ್ದಿರುವ ಮೈಸೂರು-ಕುಶಾಲನಗರ ರೈಲ್ವೆ ಯೋಜನೆಗೆ ಮರು ಚಾಲನೆ ನೀಡಬೇಕು. ಭೂಸ್ವಾಧೀನ ಪ್ರಕ್ರಿಯೆ ಆರಂಭಿಸಲು ಮಧ್ಯ ಪ್ರವೇಶಿಸಬೇಕು ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನ್ ವೈಷ್ಣವ್ ಅವರಿಗೆ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮನವಿ ಮಾಡಿದ್ದಾರೆ.

ಈ ಸಂಬಂಧ ಪತ್ರ ಬರೆದಿರುವ ಸಂಸದ ಯದುವೀರ್ ಅವರು, ಕೆಲವು ಪ್ರಕ್ರಿಯೆ ಪೂರ್ಣಗೊಂಡಿದ್ದರೂ ನನೆಗುದಿಗೆ ಬಿದ್ದಿದೆ. ಮೈಸೂರು (ಬೆಳಗೊಳ)- ಕುಶಾಲನಗರ (89 ಕಿ.ಮೀ) ಯೋಜನೆಯ ಅಂತಿಮ ಸ್ಥಳ ಸಮೀಕ್ಷೆ ಪೂರ್ಣಗೊಂಡಿದ್ದರೂ ಯೋಜನೆ ಸ್ಥಗಿತಗೊಂಡಿದೆ. ಈ ಯೋಜನೆಗೆ ಪುನರುಜ್ಜೀವನಗೊಳಿಸಬೇಕಾಗಿದೆ. ಈ ನಿಟ್ಟಿನಲ್ಲಿ ಕೇಂದ್ರ ಸಚಿವರು ಮಧ್ಯಪ್ರವೇಶಿಸಬೇಕು ಎಂದು ಮನವಿ ಸಲ್ಲಿಸಿದ್ದಾರೆ. ಪುಟ 2ಕ್ಕೆ



# ಆರ್‌ಸಿಬಿ ಕನಸಿಗೆ ಎಂಸಿಎ ಶಾಕ್

## ಮುಂಬೈನಲ್ಲಿ ಆಡಲು ಎನ್‌ಒಸಿ ನೀಡಲು ನಿರಾಕರಣೆ

**ಮುಂಬೈ:** ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಕಾಲ್ತುಳಿತ ದುರಂತದಿಂದ ತವರು ಕ್ರೀಡಾಂಗಣ ಬದಲಾಯಿಸಲು ಮುಂದಾಗಿದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿಗೆ ಮುಂಬೈ ಕ್ರಿಕೆಟ್ ಅಸೋಸಿಯೇಷನ್ ಶಾಕ್ ಕೊಟ್ಟಿದೆ.

ಐಪಿಎಲ್‌ನ 5 ತವರು ಪಂದ್ಯಗಳಿಗಾಗಿ ಮುಂಬೈನ ಡಿವೈ ಪಾಟೀಲ ಕ್ರೀಡಾಂಗಣ ಬಳಕೆಗೆ ಎನ್‌ಒಸಿ ನೀಡಲು ಮುಂಬೈ ಕ್ರಿಕೆಟ್ ಅಸೋಸಿಯೇಷನ್ ನಿರಾಕರಿಸಿದೆ. 2025ರ ಆವೃತ್ತಿಯಲ್ಲಿ ಐಪಿಎಲ್ ಟ್ರೋಫಿ ಗೆದ್ದ ಆರ್‌ಸಿಬಿ ವಿಜಯೋತ್ಸವ ಆಚರಣೆ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಕಾಲ್ತುಳಿತ ದುರಂತ ನಡೆದಿತ್ತು. ಈ ವೇಳೆ 11 ಅಭಿಮಾನಿಗಳು ಅಸುನೀಗಿದ್ದರು. ಆದ್ದರಿಂದ 2026ರ ಟೂರ್ನಿ ವೇಳೆ 5 ಪಂದ್ಯಗಳಿಗೆ ತವರು ಕ್ರೀಡಾಂಗಣ ಬದಲಾಯಿಸಲು ಆರ್‌ಸಿಬಿ ನಿರ್ಧರಿಸಿತ್ತು.

ನವೀ ಮುಂಬೈನ ಡಿವೈ ಪಾಟೀಲ ಕ್ರೀಡಾಂಗಣ ಹಾಗೂ ಪುಣೆ ಮೈದಾನಕ್ಕೆ ಆರ್‌ಸಿಬಿ ಆಡಳಿತ ಭೇಟಿ ನೀಡಿತ್ತು. ಪುಣೆ ಮೈದಾನವನ್ನ ರಾಜಸ್ಥಾನ ರಾಯಲ್ಸ್ ತಂಡ ತವರು ಕ್ರೀಡಾಂಗಣವಾಗಿ ಆಯ್ಕೆ ಮಾಡಿಕೊಂಡಿದೆ. ಹಾಗಾಗಿ 5 ತವರು ಪಂದ್ಯಗಳಿ ಗಾಗಿ ಡಿವೈ ಪಾಟೀಲ ಕ್ರೀಡಾ ಪುಟ 2ಕ್ಕೆ

### ಬೆಂಗಳೂರಿನಲ್ಲೇ ಉದ್ಘಾಟನೆ?

ಬೆಂಗಳೂರಿನಲ್ಲೇ ಆರ್‌ಸಿಬಿ ಪಂದ್ಯಗಳನ್ನ ನಡೆಸಲು ಕೆಎಸ್‌ಸಿಎ ಕಸರತ್ತು ನಡೆಸುತ್ತಿದೆ. ಈ ಸಂಬಂಧ ಫೆ. 12ರಂದು ಉನ್ನತ ಮಟ್ಟದ ಸಭೆ ನಡೆಯಲಿದೆ. ಅದಕ್ಕೂ ಮುನ್ನ ಜಿಬಿಎ ಮುಖ್ಯ ಆಯುಕ್ತರ ನೇತೃತ್ವದಲ್ಲಿ ಗೃಹ ಸಚಿವರು ನೇಮಕ ಮಾಡಿದ್ದ ಸಮಿತಿ ಸಲ್ಲಿಸಿರುವ ವರದಿಯನ್ನ ಅಂತಿಮಗೊಳಿಸುವ ಸಾಧ್ಯತೆಯಿದೆ ಎನ್ನಲಾಗಿದೆ. ಒಟ್ಟಿನಲ್ಲಿ ಅಂದುಕೊಂಡಂತೆ ನಡೆದರೆ, ಕೋಟ್ಯಂತರ ಆರ್‌ಸಿಬಿ ಅಭಿಮಾನಿಗಳ ನಿರೀಕ್ಷೆಯಂತೆ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲೇ 2026ರ ಐಪಿಎಲ್ ಆವೃತ್ತಿ ಉದ್ಘಾಟನೆ ಆಗಲಿದೆ.

## ಶಾಲಾ ಬಸ್ ಹರಿದು ಇಬ್ಬರು ಮಕ್ಕಳು ಸಾವು



**ಬೆಂಗಳೂರು:** ಬೆಂಗಳೂರಿನಲ್ಲಿ ಬೈಕ್ ಗೆ ಶಾಲಾ ಬಸ್ ಡಿಕ್ಕಿ ಹೊಡೆದು ಬೈಕ್‌ನಿಂದ ಕೆಳಗೆ ಬಿದ್ದ ಮಕ್ಕಳ ಮೇಲೆ ಬಸ್ ಹರಿದ ಪರಿಣಾಮ ಇಬ್ಬರು ಮಕ್ಕಳ ಸ್ಥಳದಲ್ಲೇ ಸಾವನ್ನಪ್ಪಿರುವ ದಾರುಣ ಘಟನೆ ನಡೆದಿದೆ. 2 ವರ್ಷದ ವರ್ಷಾ ಹಾಗೂ 4 ವರ್ಷದ ಭಾನು ಮೃತ ಮಕ್ಕಳು.

ಥಣಿಸಂದ್ರದ ಪೊಲೀಸ್ ಕ್ವಾರ್ಟರ್ಸ್ ಬಳಿ ಪೊಲೀಸ್ ಪೇದೆ ನಾಗನಗೌಡ ತನ್ನ ಮಗಳು ವರ್ಷಾ ಹಾಗೂ ಅಣ್ಣನ ಮಗಳು ಭಾನುಳನ್ನು ಬೈಕ್‌ನಲ್ಲಿ ಪುಟ 3ಕ್ಕೆ

# ಲೋಕಸಭಾ ಸ್ಪೀಕರ್ ವಿರುದ್ಧ ಅವಿಶ್ವಾಸ: ಮಾ.9ರಂದು ಚರ್ಚೆ



**ನವದೆಹಲಿ:** ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರನ್ನು ಹುದ್ದೆಯಿಂದ ಪದಚ್ಯುತಗೊಳಿಸುವ ಪ್ರಕ್ರಿಯೆಗೆ ವಿಪಕ್ಷಗಳು ಚಾಲನೆ ನೀಡಿವೆ. ಸ್ಪೀಕರ್ ವಿರುದ್ಧದ ಅವಿಶ್ವಾಸ ನಿರ್ಣಯದ ಕುರಿತು ಮಾರ್ಚ್ 9ರಂದು ಚರ್ಚೆ ನಡೆಯಲಿದೆ.

ಪ್ರಧಾನಿ ಮೋದಿ ವಿರುದ್ಧ ಅನಿರೀಕ್ಷಿತ ಕೃತ್ಯ ಎಸಗಲು ವಿಪಕ್ಷ ಸಂಸದರು ಸಂಚು ರೂಪಿಸಿದ್ದರು ಎಂದು ಸ್ಪೀಕರ್ ಆರೋಪಿಸಿದ್ದರು. ಅಲ್ಲದೆ, ರಾಹುಲ್ ಗಾಂಧಿ ಸೇರಿದಂತೆ ವಿಪಕ್ಷದವರಿಗೆ ಮಾತನಾಡಲು ಅವಕಾಶ ಕೊಡುತ್ತಿಲ್ಲ ಎಂದು ವಿಪಕ್ಷಗಳು ಆರೋಪಿಸಿವೆ. ಸ್ಪೀಕರ್ ವಿರುದ್ಧ ಪಕ್ಷಪಾತಿ ಆರೋಪ ಹೊರಿಸಿರುವ ವಿಪಕ್ಷಗಳು, ಕಲಾಪಗಳಲ್ಲಿ ಆಡಳಿತ ಪಕ್ಷಕ್ಕೆ ಉದ್ದೇಶಪೂರ್ವಕವಾಗಿ ಅನುಕೂಲಕರ ವಾತಾವರಣ ನಿರ್ಮಿಸಿಕೊಡುತ್ತಿದ್ದಾರೆ ಎಂದು ಆರೋಪಿಸಿ ಅವಿಶ್ವಾಸ ನಿರ್ಣಯ ನಿರ್ಧಾರವಾಗುವವರೆಗೂ ಕಲಾಪದ ಅಧ್ಯಕ್ಷತೆಯಿಂದ ಹಿಂದೆ ಸರಿಯುವಂತೆಯೂ ಒತ್ತಾಯಿಸಿವೆ. ಈ ಮಧ್ಯೆ ಓಂ ಬಿರ್ಲಾ ಅವರು ತಮ್ಮ ವಿರುದ್ಧ ಮಂಡಿಸಲಾದ ಅವಿಶ್ವಾಸ ನಿರ್ಣಯ ಇತ್ಯರ್ಥವಾಗುವವರೆಗೆ, ಲೋಕಸಭೆ ಸ್ಪೀಕರ್ ಕುರ್ಚಿಯಲ್ಲಿ ಕುಳಿತುಕೊಳ್ಳದಿರಲು ನಿರ್ಧರಿಸಿದ್ದಾರೆ ಎಂದು ಲೋಕಸಭಾ ಸಚಿವಾಲಯದ ಅಧಿಕಾರಿಗಳು ತಿಳಿಸಿದ್ದಾರೆ.

ಲೋಕಸಭಾ ಸ್ಪೀಕರ್ ಓಂ ಬಿರ್ಲಾ ವಿರುದ್ಧದ ಅವಿಶ್ವಾಸ ನಿರ್ಣಯ ಕುರಿತು ಬಜೆಟ್ ಅಧಿವೇಶನದ 2ನೇ ಹಂತದ ಮೊದಲ

# ಸಂಯುಕ್ತ ಕಿಸಾನ್ ಮೋರ್ಚಾ ರೈತ ಜಾಗೃತಿಯಾತ್ರೆ



ಮೈಸೂರು: ಮುಂಬರುವ ಫೆ.15ರಂದು ದೇಶಾ ದ್ಯಂತ ಹಳ್ಳಿ ಹಳ್ಳಿಗಳಲ್ಲಿ ಕಪ್ಪು ಪಟ್ಟಿ ಕಟ್ಟಿ ಭಾರತ ಅಮೆರಿಕ ವ್ಯಾಪಾರ ಒಪ್ಪಂದ ಪತ್ರ ಸುಡುವ ಚಳುವಳಿ ನಡೆಯಲಿದ್ದು, ಇದರ ಪ್ರಮುಖರಾದ ರಾಷ್ಟ್ರೀಯ ನಾಯಕ ಜಗಜಿತ್ ಸಿಂಗ್ ದಲ್ಲೆವಾಲಾ ಸಂಯುಕ್ತ ಕಿಸಾನ್ ಮೋರ್ಚ ರೈತ ಜಾಗೃತಿಯಾ ತ್ರೆಯ ಸಮಾವೇಶ ಮೈಸೂರಿನ ಸಚ್ಚಿದಾನಂದ ಆಶ್ರಮದಲ್ಲಿ ನಡೆಯಿತು.

ಶ್ರೀ ಸಚ್ಚಿದಾನಂದ ಸ್ವಾಮೀಜಿ ಮಾತನಾಡಿ, ರೈತರು ದೇಶದ ಬೆನ್ನೆಲುಬು ರೈತರ ಆಹಾರವನ್ನು ಸೈನಿಕರು ಉಪಯೋಗಿಸಿಕೊಂಡು ದೇಶ ಕಾಯು ತ್ತಾರೆ. ರೈತರು, ಸೈನಿಕರು ಎರಡು ಕಣ್ಣುಗಳಂತೆ. ರೈತರ ಸಂಕಷ್ಟದ ನಿವಾರಣೆಗೆ ಸರ್ಕಾರಗಳು ವಿಶೇಷ ಗಮನ ಹರಿಸಬೇಕು ಎಂದರು. ಪ್ರಾಸ್ತಾವಿ ಕವಾಗಿ ಕುರುಬೂರು ಶಾಂತಕುಮಾರ್ ರೈತ ಜಾಗೃತಿ ಯಾತ್ರೆಯ ಉದ್ದೇಶದ ಬಗ್ಗೆ ಮಾತನಾಡಿ, ಸ್ವಾತಂತ್ರ ಪೂರ್ವದಲ್ಲಿ ವ್ಯಾಪಾರಕ್ಕಾಗಿ ಬಂದ ಬ್ರಿಟಿಷರು ದೇಶ ಆಳಿದರು, ಈಗ ನಮ್ಮವರಿಂದಲೇ ಅಮೆರಿಕ ಜೊತೆ ವ್ಯಾಪಾರದ ಒಪ್ಪಂದ ಮಾಡಿ ರೈತರ ಮರಣ ಶಾಸನ ಬರೆಯುತ್ತಿದ್ದಾರೆ. ದೆಹಲಿ ಗಡಿಯಲ್ಲಿ ಒಂದು ವರ್ಷ ಚಳುವಳಿ ನಡೆಸಿದಾಗ 5 ಸಭೆ 5 ಗಂಟೆಗಳ ಕಾಲ ನಡೆಸಿದ ಕೇಂದ್ರ ಸಚಿವ ಪಿಯುಸ ಗೋಯಿಲ್ 5 ಕೃಷಿ ಉತ್ಪನ್ನಗಳಿಗೆ ಖಾತರಿಕೊಡುತ್ತೇನೆಂದರು ನಾವು ಒಪ್ಪಲಿಲ್ಲ ಈ ಬಗ್ಗೆ ಏನು ಮಾಡಲಿಲ್ಲ. ಕಳೆದ ವರ್ಷ ಜಗಜಿತ್ ಸಿಂಗ್ ದಲೆವಾಲಾ ಹೋರಾಟ ನಡೆಸಿದಾಗ ಸರ್ವೋಚ್ಚ ನ್ಯಾಯಾಲಯ ನವಾಬ್ಸಿಂಗ್ ಅಧ್ಯಕ್ಷತೆಯಲ್ಲಿ ಸಮಿತಿ ಮಾಡಿತು. ಈ ಸಮಿತಿ ರೈತರ ಪರವಾಗಿ ವರದಿ ಸಲ್ಲಿಸಿದೆ ಯಾವುದೇ ತೀರ್ಮಾನ ಆಗಿಲ್ಲ. 31 ಜನರ ಸಂಸದೀಯ ಸಮಿತಿ ಸರ್ಕಾರಕ್ಕೆ ವರದಿ ಕೊಟ್ಟಿದೆ ಎಂಎಸ್‌ಪಿ ಗ್ಯಾರಂಟಿ ಕಾನೂನು ಅವಶ್ಯ ಕತೆ ಇದೆ ಎಂದು ವರದಿ ನೀಡಿದೆ ಯಾವುದೇ ತೀರ್ಮಾನ ಆಗಿಲ್ಲ ಎಂದರು. ಹಿಂದೆ ಮನಮೋಹನ್ ಸಿಂಗ್ ಸರ್ಕಾರ ಡಾ.ಸ್ವಾಮಿನಾಥನ್ ಅಧ್ಯ ಕ್ಷತೆಯಲ್ಲಿ ಸಮಿತಿ ರಚಿಸಿತು. ಈ ವರದಿ 2007ರಲ್ಲಿ ಸಲ್ಲಿಸಲಾಗಿತ್ತು. 2014ರಲ್ಲಿ ಸ್ವಾಮಿ ನಾಥನ್ ಆಯೋಗದ ವರದಿ ಜಾರಿಗೆ ತರುವ ಭರವಸೆ ನೀಡಿ ಪ್ರಧಾನಿ ಮೋದಿ ಅಧಿಕಾರಕ್ಕೆ ಬಂದರು. ನಂತರ ಜಾರಿ ಮಾಡಲು ಸಾಧ್ಯವಿಲ್ಲ ಎಂದು ಸರ್ವೋಚ್ಚ ನ್ಯಾಯಾಲಯಕ್ಕೆ ಮುಚ್ಚಳಿಕೆ ಬರೆದು ಕೊಟ್ಟಿದ್ದಾರೆ. ಸ್ವತಂತ್ರ ಪೂರ್ವದಲ್ಲಿ . ರೈತರು ಚಳು ವಳಿ ಮಾಡುವ ಎಚ್ಚರಿಕೆ ನೀಡಿದರೆ ಬ್ರಿಟಿಷ್ ಆಡಳಿತ ತಕ್ಷಣವೇ ಸ್ಪಂದಿಸಿ ಸಮಸ್ಯೆ ಬಗೆಹರಿಸು ತ್ತಿತ್ತು. ಆದರೆ ಇಂದಿನ ನಮ್ಮ ಸರ್ಕಾರಗಳು ನಾಟಕೀಯವಾಗಿ ವರ್ತಿಸುತ್ತಿವೆ. ಇದರ ವಿರುದ್ಧ ರೈತರು ನಿಲ್ಲಲೇಬೇಕು. ಅದಕ್ಕಾಗಿ ಮಾ.19 ರಂದು ದೆಹಲಿಯಲ್ಲಿ ರಾಮಲೀಲಾ ಮೈದಾನದಲ್ಲಿ ಬೃಹತ್ ರೈತರ ಸಮಾವೇಶ ನಡೆಸಲಾಗುವುದು. ಎಲ್ಲಾ ರೈತರು ಬನ್ನಿ ಸರ್ಕಾರಕ್ಕೆ ಬಿಸಿ ಮುಟ್ಟಿಸೋಣ ಎಂದರು. ಹರಿಯಾಣದ ಅಭಿಮನ್ಯು ಕೋಹರ್, ಉತ್ತರ ಪ್ರದೇಶ ನಿತಿನ್ ಬಾಲ್ಯನ, ರಾಜಸ್ಥಾನ್ ಇಂದ್ರಜಿತ್ ಪಲ್ಲಿವಾನ್, ಮಧ್ಯಪ್ರದೇಶದ ಲೀಲಾ ಧರ್ ರಜಪೂತ್, ಅರುಣ್ ಪಟೇಲ್, ಪಂಜಾಬ್ ಹರ್ಸುಲಿಂದರ್ ಸಿಂಗ್, ಹತ್ತಳ್ಳಿ ದೇವರಾಜ್, ಬಡನಪುರ ನಾಗರಾಜ್, ಬಲ್ಲೂರು ರವಿಕುಮಾರ್, ಲಕ್ಷ್ಮೀದೇವಿ ಇತರರು ಪಾಲ್ಗೊಂಡಿದ್ದರು.

# ನಾಳೆ ನಂಜುಂಡಸ್ವಾಮಿ ಜನ್ಮದಿನಾಚರಣೆ



ಗುಂಡ್ಲುಪೇಟೆ, ಕರ್ನಾಟಕ ರಾಜ್ಯ ರ?ತ ಸಂಘದ ಜಿಲ್ಲಾ ಶಾಖೆ ವತಿಯಿಂದ ರ?ತ ಚೇತನ ಹಸಿರು ಶಾಲಿನ ಹರಿಕಾರರು ಪ್ರೋ. ಎಂ ಡಿ ನಂಜುಂಡಸ್ವಾಮಿಯವರ 90 ನ್ನೆ ಜನ್ಮದಿನಾಚರಣೆಯನ್ನು ಫೆ.13 ರಂದು ಪಟ್ಟಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ತಾಲೂಕು ಅಧ್ಯಕ್ಷ ಹಂಗಳ ದೀಲಿಪ್ ತಿಳಿಸಿದರು.

ಪಟ್ಟಣದ ಹೊಸ ಪ್ರವಾಸಿ ಮಂದರಿದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ ಅವರು ಬೆಳಿಗ್ಗೆ 10–30ಕ್ಕೆ ಪಟ್ಟಣದ ಡಿ ದೇವರಾಜು ಅರಸು ಕ್ರೀಡಾಂಗಣದಿಂದ ಬೃಹತ್ ಟ್ರಾಕ್ಟರ್ ರ್ಯಾಲಿ ಮತ್ತು ಭಾವ ಚಿತ್ರ ಮೆರವಣಿಗೆ ಮತ್ತು ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿದ್ದು ನಂತರ ಸರ್ಕಾರಕ್ಕೆ ಜಿಲ್ಲಾಧಿಕಾರಿ ಮುಖಾಂತರ ನಾನಾ ಹಕ್ಕೋತ್ತಾಯಗಳ ಮನವಿ ಪತ್ರ ಸಲ್ಲಿಸಲಾಗುವುದು ಎಂದರು ರಾಜ್ಯ ಅಧ್ಯಕ್ಷ ಬಡಗಲಪುರ ನಾಗೇಂದ್ರ ರ?ತ ಸಂಘದ ಗೌರವಾಧ್ಯಕ್ಷ ಚಾಮರಾಸ ಮಾಲೀ ಪಾಟೀಲ್ ರ?ತ ಸಂಘದ ಕಾರ್ಯಧ್ಯಕ್ಷ ಎ ಎಂ ಮಹೇಶ್ ಪ್ರಭು.ಜೋತಿಗೌಡನಪುರ ಸಿದ್ದರಾಜು. ಜೆ.ಎಂ.ವೀರ ಸಂಗಯ್ಯ.ಎಂ ಡಿ.ವಂಸತ ಕುಮಾರ್. ಶಿವಾನಂದ ಕುಗ್ವೆ.ಕೆಂಪುಗೌಡ್ರು.ಪ್ರಸನ್ನ ಎಸ್‌ಗೌಡರು. ಹೊಸಕೋಟೆ ಬಸವರಾಜ್ ಬಾಗವಹಿಸಿಲಿದ್ದಾರೆ ಎಂದರು

ಜಿಲ್ಲಾ ಮತ್ತು ತಾಲೂಕು ಗೌರವಾನ್ವಿತ ರೈತ ಬಂಧುಗಳು ತಾಲೂಕು ಪದಾಧಿಕಾರಿಗಳು. ಯುವ ಘಟಕದ ಪದಾಧಿಕಾರಿಗಳು. ರ?ತ ಸಂಘಯ ಮಹಿಳಾ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಎಂದು ಮನವಿ ಮಾಡಿದರು ಈ ಸಂದರ್ಭದಲ್ಲಿ ಜಿಲ್ಲಾ ಕಾಯಂ ಸದಸ್ಯ ಹೊನ್ನೇಗೌಡನಹಳ್ಳಿ ಶಿವಮಲ್ಲು.ಜಿಲ್ಲಾ ಉಪಾಧ್ಯಕ್ಷ ಮಾಧು. ಬೋಮ್ಮನಹಳ್ಳಿ ಲೋಕೇಶ್. ಕುಮಾರಸ್ವಾಮಿ. ಹಕ್ಕಲಪುರ ಲೋಕೇಶ್. ಮಳವಳ್ಳಿ ಬಸವೇಶ್ವರ ಇನ್ನೂ ಇತರರು ಹಾಜರಿದ್ದರು

ಮೊದಲ ಪುಟದಿಂದ

## ಹರಿದು ಬರಲಿದೆ ಭಕ್ತಸಾಗರ

**ಹರಿದುಬರುತ್ತಿದೆ. ಪ್ರತಿವರ್ಷದಂತೆ ಈ ವರ್ಷವೂ ಶ್ರದ್ಧಾಭಕ್ತಿಯಿಂದ ಶಿವರಾತ್ರಿ ಆಚರಣೆಗೆ ಮಹದೇಶ್ವರ ಬೆಟ್ಟ ಸಜ್ಜಾಗಿದೆ. ಮಾದಪ್ಪನ ಸನ್ನಿಧಿಯಲ್ಲಿ ಶಿವರಾತ್ರಿ ಆಚರಣೆ ಮಾಡುವುದೆಂದರೆ ಭಕ್ತರಿಗೆ ಎಲ್ಲಿಲ್ಲದ ಉತ್ಸಾಹ. ವಯಸ್ಸಿನ ಬೇಧವಿಲ್ಲದೆ ಮಹಿಳೆಯರು ಮಕ್ಕಳೆನ್ನದೇ ಸಹಸ್ರಾರು ಭಕ್ತರು ಕಾಲ್ನಡಿಗೆಯಲ್ಲೇ ಆಗಮಿಸುತ್ತಿದ್ದಾರೆ. ಕೋಲಾರ, ಬೆಂಗಳೂರು, ರಾಮನಗರ, ಚನ್ನಪಟ್ಟಣ, ಕನಕಪುರ, ಹಲಗೂರು, ಮಳವಳ್ಳಿ, ಮಂಡ್ಯ ಹೀಗೆ ನಾನಾ ಕಡೆಯಿಂದ ಕಾಡುಮೇಡು ಸುತ್ತಿ ಭಕ್ತರು ಮಾದಪ್ಪನ ಬೆಟ್ಟದತ್ತ ಧಾವಿಸುತ್ತಿದ್ದಾರೆ. ಜೀವಭಯ ಲೆಕ್ಕಿಸದೇ ಚಾಮರಾಜನಗರ ಜಿಲ್ಲೆಯ ಗಡಿ ಭಾಗದಲ್ಲಿ ಹರಿಯುವ ಕಾವೇರಿ ನದಿ ದಾಟಿ ಆಗಮಿಸುತ್ತಿದ್ದಾರೆ. ನೀರಿನ ಸೆಳೆತ ಇರುವು ದರಿಂದ ನದಿಯ ಎರಡೂ ದಡಗಳಿಗೆ ಹಗ್ಗ ಕಟ್ಟಿ ಹಗ್ಗ ಹಿಡಿದು ನದಿ ದಾಟಿ ಸಹಸ್ರಾರು ಭಕ್ತರು ಮಾದಪ್ಪನ ಸನ್ನಿಧಿಗೆ ಬರುತ್ತಿದ್ದಾರೆ. ಆದರೆ ಭಕ್ತರ ರಕ್ಷಣೆಗೆ ಸಮರ್ಪಕ ವ್ಯವಸ್ಥೆ ಇಲ್ಲದಿರುವುದು ಸಮಸ್ಯೆ ಆಗಿದೆ.**

## ಕೈ ಶಾಸಕರ ವಿದೇಶ ಪ್ರವಾಸ

ಪ್ರವಾಸ ಬಗ್ಗೆ ಮಾಧ್ಯಮಗಳಲ್ಲಿ ಸುದ್ದಿ ಪ್ರಸಾರವಾದ ಬೆನ್ನಲ್ಲೇ ಕೆಲವು ಶಾಸಕರಿಗೆ ಸುರ್ಜೇವಾಲಾ ಕರೆ ಮಾಡಿದ್ದರು. ಆದರೆ, ಸುರ್ಜೇವಾಲಾ ಮಾತು ಕೇಳಿ ಐದಾರು ಶಾಸಕರಷ್ಟೇ ವಿದೇಶ ಪ್ರವಾಸ ರದ್ದು ಮಾಡಿದ್ದಾರೆ. ಉಳಿದ ಶಾಸಕರು ಫಾರಿನ ಟೂರ್‌ಗೆ ಹೋಗಲು ಭರ್ಜರಿ ಸಿದ್ಧತೆ ನಡೆಸಿದ್ದಾರೆ. ಫೆಬ್ರವರಿ 15ರಿಂದ ಮಾರ್ಚ್ 3ರ ತನಕ ಆಸ್ಟ್ರೇಲಿಯಾ, ನ್ಯೂಜಿಲ್ಯಾಂಡ್ ಪ್ರವಾಸ ಕೈಗೊಳ್ಳಲಿದ್ದಾರೆ.

## ಭಕ್ತರಿಗೆ ಚಿರತೆ ದಾಳಿ ಆತಂಕ

ಪರಚಿ ಗಾಯವಾಗಿದೆ. ಪ್ರಾಣಾಪಾಯದಿಂದ ಬಚಾವ್ ಆಗಿದ್ದಾನೆ. ಅರಣ್ಯ, ಪೊಲೀಸ್ ಹಾಗು ಮಹದೇಶ್ವರ ಬೆಟ್ಟ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ಸಿಬ್ಬಂದಿ ಒಳಗೊಂಡ ತಲಾ ನಾಲ್ವರ ತಂಡ ರಚಿಸಿ ಪ್ರತಿ ಕಿಲೋಮೀಟರ್‌ಗೆ ಒಂದು ತಂಡದಂತೆ ನಿಯೋಜಿಸಲಾಗಿದೆ. ಅಲ್ಲದೇ ಡ್ರೋನ್ ಕ್ಯಾಮೆರಾದ ಮೂಲಕ ವನ್ಯ ಪ್ರಾಣಿಗಳ ಚಲನವಲನಗಳ ಮೇಲೆ ನಿಗಾ ವಹಿಸಲಾಗಿದೆ. ಇಷ್ಟೆಲ್ಲ ಸುರಕ್ಷತಾ ಕ್ರಮ ಕೈಗೊಂಡಿದ್ದರೂ ಚಿರತೆ ದಾಳಿ ನಡೆಸಿರುವುದು ಮಾದಪ್ಪನ ಭಕ್ತರಲ್ಲಿ ಆತಂಕ ಸೃಷ್ಟಿಸಿದೆ. ಬೇರೆ ಬೇರೆ ಕಡೆಗಳಲ್ಲಿ ಸೆರೆ ಹಿಡಿದ ಚಿರತೆಗಳನ್ನು ಮಹದೇಶ್ವರ ಬೆಟ್ಟದ ಅರಣ್ಯದಲ್ಲಿ ಬಿಡುಗಡೆ ಮಾಡುತ್ತಿರುವುದೇ ಚಿರತೆಗಳ ಹಾವಳಿಗೆ ಕಾರಣವಾಗಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.

## ಪತ್ರಕರ್ತರ ಪ್ರಶ್ನೆಗೆ ಸಿದ್ದು ಸಿಡಿಮಿಡಿ

ಕೇಳೋದೇ ಇಲ್ಲವಾ ಎಂದು ಕಿಡಿಕಾರಿದರು. ಡಿಕೆ ಸುರೇಶ್ ಮಾತಾಡಿದ್ದರೆ ಅವ್ರನ್ನೇ ಕೇಳಿ, ನನಗೆ ಯಾಕೆ ಕೇಳ್ತೀರಾ? ನಾನು ಹೈಕಮಾಂಡ್ ಹೇಳಿದಂತೆ ಕೇಳೋನು ಎಂದು ಹೇಳಿದರು. ಬಜೆಟ್ ದಿನಾಂಕ ಘೋಷಣೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಶಿವರಾತ್ರಿ ಹಬ್ಬ ಮುಗಿದ ಮೇಲೆ ಬಜೆಟ್ ದಿನಾಂಕ ಘೋಷಣೆ ಮಾಡುವುದಾಗಿ ತಿಳಿಸಿದರು.

# ಬಾಲ್ಯ ವಿವಾಹ ತಡೆ: ಎಲ್ಲರ ಜವಾಬ್ದಾರಿ

## ಜಿಲ್ಲಾಧಿಕಾರಿ ಲಕ್ಷ್ಮೀಕಾಂತ್ ರೆಡ್ಡಿ ಹೇಳಿಕೆ । ಬಾಲ್ಯ ವಿವಾಹ ಮುಕ್ತ ಜಿಲ್ಲೆ ಕಾರ್ಯಗಾರ

ಮೈಸೂರು: ಇವತ್ತಿನ ಕಾರ್ಯಕ್ರಮದ ಮುಖ್ಯ ಉದ್ದೇಶ ಬಾಲ್ಯ ವಿವಾಹವನ್ನು ತಡೆಗಟ್ಟುವುದಾಗಿದೆ. ಬಾಳಷ್ಟು ಇಲಾಖೆ ಅಧಿಕಾರಿಗಳಲ್ಲಿ ಅದರಲ್ಲೂ ಶಿಕ್ಷಣ, ಆರೋಗ್ಯ ವಿಭಾಗ ಸೇರಿ ಎಲ್ಲರಲ್ಲೂ ಇರುವ ತಪ್ಪು ತಿಳುವಳಿಕೆ ಏನೆಂದರೆ, ಬಾಲ್ಯ ವಿವಾಹವು ಕೇವಲ ಮಹಿಳಾ ಮತ್ತು ಮಕ್ಕಳ ಕಲ್ಯಾಣ ವಿಭಾಗಕ್ಕೆ ಸಂಬಂಧಿಸಿದೆ ಎಂದು ಭಾವಿಸಿದ್ದಾರೆ. ಆದರೆ ಬಾಲ್ಯ ವಿವಾಹ ನಿರ್ಮೂಲನೆ ಕೆಲಸ ಕೇವಲ ಒಂದು ವಿಭಾಗದ ಜವಾಬ್ದಾರಿಯಲ್ಲ ಇದೊಂದು ಸಾಮೂಹಿಕ ಹಾಗೂ ಎಲ್ಲಾ ಅಧಿಕಾರಿಗಳ ಜವಾಬ್ದಾರಿಯಾಗಿದೆ ಎಂದು ಜಿಲ್ಲಾಧಿಕಾರಿ ಲಕ್ಷ್ಮೀಕಾಂತ್ ರೆಡ್ಡಿ ಹೇಳಿದರು.

ಕರ್ನಾಟಕ ಕಲಾಮಂದಿರದಲ್ಲಿ ಆಯೋಜಿಸಲಾಗಿದ್ದ ಬಾಲ್ಯ ವಿವಾಹ ಮುಕ್ತ ಜಿಲ್ಲೆ ಕಾರ್ಯಗಾರದ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಮೈಸೂರು ಶೈಕ್ಷಣಿಕವಾಗಿ ಮುಂದುವರೆದ ಜಿಲ್ಲೆಯಾಗಿದ್ದರು. 2024 ರಲ್ಲಿ 224 ಬಾಲ್ಯ ವಿವಾಹವನ್ನು ತಾವೆಲ್ಲರೂ ಸೇರಿ ತಡೆದಿದ್ದೀರಿ, ಆದರೂ ಸಹ 56 ಬಾಲ್ಯ ವಿವಾಹ ಅದರಲ್ಲೂ ಹೆಣ್ಣು ಮಕ್ಕಳಿಗೆ ನಡೆದಿರುತ್ತದೆ. ಕಳೆದ(2025) ವರ್ಷದಲ್ಲೂ ಕೂಡ 268 ಬಾಲ್ಯ ವಿವಾಹವನ್ನು ತಡೆದಿದ್ದರು, 24 ಬಾಲ್ಯ ವಿವಾಹಗಳು ನಡೆದಿವೆ. ನಾವು ಬಾಲ್ಯ ವಿವಾಹವನ್ನು ಶೂನ್ಯ ಪ್ರಮಾಣಕ್ಕೆ ತರಲು ಎಷ್ಟೇ ಪ್ರಯತ್ನಿಸಿದರು ಇನ್ನು ವಿವಾಹಗಳು ನಡೆಯುತ್ತಿರುವುದು ನಮ್ಮೆಲ್ಲರ ವೈಫಲ್ಯವೆಂದರೆ ತಪ್ಪಾಗಲಾರದು ಎಂದು ತಿಳಿಸಿದರು.

ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಪಿ.ಡಿ.ಓ ಗಳಿಗೆ ಅಥವಾ ಆರೋಗ್ಯ ವಿಭಾಗದ ಸಿಬ್ಬಂದಿಗಳಿಗೆ ಒಂದು ಗ್ರಾಮದಲ್ಲಿ ನಡೆಯುವ ಬಾಲ್ಯ ವಿವಾಹದ ಬಗ್ಗೆ ಮಾಹಿತಿ ಬಂದೇ ಬರುತ್ತದೆ ಆದರು ಅಂತಹ ವಿವಾಹಗಳನ್ನು ತಡೆಗಟ್ಟುವುದರಲ್ಲಿ ಅಥವಾ ಖಂಡಿಸುವುದರಲ್ಲಿ ನಾವು ವಿಫಲರಾಗಿದ್ದೇವೆ. ಹಾಗಾಗಿ ಇವತ್ತಿನ ಕಾರ್ಯಗಾರದಲ್ಲಿ ಮುಖ್ಯವಾಗಿ ತಮ್ಮೆಲ್ಲರಿಗೂ ತಿಳಿಸುವುದೇನೆಂದರೆ 2026 ರಲ್ಲಿ ಬಾಲ್ಯ ವಿವಾಹವನ್ನು ತಡೆಯಲು ಮೈಸೂರು ಜಿಲ್ಲೆಯಲ್ಲಿ ಒಂದು ತರಬೇತಿ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗುತ್ತಿದೆ. ಇದರಿಂದ ತಾವು ಎಲ್ಲೇ ಬಾಲ್ಯ ವಿವಾಹಗಳು ನಡೆಯುವ ಪ್ರಯತ್ನವನ್ನು ವಿಫಲ ಮಾಡಿ ಮೈಸೂರು ಜಿಲ್ಲೆಯನ್ನು ಬಾಲ್ಯ ವಿವಾಹ ಮುಕ್ತ ಜಿಲ್ಲೆಯನ್ನಾಗಿ ಮಾಡಬೇಕು ಎಂದು ತಿಳಿಸಿದರು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾದೀಶೆ ಹಾಗು ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ಉಷಾರಾಣಿ ಮಾತನಾಡಿ ಮಕ್ಕಳ ಮೇಲೆ ನಡೆಯುವ ಎಲ್ಲಾ ದೌರ್ಜನ್ಯಗಳು ಮಕ್ಕಳ ಬಾಲ್ಯವನ್ನು ಕಸಿದುಕೊಳ್ಳುವ ಒಂದು ಗಂಭೀರ ಸಾಮಾಜಿಕ ಸಮಸ್ಯೆಯಾಗಿದೆ. ಹಾಗೂ ಮಕ್ಕಳ ಶಿಕ್ಷಣ, ಆಟ, ವಿಶ್ರಾಂತಿ ಹಾಗೂ ಆರೋಗ್ಯದ ಹಕ್ಕುಗಳನ್ನು ಕಸಿದುಕೊಂಡು ಅವರ ಭವಿಷ್ಯವನ್ನು ಹಾಳು ಮಾಡುತ್ತಿದೆ ಎಂದರು.

ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ.ಕೆ.ಅಮರ್ನಾಥ್ ಮಾತನಾಡಿ ಪ್ರತಿದಿನವೂ ಬಾಲ್ಯ ವಿವಾಹ, ಅಪ್ರಾಪ್ತ ಹೆಣ್ಣು ಮಕ್ಕಳ ಮೇಲಿನ ಅತ್ಯಾಚಾರದ ಬಗ್ಗೆ ಪೊಲೀಸ್ ಠಾಣೆಗಳಲ್ಲಿ ದೂರುಗಳನ್ನು ದಾಖಲಿಸಲಾಗುತ್ತದೆ. ಆದರೂ ನಮಗೆ ಈ ವಿಷಯದ ಬಗ್ಗೆ ಅರಿವಿಲ್ಲದಂತೆ ಇರುತ್ತೇವೆ ಅಥವಾ ಆ ವಿಷಯಗಳು ತಿಳಿದಿದ್ದರು ತಿಳಿಯದ ಹಾಗೆ ಇರುತ್ತೇವೆ ಎಂದು ಹೇಳಿದರು.



### ಸಹಾಯವಾಣಿಗೆ ಕರೆ ಮಾಡಿ

**ತಮ್ಮಲ್ಲಿ ಯಾವುದೇ ರೀತಿಯ ಸಾರ್ವಜನಿಕವಾಗಿ ದೌರ್ಜನ್ಯಗಳು ಕಂಡುಬಂದರು ಮೊದಲು ದೂರನ್ನು ನೀಡಿ. ನೇರವಾಗಿ ಸಂಪರ್ಕಿಸಲು ಸಾಧ್ಯವಾಗದಿದ್ದಲ್ಲಿ ಪೊಲೀಸರ ಸಹಾಯವಾಣಿ 112 , ಮಕ್ಕಳ ಸಹಾಯವಾಣಿ 1098 ಕ್ಕೆ ಕರೆ ಮಾಡಿ ಅಥವಾ ಜಿಲ್ಲಾ ಸಹಾಯವಾಣಿ 15100 ಗೆ ಕರೆ ಮಾಡಬಹುದು ಎಂದು ತಿಳಿಸಿದರು.**

### ಅಂಗನವಾಡಿ, ಆಶಾ ಕಾರ್ಯಕರ್ತೆಯರಿಗೆ ಸನ್ಮಾನ

**ಕಾರ್ಯಾಗಾರದಲ್ಲಿ ಬಾಲ್ಯ ವಿವಾಹವನ್ನು ತಡೆದು ದೂರು ದಾಖಲಿಸಿದ ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರಿಗೆ ಸನ್ಮಾನವನ್ನು ಮಾಡಲಾಯಿತು. ಕಾರ್ಯಕ್ರಮದಲ್ಲಿ ಮೈಸೂರು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್.ಯುಕೇಶ್ ಕುಮಾರ್ ಹಾಗೂ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಎಸ್. ಮಂಜು, ಮಹಾನಗರ ಪಾಲಿಕೆಯ ಆಯುಕ್ತ ಶೇಖ್ ತನ್ವೀರ್ ಆಸಿಫ್, ಪೊಲೀಸ್ ಅಧೀಕ್ಷಕ ಮಲ್ಲಿಕಾರ್ಜುನ ಬಾಲದಂಡಿ, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ವೆಂಕಟೇಶ್, ಮಕ್ಕಳ ಸಂರಕ್ಷಣೆ ವಿಷಯ ತಜ್ಞ ಹಾಗೂ ಯುನಿಫ್ ಮಕ್ಕಳ ಸಂರಕ್ಷಣಾ ಯೋಜನೆಯ ಪ್ರಾದೇಶಿಕ ಸಂಯೋಜಕ ಕೆ. ರಾಘವೇಂದ್ರ ಭಟ್, ಮಕ್ಕಳ ರಕ್ಷಣಾ ನಿರ್ದೇಶನಾಲಯದ ನಿರ್ದೇಶಕಿ ಸಿ.ವಿ. ಸ್ನೇಹ, ಅಪರ ಜಿಲ್ಲಾಧಿಕಾರಿ ಡಾ.ಪಿ. ಶಿವರಾಜು, ಉಪ ಪೊಲೀಸ್ ಆಯುಕ್ತ ಹಾಗೂ ಅಪರಾಧ ಮತ್ತು ಸಂಚಾರಿ ವಿಭಾಗದ ಕೆ.ಎಸ್ ಸುಂದರ್ ರಾಜ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಬಿ.ಬಸವರಾಜು ಉಪಸ್ಥಿತರಿದ್ದರು.**

# ಮಾ.5ಕ್ಕೆ ಗುತ್ತಿಗೆದಾರರ ಬಾಕಿಗಾಗಿ ಬೃಹತ್ ಹೋರಾಟ



ಮೈಸೂರು: ರಾಜ್ಯ ಸರ್ಕಾರ ಗುತ್ತಿಗೆದಾರರ ಬಾಕಿ 35ಸಾವಿರ ಹಣ ಬಿಡುಗಡೆ ವಿಳಂಬ ಮಾಡುತ್ತಿರುವುದನ್ನು ಖಂಡಿಸಿ ಮಾ.5ಕ್ಕೆ ಬೆಂಗಳೂರಿನಲ್ಲಿ 30ಸಾವಿರಕ್ಕೂ ಹೆಚ್ಚಿನ ಗುತ್ತಿಗೆದಾರರು ಬೃಹತ್ ಹೋರಾಟಕ್ಕೆ ಸಜ್ಜಾಗಿದೆ.

ಈ ಸಂಬಂಧ ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಸುದ್ದಿಗೋಷ್ಠಿ ನಡೆಸಿದ ರಾಜ್ಯ ಗುತ್ತಿಗೆದಾರರ ಸಂಘದ ಅಧ್ಯಕ್ಷ ಆರ್.ಮಂಜುನಾಥ್ ಮಾತನಾಡಿ, ಗುತ್ತಿಗೆದಾರರ ಬಾಕಿ 35 ಸಾವಿರ ಕೋಟಿ ಹಣ ಬಿಡುಗಡೆಗೆ ಒತ್ತಾಯಿಸಿ ಮುಖ್ಯಮಂತ್ರಿಗಳ ಗಮನಸೆಳೆಯಲು ರಾಜ್ಯವ್ಯಾಪಿ ಶಾಂತಿಯುತ ಹೋರಾಟ ರೂಪಿಸಲಾಗಿದೆ. ಹಣ ಬಿಡುಗಡೆಗೆ ವಿಳಂಬ ಮಾಡುತ್ತಿರುವ ಸರ್ಕಾರದ ನಡೆಯನ್ನು ಖಂಡಿಸಿ ಮಾ. 5ರಂದು ಬೆಂಗಳೂರಿನ ಸ್ವಾತಂತ್ರ?ಯ ಹೋರಾಟಗಾರರ ಉದ್ಯಾನದಲ್ಲಿ 30 ಸಾವಿರ ಗುತ್ತಿಗೆದಾರರು ಬೃಹತ್ ಪ್ರತಿಭಟನೆ ಮಾಡಲಿದ್ದೇವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎರಡೂವರೆ ವರ್ಷಗಳಿಂದ ಸಭೆ ಕರೆದಿಲ್ಲ. ಹಣಕಾಸು ಸಚಿವರಾಗಿರುವ ಸಿದ್ದರಾಮಯ್ಯ ಅರ್ಧಗಂಟೆ ಸಭೆ ನಡೆಸಿದರೆ ನಮ್ಮ ಬಹುತೇಕ ಸಮಸ್ಯೆಗಳು ಇತ್ಯರ್ಥವಾಗುತ್ತವೆ. ಮುಖ್ಯಕಾರ್ಯದರ್ಶಿ, ಸಚಿವರಿಗೆ ಪತ್ರ ಬರೆದರೂ ಪ್ರಯೋಜನವಾಗುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಲೋಕೋಯೋಗಿ ಇಲಾಖೆ ಸಚಿವರು ಗುತ್ತಿಗೆದಾರರ ಸಮಸ್ಯೆಗೆ ಸ್ಪಂದಿಸುತ್ತಾರೆ. ನೀರಾವರಿ ಇಲಾಖೆ ಸಚಿವರೂ ಆದ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಬಿಬಿಎಂಪಿಗೆ ಹೆಚ್ಚು ಆದ್ಯತೆ ನೀಡುತ್ತಿದ್ದಾರೆ. ನೀರಾವರಿ ಇಲಾಖೆಗೆ ಅಷ್ಟು ಆಸಕ್ತಿ ತೋರುತ್ತಿಲ್ಲ. ಈ ಸರ್ಕಾರದಿಂದ ನಯಾ ಪೈಸೆ ಅನುಕೂಲವಾಗುತ್ತಿಲ್ಲ ಎಂದು ಹೇಳಿದರು.

ಬಾಕಿ ಹಣ ಬಿಡುಗಡೆಗೆ ಹಿಂದಿನ ಬಿಜೆಪಿ ಸರ್ಕಾರಕ್ಕಿಂತ ಹೆಚ್ಚಿನ ಹಣವನ್ನು ಕೇಳುತ್ತಿದ್ದಾರೆ. ಈ ಸರ್ಕಾರದಲ್ಲಿ ಮಧ್ಯವರ್ತಿಗಳು ಹೆಚ್ಚಿದ್ದಾರೆ. ಹಿಂದಿನಂತೆ ಎಷ್ಟು ಕಮಿಷನ್ ಕೇಳುತ್ತಿದ್ದಾರೆ ಎಂದು ನಾವು ಹೇಳುವುದಿಲ್ಲ. ಇದರಿಂದ ಒಂದೂವರೆ ಲಕ್ಷ ಗುತ್ತಿಗೆದಾರರಿಗೆ ತೊಂದರೆಯಾಗಲಿದೆ ಎಂದು ಹೇಳಿದರು. ಹಳೆಯದು ಮತ್ತು ಹೊಸ ಬಿಲ್‌ಗಳು ಸೇರಿ 2021ರಿಂದ 37 ಸಾವಿರ ಕೋಟಿ ಬಾಕಿ ಇದೆ. ಉದಾಃಗೆ ಮೈಸೂರಿನ ಗುತ್ತಿಗೆದಾರರಿಗೆ 14 ಕೋಟಿ ರೂ. ಹಣ ಬಾಕಿ ಇದೆ. ಸಾಲಸೋಲ ಮಾಡಿ ಕೆಲಸ ಮಾಡಿದ್ದು, ಏನು ಮಾಡಬೇಕು ಎಂದು ಪ್ರಶ್ನಿಸಿದರು. ಬಾಕಿ ಹಣ ಬಿಡುಗಡೆ ಮಾಡದಿರುವುದರಿಂದ ಗುತ್ತಿಗೆದಾರರು ತುಂಬಾ ಒತ್ತಡದಲ್ಲಿದ್ದಾರೆ. ಸರ್ಕಾರದ ಬಳಿ ಹಣವಿಲ್ಲದೇ ಇರುವುದರಿಂದಲೇ ಬಾಕಿ ಉಳಿಸಿಕೊಂಡಿದ್ದಾರೆ ಎಂದು ತಿಳಿಯಬೇಕಾಗುತ್ತದೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಸಿದ್ದರಾಮಯ್ಯ ಅವರು ವಿರೋಧ ಪಕ್ಷದ ನಾಯಕರಾಗಿದ್ದಾಗ ಪ್ಯಾಕೇಜ್ ಮಾಡುವುದಿಲ್ಲ ಎಂದು ಹೇಳಿದ್ದರು. ಈಗ ಪ್ಯಾಕೇಜ್ ಮಾಡುತ್ತಿದ್ದಾರೆ. 10 ಜಿಲ್ಲೆ ಸೇರಿ ಒಬ್ಬರಿಗೆ ಗುತ್ತಿಗೆ ನೀಡುತ್ತಾರೆ. ನಮ್ಮ ಸರ್ಕಾರ ಬಂದರೆ ಒಂದ್ರೂಪಾಯಿ ದುಡ್ಡು ತೆಗೆದುಕೊಳ್ಳುವುದಿಲ್ಲ ಎಂದು ಹೇಳಿದ್ದರು. ಆದರೆ, ಪರಿಸ್ಥಿತಿ ವಿಪರ್ಯಾಸವಾಗಿದೆ ಎಂದು ಹೇಳಿದರು. ಜಿಲ್ಲಾಧ್ಯಕ್ಷ ಸುರೇಶ್, ರಾಜ್ಯ ಉಪಾಧ್ಯಕ್ಷರಾದ ಗುರು ಸಿದ್ದಪ್ಪ, ಕೃಷ್ಣೆಗೌಡ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆ.ರವಿ, ರಾಜ್ಯ ಖಜಾಂಚಿ ನಾಗರಾಜು ಮತ್ತಿತರರು ಗೋಷ್ಠಿಯಲ್ಲಿ ಹಾಜರಿದ್ದರು.

> **ಒಂದು ವರ್ಷ ದೊಳಗೆ ಹಣ ನೀಡ ದಿದ್ದರೆ ಬಡ್ಡಿ ಕೊಡ ಬೇಕೆಂದು ನಿಯಮ ಮಾಡಲಾಗಿದೆ. ಆದರೆ, ಕೊಡುವು ದಿಲ್ಲ. ನ್ಯಾಯಾಲಯಕ್ಕೆ ಹೋದರೂ ನಮ್ಮ ಸಮಸ್ಯೆ ಬಗೆಹರಿಯು ವುದಿಲ್ಲ. ಗಾಜಿನ ಮನೆಯಲ್ಲಿರುವ ನಾವುಗಳು ಸಾಕ್ಷ್ಯಗಳನ್ನು ಕೊಡಲಾಗುವುದಿಲ್ಲ. ಸಿಎಂ ದೊಡ್ಡ ಮನಸ್ಸು ಬಾಕಿ ಹಣವನ್ನು ಬಿಡುಗಡೆ ಮಾಡಬೇಕು.**
>
> **–ಆರ್.ಮಂಜುನಾಥ್**

ಮೊದಲ ಪುಟದಿಂದ

## 14 ಲಕ್ಷ ರೂ. ದಂಡ

ರೂಪದಲ್ಲಿ ಸಂಗ್ರಹಿಸಿದೆ. ಎಲ್ಲೆಂದರಲ್ಲಿ ತ್ಯಾಜ್ಯ ಹಾಕುವುದು 189000 ರೂ., ಮನೆ ಮನೆಗಳಿಂದ ಮಿಶ್ರ ತ್ಯಾಜ್ಯ ನೀಡುವವರಿಗೆ 13600 ರೂ., ವಾಣಿಜ್ಯ ಮನೆಗಳಿಂದ ಮಿಶ್ರ ತ್ಯಾಜ್ಯ ನೀಡುವವರಿಗೆ 66000 ರೂ., ವಲಸು ನೀರು ಹಾಗೂ ಇನ್ನಿತರೆ ದ್ರವ್ಯ ತ್ಯಾಜ್ಯವನ್ನು ರಸ್ತೆಗಳಿಗೆ ಹರಿಯಬಿಟ್ಟಿರುವುದು 9500 ರೂ., ಪ್ರಾಣಿ ತ್ಯಾಜ್ಯವನ್ನು ನಿಗಧಿತ ಸ್ಥಳದಲ್ಲಿ ವಿಲೇವಾರಿ ಮಾಡದೇ ಇರುವುದು 3500ರೂ., ಕಟ್ಟಡ ಭಗ್ನಾವಶೇಷ ತ್ಯಾಜ್ಯವನ್ನು ನಿಗಧಿತ ಸ್ಥಳದಲ್ಲಿ ವಿಲೇವಾರಿ ಮಾಡದೇ ಇರುವುದು 55000, ತೆರೆದ ಚರಂಡಿಗಳಲ್ಲಿ ತ್ಯಾಜ್ಯ ಬಿಸಾಡುವುದು 9000, ರಸ್ತೆ ಬದಿಗಳಲ್ಲಿ ಎಲೆಗಳನ್ನು ಸುಡುವುದು 700, ಪ್ಲಾಸ್ಟಿಕ್ ವಸ್ತು ಮತ್ತು ಒಣತ್ಯಾಜ್ಯ ಸುಡುವುದು 6000, ನಿಷೇಧಿತ ಏಕ ಬಳಕೆ ಪ್ಲಾಸ್ಟಾಕ್ ಬಳಸುವವರಲ್ಲಿ ಸಾರ್ವಜನಿಕರಿಗೆ 23200ರೂ., ಬೀದಿಬದಿ ವ್ಯಾಪಾರಿಗಳಿಗೆ 405000 ರೂ., ವಾಣಿಜ್ಯದಾ ರರಿಗೆ 530000 ರೂ., ಉದ್ದಿಮೆದಾರರು (ಮಾರಾಟ ಮತ್ತು ವಿತರಣೆ) 125000 ರೂ. ಸೇರಿ ಒಟ್ಟು 14.35,500 ದಂಡ ವಿಧಿಸಿರುವುದಾಗಿ ತಿಳಿಸಿದ್ದಾರೆ.

## ಯೋಜನೆಗೆ ಮನವಿ

ಕೊಡಗು ಜಿಲ್ಲೆಗೆ ಸೂಕ್ತ ರೈಲು ಸಂಪರ್ಕವಿಲ್ಲದೇ ಪ್ರಮುಖ ಪ್ರವಾಸೋದ್ಯಮ ಮತ್ತು ತೋಟಗಾರಿಕೆ ಕ್ಷೇತ್ರಗಳ ಆರ್ಥಿಕತೆಗೆ ಭಾರಿ ತೊಂದರೆಯಾಗಿದೆ. ಸಂಪೂರ್ಣವಾಗಿ ರಸ್ತೆ ಸಂಪರ್ಕದ ಮೇಲೆ ಬೆಳೆಗಾರರು ಅವಲಂಬಿತಾಗಿದ್ದಾರೆ ಎಂದು ಯದುವೀರ್ ತಿಳಿಸಿದ್ದಾರೆ.

## ಎಂಸಿಎ ಶಾಕ್

ಫ್ರಾಂಚೈಸಿ ಮನವಿ ಮಾಡಿತ್ತು. ಆದರೆ ಮುಂಬೈ ಇಂಡಿಯನ್ಸ್ ಫ್ರಾಂಚೈಸಿ ಈ ಮೈದಾನವನ್ನ ಬಳಕೆ ಮಾಡಿಕೊಳ್ಳುವ ಸಾಧ್ಯತೆಯಿದೆ. ಹೀಗಾಗಿ ಆರ್‌ಸಿಬಿಗೆ ಎನ್‌ಓಸಿ ನಿರಾಕರಿಸಿದೆ ಎಂದು ಮೂಲಗಳು ತಿಳಿಸಿವೆ.

## ಮಾ.9ರಂದು ಚರ್ಚೆ

ದಿನ ಚರ್ಚೆ ನಡೆಸುವ ಸಾಧ್ಯತೆಯಿದೆ. ಕಾಂಗ್ರೆಸ್ ಮಂಗಳವಾರ ಅವಿಶ್ವಾಸ ನಿರ್ಣಯ ಮಂಡಿಸಿದೆ. ನಿರ್ಣಯಕ್ಕೆ 118 ಸಂಸದರು ಸಹಿ ಹಾಕಿದ್ದಾರೆ.

## ಕೈ ಶಾಸಕರ ವಿದೇಶ ಪ್ರವಾಸ

**ದುಡ್ಡಿನಲ್ಲಿ ಹೋಗ್ತಾ ಇದ್ದಾರೆ.ಶಾಸಕರು ಫಾರಿನ್ ಟ್ರಿಪ್ ಹೋಗೋದು ನನ್ನ ಗಮನಕ್ಕೆ ಇಲ್ಲ ಎಂದು ತಿಳಿಸಿದರು.**

# ನಾಳೆಯಿಂದ ಅದ್ದೂರಿ ಹಂಪಿ ಉತ್ಸವ



ಐತಿಹಾಸಿಕ ವಿಜಯನಗರ ಸಾಮ್ರಾಜ್ಯದ ರಾಜಧಾನಿಯಾಗಿದ್ದ ಹಂಪಿಯಲ್ಲಿ ಫೆಬ್ರವರಿ 13, 14 ಮತ್ತು 15ರಂದು 'ಹಂಪಿ ಉತ್ಸವ?2026' ಅದ್ದೂರಿಯಾಗಿ ಜರುಗಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹ್ಮದ್ ಖಾನ್ ತಿಳಿಸಿದರು.

ಬುಧವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಬಾರಿಯ ಉತ್ಸವದ ಸಿದ್ಧತೆಗಳು ಹಾಗೂ ವಿಶೇಷತೆಗಳ ಕುರಿತು ವಿವರವಾದ ಮಾಹಿತಿ ನೀಡಿದರು.

ಫೆಬ್ರವರಿ 13ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಸಾಂಸ್ಕೃತಿಕ ವೈಭವಕ್ಕೆ ಚಾಲನೆ ನೀಡಲಿದ್ದಾರೆ.

ಉದ್ಘಾಟನೆಯ ದಿನದಂದು ಮುಖ್ಯಮಂತ್ರಿಗಳು ಹಂಪಿಯಲ್ಲೇ ವಾಸ್ತವ್ಯ ಹೂಡಲಿದ್ದು, ಮರುದಿನ ಹಾವೇರಿಯಲ್ಲಿ ನಡೆಯಲಿರುವ ಕಾರ್ಯಕ್ರಮಕ್ಕೆ ತೆರಳಲಿದ್ದಾರೆ.

ಹಂಪಿ ಉತ್ಸವದ ಅಂಗವಾಗಿ ಆರು ವೇದಿಕೆಗಳಲ್ಲಿ ಸಾಂಸ್ಕೃತಿಕ ಸೌರಭ ನಡೆಯಲಿದೆ. ಉತ್ಸವಕ್ಕಾಗಿ ಎಂ.ಪಿ. ಪ್ರಕಾಶ್ ವೇದಿಕೆ, ಶ್ರೀಕೃಷ್ಣದೇವರಾಯ (ಎದುರು ಬಸವಣ್ಣ) ವೇದಿಕೆ, ಸಾಸಿವೆಕಾಳು ಗಣಪ ವೇದಿಕೆ, ವಿದ್ಯಾರಣ್ಯ (ಮಹನಾವಮಿ ದಿಬ್ಬ) ವೇದಿಕೆ ಹಾಗೂ ಧ್ವನಿ ಮತ್ತು ಬೆಳಕು ಕಾರ್ಯಕ್ರಮ ವೇದಿಕೆ ಸೇರಿದಂತೆ ಒಟ್ಟು ಆರು ಬೃಹತ್ ವೇದಿಕೆಗಳನ್ನು ಸಿದ್ಧಪಡಿಸಲಾಗಿದೆ.

ಎಂ.ಪಿ. ಪ್ರಕಾಶ್ ವೇದಿಕೆ ಪ್ರಧಾನ ವೇದಿಕೆಯಾಗಿದ್ದು, ಇಲ್ಲಿ 50,000 ಆಸನಗಳ ವ್ಯವಸ್ಥೆ ಮಾಡಲಾಗಿದೆ. ಈ ಬಾರಿ 8 ರಿಂದ 10 ಲಕ್ಷ ಜನರು ಸೇರುವ ನಿರೀಕ್ಷೆಯಿದ್ದು, 15 ಸಾವಿರ ಆಸನಗಳನ್ನು ಕಾಯ್ದಿರಿಸಲಾಗಿದೆ.

### ತಾರಾ ಮೆರುಗು

ಈ ಬಾರಿಯ ಉತ್ಸವದಲ್ಲಿ ಸ್ಯಾಂಡಲ್ವುಡ್ನ ಖ್ಯಾತ ಕಲಾವಿದರು ಪಾಲ್ಗೊಳ್ಳಲಿದ್ದಾರೆ. ಪ್ರಮುಖವಾಗಿ ಹ್ಯಾಟ್ರಿಕ್ ಹೀರೋ ಶಿವರಾಜ್ ಕುಮಾರ್, ಅಶ್ವಿನಿ ಪುನೀತ್ ರಾಜ್ಕುಮಾರ್, ಗೋಲ್ಡನ್ ಸ್ಟಾರ್ ಗಣೇಶ್, ರಕ್ಷಿತ್ ಶೆಟ್ಟಿ, ರಚಿತಾ ರಾಮ್, ಡಾಲಿ ಧನಂಜಯ್ ಮತ್ತು ಬಿಗ್ ಬಾಸ್ ವಿಜೇತ ಗಿಲ್ಲಿನಟ ಭಾಗವಹಿಸುವುದು ಖಚಿತವಾಗಿದೆ ಎಂದು ತಿಳಿಸಿದರು.

### ವಿಶೇಷ ಆಕರ್ಷಣೆಯ ವಿದ್ಯುತ್ ದೀಪಾಲಂಕಾರ

ಹಂಪಿ ಹಾಗೂ ಸುತ್ತಮುತ್ತಲಿನ ಸುಮಾರು 50 ಕಿಲೋಮೀಟರ್ ವ್ಯಾಪ್ತಿಯಲ್ಲಿ ವಿಶೇಷ ಲೈಟಿಂಗ್ ವ್ಯವಸ್ಥೆ ಮಾಡಲಾಗಿದೆ. ಇಡೀ ಹಂಪಿ ವಿದ್ಯುತ್ ದೀಪಗಳಿಂದ ಝಗಮಗಿಸುತ್ತಿದೆ.

ಹಂಪಿ ಉತ್ಸವವನ್ನು ವಿಜೃಂಭಣೆಯಿಂದ ಆಚರಿಸುವ ನಿಟ್ಟಿನಲ್ಲಿ ಯಾವುದೇ ಅಹಿತಕರ ಘಟನೆಗಳು ಉಂಟಾಗದಂತೆ ಭದ್ರತಾ ದೃಷ್ಟಿಯಿಂದ ಸುಮಾರು 2,000 ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಇದರಲ್ಲಿ ಒಬ್ಬ ಎಸ್ಪಿ, 8 ಅಡಿಷನಲ್ ಎಸ್ಪಿ, 15 ಡಿವೈಎಸ್ಪಿ ಹಾಗೂ 61 ಇನ್ಸ್ಪೆಕ್ಟರ್‌ಗಳು ಒಳಗೊಂಡಿದ್ದಾರೆ.

### ಧ್ವನಿ ಮತ್ತು ಬೆಳಕು ಕಾರ್ಯಕ್ರಮ

ಹಕ್ಕ–ಬುಕ್ಕರ ಇತಿಹಾಸವನ್ನು ಸಾರುವ ವಿಶೇಷ ಧ್ವನಿ ಮತ್ತು ಬೆಳಕು ಕಾರ್ಯಕ್ರಮ ಆಯೋಜಿಸಲಾಗಿದೆ. ಉತ್ಸವ ಮುಗಿದ ಬಳಿಕವೂ ಈ ಕಾರ್ಯಕ್ರಮ 7 ದಿನಗಳ ಕಾಲ ಮುಂದುವರಿಯಲಿದೆ ಎಂದು ತಿಳಿಸಿದರು.

### ಉಚಿತ ಊಟದ ವ್ಯವಸ್ಥೆ

ಭಕ್ತಾದಿಗಳು ಮತ್ತು ಸಾರ್ವಜನಿಕರಿಗಾಗಿ ಕೃಷ್ಣ ದೇವಸ್ಥಾನದ ಬಳಿ ಸರ್ಕಾರದಿಂದ ಉಚಿತ ಊಟ ಮತ್ತು ತಿಂಡಿ ವ್ಯವಸ್ಥೆ ಮಾಡಲಾಗಿದೆ.

ಉತ್ಸವಕ್ಕಾಗಿ ಸುಮಾರು 14 ರಿಂದ 15 ಕೋಟಿ ರೂಪಾಯಿ ಬಜೆಟ್ ಮೀಸಲಿಡಲಾಗಿದೆ ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ, ಸಿಇಓ ನೋಂಗ್ಜಾಯ್ ಮಹ್ಮದ್ ಅಲಿ ಅಕ್ರಂ ಷಾ, ಎಸ್ಪಿ ಜಾಹ್ನವಿ ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

### ಸ್ಥಳೀಯ ಕಲಾವಿದರಿಗೆ ಆದ್ಯತೆ

ಸ್ಥಳೀಯ ಕಲಾವಿದರ ಪಟ್ಟಿಯನ್ನೂ ಇದೇ ದಿನ ಬಿಡುಗಡೆ ಮಾಡಲಾಗಿದ್ದು, ಅವರಿಗೆ ಉತ್ಸವದ 6 ವೇದಿಕೆಗಳಲ್ಲಿ ಹೆಚ್ಚಿನ ಪ್ರೋತ್ಸಾಹ ನೀಡಿ ಕಾರ್ಯಕ್ರಮ ನೀಡಲು ಅವಕಾಶ ಕಲ್ಪಿಸಲಾಗಿದೆ.

ರಾಜ್ಯ ರೈಲ್ವೆ ಸಚಿವರು, ಕೇಂದ್ರ ರೈಲ್ವೆ ಸಚಿವರಿಗೆ ಮನವಿ ಸಲ್ಲಿಕೆ. ಸದ್ಯದಲ್ಲೇ ಸಿಎಂಗೆ ಮನವಿ

# ಚಾಮರಾಜನಗರ ರೈಲ್ವೆ ನಿಲ್ದಾಣಕ್ಕೆ ಮೂಲಸೌಕರ್ಯ ಕಲ್ಪಿಸಲು ವಿ.ಪ್ರಭಾಕರ್ ಆಗ್ರಹ



ಚಾಮರಾಜನಗರ, ಚಾಮರಾಜನಗರ ರೈಲ್ವೆ ನಿಲ್ದಾಣಕ್ಕೆ ಸಮಗ್ರ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕು, ಹೆಚ್ಚಿನ ರೈಲು ಸಂಚಾರ ಆರಂಭಿಸಬೇಕು ಎಂದು ಚಾಮರಾಜನಗರ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರು, ಡಿ.ಆರ್.ಯು.ಸಿ.ಸಿ ಸದಸ್ಯರಾದ ವಿ.ಪ್ರಭಾಕರ್ ಒತ್ತಾಯಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ರೈಲ್ವೆನಿಲ್ದಾಣದಲ್ಲಿ ವೈದ್ಯಕೀಯ ವ್ಯವಸ್ಥೆ ಯನ್ನು ಏರ್ಪಡಿಸುವುದು, ಮುಂಜಾನೆ 6.00 ಗಂಟೆಗೆ ಪ್ರತಿ ಭಾನು ವಾರ ಮೈಸೂರಿನಿಂದ ದಾದರ್ ಗೆ ಹೊರಡುವ ಶರಾವತಿ ಎಕ್ಸ್‌ಪ್ರೆಸ್ 11036 ರೈಲನ್ನು ಚಾಮರಾಜನಗರದಿಂದ ಹೊರಡುವ ಮತ್ತು ಆಗಮಿ ಸುವ ವ್ಯವಸ್ಥೆಯನ್ನು ಮಾಡುವುದು, ಚಾಮರಾಜನಗರದಿಂದ ಮೈಸೂರಿಗೆ ರಾತ್ರಿ 8.50 ಬಿಡುವ 56209 ರೈಲನ್ನು ಸಂಜೆ 6.45 ಕ್ಕೆ ವ್ಯವಸ್ಥೆ ಮಾಡಬೇಕು ಎಂದು ಒತ್ತಾಯಿಸಿದರು.

ಬೆಂಗಳೂರು ಹಾಗೂ ಚಾಮರಾಜನಗರದ ಜನತೆಯ ಬಹು ದಿನದ ಬೇಡಿಕೆಯಾದ ಚಾಮರಾಜನಗರ ಹೆಜ್ಜಾಲ ರೈಲ್ವೆ ಯೋಜನೆ ಯನ್ನು ಅತೀ ಶೀಘ್ರವಾಗಿ ಕಾರ್ಯರೂಪಕ್ಕೆ ತರಬೇಕು. ಬೆಂಗಳೂರಿನ–ಹೆಜ್ಜಾಲ ದಿಂದ–ಕೊಳ್ಳೇಗಾಲ–ಚಾಮರಾಜನಗರ–ತಾಳವಾಡಿ, ( ಬಣ್ಣಾರಿಗೆ ಸುಮಾರು 15 ಕೀ.ಮೀ ಸುರಂಗ ಮಾರ್ಗ ನಿರ್ಮಿಸಿದಲ್ಲಿ ಯಾವುದೇ ಹುಲಿ ಯೋಜನೆ, ಆನೆ ಕಾರಿಡಾರ್) ಯೋಜನೆಗಳಿಗೂ ತೊಂದರೆಯಾಗದಂತೆ ಮೇಟುಪಾಳ್ಯಂ–ಕೊಯಮತ್ತೂರು ಸೇರಬಹು ದಾಗಿದೆ ಈ ಯೋಜನೆಯನ್ನು ಸ್ಥಾಪಿಸಿದಲ್ಲಿ ಕೇರಳ, ತಮಿಳುನಾಡು, ಕರ್ನಾಟಕ ಮತ್ತು ಉತ್ತರ ಭಾರತಕ್ಕೆ ಉತ್ತಮ ಸಂಪರ್ಕವಾಗಲಿದೆ, ಸಂಜೆ 4 ಗಂಟೆಗೆ ಮೈಸೂರಿನಿಂದ–ತಂಜಾವೂರಿಗೆ ಬಿಡುವ 16232 ರೈಲನ್ನು ಚಾಮರಾಜನಗರದಿಂದ ಹೊರಡಿಸುವುದು.

ಚಾಮರಾಜನಗರದಿಂದ ಮೈಸೂರಿಗೆ 20:45 ಕ್ಕೆ ರೈಲನ್ನು ವ್ಯವಸ್ಥೆ ಮಾಡುವುದು, ಒಂದು ಬಾರಿ ಮೈಸೂರಿಗೆ ಹೋಗಿ ಬಂದಲ್ಲಿ ಅನುಕೂಲವಾಗಲಿದೆ. ಎಂದರು. ಚಾಮರಾಜನಗರದಿಂದ – ಮೈಸೂರಿನ ಮಧ್ಯ ಇರುವ ಎಲ್ಲಾ ಲೆವೆಲ್ ಕ್ರಾಸಿಂಗ್ ಗಳನ್ನು ಸಿಂಗಲ್ ಅಥವಾ ಇಂಟರ್ ಲಾಕ್ ಗೇಟ್‌ಗಳಾಗಿ ಎಲ್ ಸಿ 35 40 43 ಗಳಲ್ಲಿ ಮಾರ್ಪಡಿಸುವುದು. ಕೌವಲಂದೆಯಲ್ಲಿ ಕ್ರಾಸಿಂಗ್ ಬ್ಲಾಂಕ್ ಸ್ಟೇಷನ್ ನಿರ್ಮಿಸುವುದು.ಚಾಮರಾಜನಗರದಿಂದ ಬೆಳಿಗ್ಗೆ ಸುಮಾರು 10.40 ರಿಂದ ಮದ್ಯಾಹ್ನ 3.30 ಹಾಗೂ ಮದ್ಯಾಹ್ನ 4.00 ರಿಂದ 5.30 ರವರೆಗೆ ರೈಲು ಸಂಚಾರ ಇಲ್ಲದಿದ್ದು ಈ ಸಮಯಗಳಲ್ಲಿ 2–3 ರೈಲುಗಳ ಸಂಚಾರ ಆರಂಭಿಸಬೇಕು. ಚಾಮರಾಜನಗರದಿಂದ ಬೆಂಗಳೂರಿಗೆ ಎಂಇಎಂಯು ರೈಲು ಬಿಡಬೇಕು. ಚಾಮರಾಜನಗರದಿಂದ ಮೈಸೂರಿಗೆ ದ್ವಿಪಥ ಮಾರ್ಗ ನಿರ್ಮಾಣ ಮಾಡಬೇಕು ಎಂದರು.

ಚಾಮರಾಜನಗರದ ರೈಲ್ವೆ ನಿಲ್ದಾಣದಲ್ಲಿ ಪಿಟ್ ಲೈನ್, ಸಿಕ್ ಲೈನ್, ವಾಟರಿಂಗ್ ಪಾಯಿಂಟ್ ಸ್ಥಾಪಿಸುವುದು. ಚಾಮರಾಜನಗರಕ್ಕೆ ಬಂದು ಹೋಗುವ ಎಲ್ಲಾ ರೈಲುಗಳನ್ನು ವಿದ್ಯುತ್ ರೈಲುಗಳಾಗಿ ಮಾರ್ಪಡಿಸುವುದು. ಚಾಮರಾಜನಗರದಲ್ಲಿ ರೈಲ್ವೇ ನಿಲ್ದಾಣಕ್ಕೆ ಮಾಂಗಲ್ಯ ಕಲ್ಯಾಣ ಮಂದಿರದ ಮುಂದಿರುವ 80 ಅಡಿ ರೈಲ್ವೆ ಆಸ್ತಿಯಲ್ಲಿ ರಸ್ತೆ ಹಾಗೂ ಬೀದಿ ದೀಪದ ವ್ಯವಸ್ಥೆ ಬೇಕು. ಮರಿಯಾಲ ರೈಲ್ವೆ ಸೇತುವೆಯನ್ನು ವಾಹನ ಸಂಚಾರ ದಟ್ಟಣೆ ಇರುವುದರಿಂದ ಅಗಲೀಕರಿಸುವುದು. ಲೆವೆಲ್ ಕ್ರಾಸಿಂಗ್ ಗಳಲ್ಲಿ ರಸ್ತೆ ವಿಭಜಕಗಳನ್ನು ನಿರ್ಮಾಣ ಮಾಡುವುದು. ಗೂಡ್ಸ್ ಶೆಡ್ ಗೆ ರಸ್ತೆಯನ್ನು ನವೀಕರಿಸಿ ಶೆಲ್ಟರ್ ಅನ್ನು ನಿರ್ಮಿಸಬೇಕು, ರೈಲ್ವೆ ನಿಲ್ದಾಣದ ಸುತ್ತ ಇರುವ ರೈಲ್ವೇ ಆಸ್ತಿಯಲ್ಲಿ ಅನೈತಿಕ ಚಟುವಟಿಕೆ ಹಾಗೂ ಹಂದಿಗಳ ಹಾವಳಿ ಹೆಚ್ಚಾಗಿದ್ದು ಸುತ್ತ ತಡೆಗೋಡೆ ನಿರ್ಮಿಸಿ ರೈಲ್ವೆ ಆಸ್ತಿಯನ್ನು ರಕ್ಷಿಸಬೇಕೆಂದು ಒತ್ತಾಯಿಸಿದರು. ಈ ಸಂಬಂಧವಾಗಿ ರಾಜ್ಯ ರೈಲ್ವೆ ಸಚಿವರಾದ ವಿ.ಸೋಮಣ್ಣ ಹಾಗೂ ಕೇಂದ್ರ ರೈಲ್ವೆ ಸಚಿವರಾದ ಅಶ್ವಿನ್ ವೈಷ್ಣನ್ ಅವರಿಗೆ ಮನವಿ ಸಲ್ಲಿಸಲಾಗಿದ್ದು, ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಗುತ್ತದೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಚಾಮರಾಜನಗರ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಖಜಾಂಚಿ ಸಿ.ಎ.ನಾರಾಯಣ, ಗೌರವ ಕಾರ್ಯದರ್ಶಿ ಎನ್.ಪ್ರಸಾದ್, ಉಪಾಧ್ಯಕ್ಷ ಬಿ.ಕೆ.ಪ್ರಕಾಶ್, ಸದಸ್ಯ ಎಸ್.ಬಸವರಾಜು ಹಾಜರಿದ್ದರು.

## ಕನ್ನಡ ರಸಪ್ರಶ್ನೆ ಸ್ಪರ್ಧೆ

ಮೈಸೂರು: ಗೋಕುಲಂ 3 ನೇ ಹಂತದಲ್ಲಿನ ಕನಸು ರಂಗ ತಂಡದ ವತಿಯಿಂದನಮ್ಮ್ ದೇಶದ ಧರ್ಮ, ಸಂಸ್ಕೃತಿ, ಪುರಾಣಗಳು ಮತ್ತು ಸಾಹಿತ್ಯ, ಕನ್ನಡ ಸಂಗೀತ, ಕನ್ನಡ ಜಾನಪದ ಲೋಕ, ಇಡೀ ವಿಶ್ವದ ಕ್ರೀಡೆಗಳು ಕುರಿತಂತೆ ಕನ್ನಡ ರಸಪ್ರಶ್ನೆ ಸ್ಪರ್ಧೆ ಆಯೋಜಿಸಲಾಗಿದೆ ಎಂದು ತಂಡದ ಮುಖ್ಯಸ್ಥ ಪಿ.ಶ್ರೇಯಸ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಪ್ರವೇಶ ಶುಲ್ಕ 200 ರೂ.ಗಳಾಗಿವೆ. ಹೆಚ್ಚಿನ ಮಾಹಿತಿಗೆ ದೂ. 97392 72627 ನ್ನು ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದರು. ಡಾ. ಪ್ರಶಾಂತ್ ಇದ್ದರು.




## ಬಿಜೆಪಿ ಪ್ರಾಥಮಿಕ ಸದಸ್ಯತ್ವಕ್ಕೆ ಸುರೇಶ್ ನಾಯಕ ರಾಜೀನಾಮೆ



ಚಾಮರಾಜನಗರ: ನಗರಸಭಾ ಮಾಜಿ ಅಧ್ಯಕ್ಷ ಸುರೇಶ್ ನಾಯಕ ಬಿಜೆಪಿ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ.

ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೂಡ್ನಾಕೂಡು ಪ್ರಕಾಶ್ ಅವರಿಗೆ ರಾಜೀನಾಮೆ ಪತ್ರ ಸಲ್ಲಿಸಿದರು. ಪಕ್ಷದಲ್ಲಿ ನನಗೆ ಯಾವುದೇ ವಿಧವಾದ ಸೂಕ್ತಸ್ಥಾನ ಕೊಟ್ಟಿಲ್ಲದಿರುವುದರಿಂದ ಮನನೊಂದು ಪಕ್ಷದ ಪ್ರಾಥಮಿಕ ಸದಸ್ಯತ್ವ ಸ್ಥಾನಕ್ಕೆ ರಾಜೀನಾಮೆ ಕೊಡುವುದಾಗಿ ಕಾರಣಗಳನ್ನು ನೀಡಿದ್ದಾರೆ.

# ಜೀತಪದ್ದತಿ: ನಿರ್ಮೂಲನೆಯಾಗಲಿ

## ಗ್ರಾಮ ಮಟ್ಟದಲ್ಲೇ ನಿಗಾವಹಿಸುವಂತೆ ನ್ಯಾ. ಸವಿತಾ ಸೂಚನೆ

ರಾಮನಗರ: ಜಿಲ್ಲೆಯಲ್ಲಿ ಜೀತ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆಗೆ ಗ್ರಾಮ ಮಟ್ಟದ ಅಧಿಕಾರಿಗಳು ಸೇರಿದಂತೆ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಸಾರ್ವಜನಿಕರ ಸಹಕಾರದಲ್ಲಿ ಶ್ರಮಿಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರೂ ಆಗಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕರದ ಸದಸ್ಯ ಕಾರ್ಯದರ್ಶಿ ಸವಿತಾ.ಪಿ.ಆರ್. ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಸಹಯೋಗದೊಂದಿಗೆ ಜೀತ ಪದ್ಧತಿ ನಿರ್ಮೂಲನಾ ದಿನಾಚರಣೆ ಮತ್ತು ಜೀತಪದ್ಧತಿ ನಿಷೇದಾಧಿಕಾರಿಗಳಿಗೆ ಆಯೋಜಿಸಲಾಗಿದ್ದ ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಮಾತನಾಡಿದರು. ಜೀತ ಪದ್ದತಿ ಅನಿಷ್ಠ ಪದ್ದತಿಗಳಲ್ಲಿ ಒಂದು. ಈ ಪದ್ದತಿಯ ನಿರ್ಮೂಲನೆಯನ್ನು ಗ್ರಾಮ ಮಟ್ಟದಲ್ಲೇ ನಿಗಾವಹಿಸಿ ತಡೆಯಬೇಕಾಗಿದೆ ಎಂದರು.

ಗ್ರಾಮ ಮಟ್ಟದ ಅಧಿಕಾರಿಗಳು ಜವಾಬ್ದಾರಿಯುತವಾಗಿ ಹಾಗೂ ಸಂಪೂರ್ಣವಾಗಿ ತಮ್ಮನ್ನು ತೊಡಗಿಸಿಕೊಳ್ಳಬೇಕಾಗಿದೆ. ಇಟ್ಟಿಗೆ ಭಟ್ಟಿ ಕೇಂದ್ರಗಳು, ಕೋಳಿ ಸಾಕಾಣಿಕಾ ಕೇಂದ್ರಗಳು, ರೇ?ನೂಲು ಬಿಚ್ಚುವ ಕೇಂದ್ರಗಳು, ಹೋಟೆಲ್‌ಗಳು, ತೋಟದ ಮನೆಗಳು ಮತ್ತು ಗಣಿಗಾರಿಕೆ ನಡೆಯುವ ಪ್ರದೇಶಗಳು, ಕಲ್ಲು ಕ್ವಾರಿಗಳಲ್ಲಿ ಕೆಲಸ ಮಾಡುವವರನ್ನು ಸೂಕ್ಷ್ಮವಾಗಿ ಗಮನಿಸಬೇಕು, ಜೀತ ಪದ್ದತಿಯ ಆಚರಣೆ ಕಂಡು ಬಂದರೆ ತಕ್ಷಣ ನಿರ್ಧಾಕ್ಷಿಣ್ಯ ಕ್ರಮ ಕೈಗೊಳ್ಳಬೇಕು ಎಂದರು.

ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಧನರಾಜ್, ಯೋಜನಾ ನಿರ್ದೇಶಕ ಶಿವಕುಮಾರ್ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಕಂದಾಯ ಅಧಿಕಾರಿಗಳು, ಆರಕ್ಷಕ ನಿರೀಕ್ಷಕರು ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು.



### ಮನುಷ್ಯ ವಸ್ತುವಲ್ಲ

ಮನು?ನನ್ನು ವಸ್ತು ಅಲ್ಲ. ಆದರೆ ಜೀತ ಪದ್ದತಿಯಲ್ಲಿ ಮನುಷ್ಯನನ್ನು ವಸ್ತುವಿನಂತೆ ಮಾರಾಟ ಮಾಡುವ, ಕೊಳ್ಳುವುದು ನಡೆಯುತ್ತದೆ. ಮಾನವನು ಗೌರವವಿಲ್ಲದೆ, ಘನತೆಯಿಲ್ಲದೇ ಬದುಕಬೇಕಾಗುತ್ತದೆ. ಸಂವಿಧಾನದ 21ನೇ ವಿಧಿ ಜೀವಿಸುವ ಮತ್ತು ಸ್ವಾತಂತ್ರ್ಯದ ಹಕ್ಕು ಹಾಗೂ 23ನೇ ವಿಧಿಯು ಶೋ?ಣೆಯ ವಿರುದ್ಧದ ಹಕ್ಕಿನ ಮೂಲಕ ದೇಶದ ಜನರಿಗೆ ಗೌರವಯುತ ಬದುಕನ್ನು ಕಲ್ಪಿಸಿದೆ. ಜೀತ ಕಾರ್ಮಿಕ ಪದ್ಧತಿ (ರದ್ಧತಿ) ಕಾಯ್ದೆ 1976 ಸೇರಿದಂತೆ ವಿವಿಧ ಕಾನೂನುಗಳನ್ನು ಜಾರಿಗೊಳಿಸಿದೆ. ಜೀವನದ ಉನ್ನತಿಗೆ ಹಾಗೂ ತೊಂದರೆಗಳಿಂದ ತಪ್ಪಿಸಿಕೊಳ್ಳಲು ಪ್ರತಿಯೊಬ್ಬರೂ ಕಾನೂನಗಳನ್ನು ತಿಳಿದುಕೊಳ್ಳಬೇಕು. ಜೀತ ಪದ್ದತಿಗೊಳಗಾದವರನ್ನು ಜೀತದಿಂದ ಮುಕ್ತಗೊಳಿಸಿ, ಪರಿಹಾರ ಹಾಗೂ ಪುನರ್ವಸತಿ ಕಲ್ಪಿಸಬೇಕು. ಸರ್ಕಾರಿ ಸೌಲಭ್ಯಗಳ ಪ್ರಯೋಜನ ಒದಗಿಸಬೇಕು. ಕಾನೂನು ಸೇವಾ ಪ್ರಾಧಿಕಾರದಿಂದ ಉಚಿತ ಕಾನೂನು ನೆರವು ನೀಡಲಾಗುವುದು ಎಂದು ಮಾಹಿತಿ ನೀಡಿದರು.

### ಕಾನೂನು ಇದೆ – ಬಿನೋಯ್

ಉಪ ವಿಭಾಗಾಧಿಕಾರಿ ಬಿನೋಯ್ ಮಾತನಾಡಿ, ಅವರು ಜೀತ ಕಾರ್ಮಿಕ ಪದ್ಧತಿ ನಿರ್ಮೂಲನಾ ಹೋರಾಟಗಳ ಇತಿಹಾಸ, ಕಾಯ್ದೆ ಅನು?ಾನ ಕುರಿತಂತೆ ಮಾತನಾಡಿದರು. ಜೀತ ಪದ್ದತಿ ಕಾನೂನಿ ಪ್ರಕಾರ ಅಪರಾಧ ಎಂದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ನಾಗೇಂದ್ರ ಅವರು ಜೀತ ಪದ್ಧತಿ ನಿರ್ಮೂಲನಾ ಕಾರ್ಯಾಚರಣೆ, ಕಾಯ್ದೆಗಳಡಿ ಜೀತ ವಿಮುಕ್ತರ ಪುನರ್ವಸತಿ, ಸರ್ಕಾರಿ ಸೌಲಭ್ಯಗಳ ಕುರಿತು ಮಾತನಾಡಿದರು.

ಬಂಡೀಪುರದಲ್ಲಿ ಮೂರು ದಿನಗಳ ಕಾಲ ಜಾಗತಿಕ ಬಿಗ್ ಕ್ಯಾಟ್ ಶೃಂಗಸಭೆ

## 3 ದೇಶಗಳ 44 ಪ್ರತಿನಿಧಿಗಳು ಭಾಗಿ



ಗುಂಡ್ಲುಪೇಟೆ: ಬಂಡೀಪುರದಲ್ಲಿ ಮೂರು ದಿನಗಳ ಕಾಲ ಜಾಗತಿಕ ಬಿಗ್ ಕ್ಯಾಟ್ ಶೃಂಗಸಭೆ ನಡೆಯುತಿದ್ದು ಇದಕ್ಕೆ 23 ದೇಶಗಳಿಂದ 44 ಪ್ರತಿನಿಧಿಗಳು ಆಗಮಿಸಿದ್ದು ಕೇಂದ್ರ ಸರ್ಕಾರ 148 ಕೋಟಿ ಈ ಶೃಂಗಸಭೆ ಗೆ ವ್ಯಯ ಮಾಡುತಿದ್ದು ಜನರ ಹಣ ವ್ಯರ್ಥವಾಗಿ ಹರಿ?ಉಹೋಗುತ್ತಿದೆ ಎಂದು ಸಾಮೂಹಿಕ ನಾಯಕತ್ವದ ರೈತಸಂಘದ ಜಿಲ್ಲಾಧ್ಯಕ್ಷ ಹೊನ್ನೂರು ಪ್ರಕಾಶ್ ಮತ್ತು ಮೈಸೂರಿನ ರೈತ ಮುಖಂಡ ಮಂಜು ಕಿರಣ್ ಬಂಡೀಪುರಕ್ಕೆ ತೆರಳಲು ಯತ್ನಿಸಿದಾಗ ಪಟ್ಟಣದ ಹಳೆ ಪ್ರವಾಸಿ ಮಂದಿರದ ಸರ್ಕಲ್ ಬಳಿ ಪೊಲೀಸರು ಬಂಧಿಸಿ ತೆರಕಣಾಂಬಿ ಪೊಲೀಸ್ ಠಾಣೆಗೆ ಕೊಂಡೋಯ್ದರು ನಂತರ ಶೃಂಗಸಭೆ ಗೆ ಬಂದಿದ್ದವರು ತೆರಳಿದ ನಂತರ ರೈತ ಮುಖಂಡರನ್ನು ಸಂಜೆ ಬಿಡುಗಡೆ ಮಾಡಲಾಯಿತು.

ಹಳೆ ಪ್ರವಾಸಿ ಮಂದಿರದ ಬಳಿ ಜಮಾಯಿಸಿದ ರೈತಸಂಘದ ಮುಖಂಡ ಹೊನ್ನೂರು ಪ್ರಕಾಶ್ ಮಾತನಾಡಿ ಸ್ಥಳೀಯ ಸಮುದಾಯವನ್ನು ಒಕ್ಕಲೆಬ್ಬಿಸಿ ಅಭಿವೃದ್ಧಿ ಹೆಸರಲ್ಲಿ ಗಣಿಗಾರಿಕೆ, ಪ್ರವಾಸೋದ್ಯಮ ಹೆಸರಲ್ಲಿ ಖಾಸಗಿಕರಣ ಯತ್ನ, ತಂತ್ರಜ್ಞಾನದ ಹೆಸರಿನಲ್ಲಿ ವ್ಯಾಪಾರ ಮತ್ತು ಡೇಟಾ ಸಾರ್ವಭೌಮತ್ವಕ್ಕೆ ಸಮಸ್ಯೆ ಆಗಾಗಿ ಜಾಗತಿಕ ಬಿಗ್ ಕ್ಯಾಟ್ ಸಮ್ಮೇಳನಗಳು ವನ್ಯಜೀವಿಗಳ ಸಂರಕ್ಷಣೆ ಬದಲು ಸಂಘರ್ಷಕ್ಕೆ ನಾಂದಿಯಾಗುತ್ತದೆ, ಪ್ರಕೃತಿ ಮಾತೆಯನ್ನು ಹಣಕ್ಕಾಗಿ ಮಾರಿಕೊಳ್ಳುವ ಹೇಯ ಕೃತ್ಯಕ್ಕೆ ನಾಂದಿಯಾಡಲು ಹೊರಟಿರುವ ಕೇಂದ್ರ ಹಾಗೂ ರಾಜ್ಯ ಸರ್ಕಾರಕ್ಕೆ ಧಿಕ್ಕಾರ, ಯಾವುದೇ ಕಾರಣಕ್ಕೂ ಈ ಸಮಾಜ ವಿರೋಧಿ ಹಾಗೂ ಸಂವಿಧಾನ ವಿರೋಧಿ ನಡೆ ಅನುಷ್ಠಾನಕ್ಕೆ ಬರಲು ಬಿಡುವುದಿಲ್ಲ, ಇದನ್ನು ಒಂದು ಜನಾಂದೋಲನವಾಗಿ ತೆಗೆದುಕೊಂಡು ಹೋಗುವುದಾಗಿ ಹೇಳಿದರು. ರೈತ ಮುಖಂಡ ಮಂಜು ಕಿರಣ್ ಮಾತನಾಡಿದರು. ಇಷ್ಟು ವರ್ಷ ಅರಣ್ಯ ಇರಲಿಲ್ಲವೇ ಹುಲಿ ಚಿರತೆ ಅವುಗಳನ್ನು ಅವು ಸಂರಕ್ಷಣೆ ಮಾಡಿಕೊಂಡಿಲ್ಲವೇ ಇವರು ಮುಂದೆ ಸಫಾರಿ ತೆರೆಯುತ್ತಾರೆ, ಅದ್ಯಯನ ಕೇಂದ್ರ ಮಾಡುತ್ತೇವೆ ಎನ್ನುತ್ತಾರೆ ರೆಸಾರ್ಟ್ ಗಳಿಗೆ ಮುಕ್ತ ಅವಕಾಶವಾದಾಗ ಅರಣ್ಯ ನಾಶವಾಗುತ್ತದೆ ಆಗ ಕಾಡು ಪ್ರಾಣಿಗಳು ನಾಡಿನತ್ತ ಬರುತ್ತದೆ ಮಾನವ ಸಂಘರ್ಷ ಸೃಷ್ಟಿಯಾಗಿ ಮನುಷ್ಯರು ಸಾಯುತ್ತಾರೆ ಇದೆಲ್ಲಾ ಬೇಕಾ ಆಗಾಗಿ ಕಾಡನ್ನೂ ಖಾಸಗೀಕರಣ ಮಾಡುವ ಹುನ್ನಾರ ಕ್ಕೆ ನಮ್ಮ ವಿರೋಧವಿದೆ ಎಂದರು. ಈ ಸಂದರ್ಭದಲ್ಲಿ ಮಹೇಶ್ ಬರಗಿ, ಷಣ್ಮುಖಸ್ವಾಮಿ, ರಾಜು ಭೀಮನಭೀಡು, ಮಂಜುನಾಥ್, ಸಚಿನ್, ಶಶಿ ಬೇರಂಬಾಡಿ, ನಿಜಗುಣ ಮೂಡ್ನಕೂಡು, ನಾಗೇಂದ್ರ ಸೇರಿದಂತೆ ಮತ್ತಿತರರಿದ್ದರು.

ಮೊದಲ ಪುಟದಿಂದ

## ವಂದೇ ಮಾತರಂ ಕಡ್ಡಾಯ

ಭಾಷಣ ಮಾಡುವ ಮೊದಲು ಮತ್ತು ನಂತರ, ಹಾಗೆಯೇ ರಾಜ್ಯಪಾಲರ ಆಗಮನ ಮತ್ತು ಭಾಷಣಗಳ ಮೊದಲು ಮತ್ತು ನಂತರವೂ ಸೇರಿದೆ. 6 ಚರಣಗಳಿರುವ ವಂದೇ ಮಾತರಂ ಗೀತೆಯನ್ನು ಹಾಡುವುದು ಕಡ್ಡಾಯ ಈ ನಿರ್ದೇಶನವನ್ನ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು, ಸಚಿವಾಲಯಗಳು ಮತ್ತು ಸಾಂವಿಧಾನಿಕ ಸಂಸ್ಥೆಗಳಿಗೆ ಇಂಗ್ಲಿಷ್ ಮತ್ತು ಹಿಂದಿಯಲ್ಲಿ ನೀಡಲಾಗಿದೆ. ಇಲ್ಲಿಯವರೆಗೆ, ವಂದೇ ಮಾತರಂ ಹಾಡಲು ಯಾವುದೇ ಅಧಿಕೃತ ಶಿಷ್ಟಾಚಾರವಿರಲಿಲ್ಲ. ಆದರೆ ಜನ ಗಣ ಮನ ಗೀತೆಯು ರಾಗ, ಸಮಯ ಮತ್ತು ಗಾಯನದ ಬಗ್ಗೆ ಸ್ಪಷ್ಟ ನಿಯಮಗಳನ್ನ ಹೊಂದಿತ್ತು. ಹಾಡಿನ ವಿಸ್ತೃತ, ಆರು–ಚರಣಗಳ ಆವೃತ್ತಿಯನ್ನ ಇಲ್ಲಿಯವರೆಗೆ ಅಧಿಕೃತ ಕಾರ್ಯಕ್ರಮಗಳಲ್ಲಿ ಹಾಡಿರಲಿಲ್ಲ, ಆದರೆ ಈಗ ಅದನ್ನು ಕಡ್ಡಾಯಗೊಳಿಸಲಾಗಿದೆ.

## ಬಸ್ ಹರಿದು ಮಕ್ಕಳು ಸಾವು

ಕೂರಿಸಿಕೊಂಡು ಹೋಗುತ್ತಿದ್ದಾಗ ಅಜ್ ಮೋನಿ ಶಾಲೆಗೆ ಸೇರಿದ ಬಸ್ ಅಜಾಗರೂಕತೆಯಿಂದ ಬೈಕ್ ಗೆ ಡಿಕ್ಕಿ ಹೊಡೆದಿದ್ದರಿಂದ ಅಪಘಾತ ಸಂಭವಿಸಿದೆ. ಬಸ್ ಹರಿದು ಗಂಭೀರವಾಗಿ ಗಾಯಗೊಂಡಿದ್ದ ಮಕ್ಕಳ ಸ್ಥಳದಲ್ಲೇ ಮೃತಪಟ್ಟಿದ್ದಾರೆ.

## 14ಕ್ಕೆ ಎಐ ಬಳಕೆ ವಿಚಾರಸಂಕಿರಣ



ಮೈಸೂರು: ಕಡಕೊಳದಲ್ಲಿನ ಶೇಷಾದ್ರಿಪುರಂ ತಾಂತ್ರಿಕ ಸಂಸ್ಥೆ ವತಿಯಿಂದ ಫೆ.14ರಂದು ಬೆಳಿಗ್ಗೆ 9.30ಕ್ಕೆ ಕಾಲೇಜು ಸಭಾಂಗಣದಲ್ಲಿ ಅಪಾಯಕಾರಿ ವಸ್ತುಗಳ ನಿರ್ವಹಣೆಗೆ ಕೃತಕ ಬುದ್ಧಿಮತ್ತೆ ಬಳಕೆಯ ಅಗತ್ಯ ಕುರಿತು ಭಾರತ–ಅಮೆರಿಕ ತಜ್ಞರು ಪಾಲ್ಗೊಂಡಂತೆ ವಿಚಾರ ಸಂಕಿರಣ ಆಯೋಜಿಸಲಾಗಿದೆ ಎಂದು ಪ್ರಾಚಾರ್ಯ ಡಾ.ಕೆ. ಪ್ರಹ್ಲಾದ್ ರಾವ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಇದಕ್ಕೂ ಮುನ್ನ ಫೆ. 13 ರಂದು ಪೂರ್ವಭಾವಿ ಸಭೆ ಇರಲಿದೆ. ಮುಖ್ಯವಾದ ವಿಚಾರ ಸಂಕಿ ರಣ ನಡೆಯುವ ಫೆ. 14 ರಂದು ಅಮೆರಿ ಕದಿಂದ ಆಗಮಿಸಿರುವ ತಜ್ಞರು, ಹವಾಮಾನ ವೈಪರೀತ್ಯ ತಡೆಗಟ್ಟುವ ಹಿನ್ನೆಲೆಯಲ್ಲಿ ಇ– ತ್ಯಾಜ್ಯ, ಪ್ಲಾಸ್ಟಿಕ್ ಮೊದಲಾದ ಅಪಾಯಕಾರಿ ವಸ್ತುಗಳನ್ನು ಹೇಗೆ ವಿಲೇವಾರಿ ಮಾಡಬೇಕೆಂಬ ಬಗ್ಗೆ ಮಾಹಿತಿ ನೀಡಲಿದ್ದಾರೆ. ಭಾರತೀಯ ತಜ್ಞರು ಸಹಾ ಮಾಹಿತಿ ನೀಡಲಿದ್ದಾರೆ. ಎಲ್ಲ ರಿಗೂ ಉಚಿತ ಪ್ರವೇಶವಿದೆ ಎಂದು ಮಾಹಿತಿ ನೀಡಿದರು. ಫೆ.14 ರ ಜೆಎಸ್‌ಎಸ್ ತಂತ್ರಜ್ಞಾನ ಮತ್ತು ವಿಜ್ಞಾನ ವಿವಿಯ ಉಪ ಕುಲಪತಿ ಡಾ.ಎನ್.ಎನ್. ಸಂತೋಷ್ ಕುಮಾರ್, ಡಾ.ಆರ್. ವಿಶ್ವನಾಥ್ ಅತಿಥಿಗಳಾಗಿರುವರು, ನಾಡೋಜ ಡಾ. ವೂಡೆ ಪಿ. ಕೃಷ್ಣ ಅಧ್ಯಕ್ಷತೆ ವಹಿಸುವರೆಂದದರು. ಡಾ.ಶೇಷ ನಾರಾಯಣ, ಪ್ರೊ.ಕೆ.ಎನ್.ರಾಜಾರಾವ್ ಹಾಜರಿದ್ದರು.

## ರಸ್ತೆ ಸಂಚಾರ ತಡೆದು ಪ್ರತಿಭಟನೆ






ಗುಂಡ್ಲುಪೇಟೆ: ತಾಲ್ಲೂಕಿನ ಚಿಕ್ಕತುಪ್ಪೂರು ಗ್ರಾಮದಲ್ಲಿ ಮನೆಮನೆಗೆ ಶುದ್ದ ಕುಡಿಯುವ ನೀರು ಸರಬರಾಜು ಮಾಡುವ ಜಲಜೀವನ್ ಮಿಷನ್ ಯೋಜನೆ ಯಿಂದ ಪೈಪ್ ಲೈನ್ ಕೊಳಾಯಿ ಅಳವಡಿಸುದೆ ಆದರೆ ನೀರು ಮಾತ್ರ ಬರುತಿಲ್ಲ ಎಂದು ಗ್ರಾಮಸ್ಥರು ರಸ್ತೆಯಲ್ಲೇ ಮಲಗಿ ಚಾ.ನಗರ – ಗುಂಡ್ಲುಪೇಟೆ ರಸ್ತೆ ತಡೆದು ಪ್ರತಿಭಟನೆ ನಡೆಸಿದರು. ಕೇಂದ್ರ ಸರ್ಕಾರ ಮನೆಮನೆಗೆ ಕುಡಿಯುವ ನೀರು ನೀಡುವ ಉದ್ದೇಶದಿಂದ ಜೆಜಿಎಂ ಯೋಜನೆಯಲ್ಲಿ ಕೊಟ್ಯಾಂತರ ರೂ ವೆಚ್ಚದಲ್ಲಿ ಕಾಮಗಾರಿ ನಡೆಸಿ ಮನೆಮನೆಗೆ ಪೈಪ್ ಎಳೆದು ಹೋಗಿದ್ದಾರೆ ಆದರೆ ನೀರು ಮಾತ್ರ ಬರುತಿಲ್ಲ ಈ ಬಗ್ಗೆ ಜೆಜಿಎಂ ಎಇಇ ಗೆ ದೂರು ನೀಡಿದ್ದೆವು ಅದರು ಗ್ರಾಮದ ಕಡೆ ತಿರುಗಿಯೂ ನೋಡಿಲ್ಲ ಜನರ ಸಮಸ್ಯೆ ಬಗೆಹರಿಸುವ ಯತ್ನ ಮಾಡಿಲ್ಲ ಎಂದು ರೊಚ್ಚಿಗೆದ್ದ ಗ್ರಾಮಸ್ಥರು ರಸ್ತೆ ತಡೆದು ಆಕ್ರೋಶ ಹೊರಹಾಕಿದರು.

ಚಾ.ನಗರ– ಗುಂಡ್ಲುಪೇಟೆ ರಾಜ್ಯಹೆದ್ದಾರಿ ತಡೆದು ಪ್ರತಿಭಟಿಸಿದ ಹಿನ್ನಲೆ ವಾಹನ ಸಂಚಾರಕ್ಕೆ ಅಡಚಣೆಯಾಗಿ ಟ್ರಾಫಿಕ್ ಸಮಸ್ಯೆ ಸೃಷ್ಟಿಯಾಯಿತು.

## ಫೆ.15ಕ್ಕೆ ದೀಪಾರಾಧನೆ

ಮೈಸೂರು: ನಗರದ ಕನ್ನೇಗೌಡನ ಕೊಪ್ಪಲಿನ ಮರುಳೇಶ್ವರ ದೇವಸ್ಥಾನದಲ್ಲಿ ಶಿವರಾತ್ರಿ ಅಂಗವಾಗಿ ಫೆ.15ರ ಸಂಜೆ 6ಕ್ಕೆ 20 ಸಾವಿರ ದೀಪಾರಾಧನೆ ಮತ್ತ ಅಹೋರಾತ್ರಿ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ದೇವಸ್ಥಾನದ ಟ್ರಸ್ಟ್ ಅಧ್ಯಕ್ಷ ಡಾ. ಮಹದೇವಯ್ಯ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಆಸಕ್ತಿ ಇರುವವರು ಕನಿಷ್ಠ 25 ದೀಪ ಹಚ್ಚಬಹುದಾಗಿದೆ. ಈಗಾಗಲೇ ಈ ದೀಪೋತ್ಸವ ಅಂಗವಾಗಿ ಏರ್ಪಡಿಸಿದ್ದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಅಂದೇ ಸಂಜೆ 6ಕ್ಕೆ ಬಹುಮಾನ ವಿತರಿಸಲಾಗುವುದು. ಜೊತೆಗೆ, ಅಂದು ಸಂಜೆ 6 ರಿಂದ ಮಾರನೇ ದಿನದ ಬೆಳಿಗ್ಗೆ 5 ರವರೆಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿವೆ. ಇದು ಸುಮಾರು 400 ವರ್ಷಗಳ ಇತಿಹಾಸ ಹೊಂದಿರುವ ದೇವಸ್ಥಾನವಾಗಿದ್ದು, ಅಪಾರ ಸಂಖ್ಯೆಯಲ್ಲಿ ಭಕ್ತರನ್ನು ಹೊಂದಿದೆ ಎಂದು ಮಾಹಿತಿ ನೀಡಿದರು. ಪ್ರೊ.ಕೆ.ಆರ್.ರಂಗಯ್ಯ, ಡಿ.ರವಿಕುಮಾರ್, ಶೋಭ ರಮೇಶ್, ರಾಣಿ ಮಹೇಶ್ ಇದ್ದರು.




ಎಸ್‌ಪಿ ಮುತ್ತುರಾಜು ಹೇಳಿಕೆ | ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಆಯೋಜಿಸಿದ ಸಂವಾದದಲ್ಲಿ ಮಾಹಿತಿ

# ಡ್ರಗ್ಸ್ ಮುಕ್ತ ಚಾಮರಾಜನಗರ ಮಾಡುವುದು ನಮ್ಮ ಗುರಿ

ಚಾಮರಾಜನಗರ: ಮುಖ್ಯಮಂತ್ರಿಗಳು, ಗೃಹ ಸಚಿವರ ಆಶಯದಂತೆ ಚಾಮರಾಜನಗರ ಜಿಲ್ಲೆಯನ್ನು ಡ್ರಗ್ಸ್ ಮುಕ್ತ ಮಾಡುವುದು ನನ್ನ ಧ್ಯೇಯವಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮುತ್ತು ರಾಜು ಹೇಳಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಆಯೋಜಿಸಿದ್ದ ಸಂವಾದದಲ್ಲಿ ಅವರು ಭಾಗ ವಹಿಸಿ ಮಾತನಾಡಿ, ಮುಖ್ಯಮಂತ್ರಿಗಳು ಗೃಹಮಂತ್ರಿಯವರು ಒಂದೇ ಒಂದು ಆಶಯ ಎಂದರೆ ಮಾದಕದ್ರವ್ಯ ಮುಕ್ತ ಕರ್ನಾಟಕ ಮಾಡಬೇಕೆನ್ನುವುದು ಅವರ ಆಶಯವಾಗಿದ್ದು, ನಮಗೆ ಆದೇಶ ಮಾಡಿದ್ದಾರೆ. ಈ ಹಿನ್ನಲೆಯಲ್ಲಿ ಮಾದಕ ದ್ರವ್ಯ ಬೆಳೆಯೋದಾಗಲಿ, ಸಾಗಾಣಿಕೆ' ಮಾಡುವುದಾಗಲಿ, ಸೇವನೆ ಮಾಡುವುದಾಗಲಿ ಅಕ್ಷಮ್ಯ ಅಪರಾಧವಾಗಿದೆ. ಅಂತಹವರ ವಿರುದ್ಧ ಕಟ್ಟುನಿಟ್ಟಿನ ಕ್ರಮಕೈಗೊಳ್ಳುತ್ತೇವೆ ಎಂದರು.

### ನಮ್ಮ ಜಿಲ್ಲೆಯಲ್ಲಿ ಸೇವೆ ಮಾಡುತ್ತಿರುವುದು ತುಂಬಾ ಖುಷಿ

ಚಾಮರಾಜನಗರ ಜಿಲ್ಲೆಯಲ್ಲಿ ಸುಮಾರು ವರ್ಷಗಳ ಒಡನಾಟವಿದೆ. ಜಿಲ್ಲೆಯವರಾಗಿರುವುದರಿಂದ ಈ ಜಿಲ್ಲೆಯಲ್ಲಿ ಕೆಲಸ ಮಾಡುಲು ತುಂಬಾ ಖುಷಿಯಾಗುತ್ತದೆ. ಏಕೆಂದರೆ ಮಾನಸಿಕವಾಗಿ ಇದೆ ಜಿಲ್ಲೆಯವನು ಎಂಬುವುದು ಒಂದು ತೃಪ್ತಿ ಇದೆ. ಈ ಜಿಲ್ಲೆಯು ತುಂಬ ಚಿರಪರಿಚಿತವಾದ ಜಿಲ್ಲೆಯಾಗಿದ್ದು, ಹಿಂದುಳಿದ ಜಿಲ್ಲೆಯ ಜನರಿಗೆ ಒಂದು ಒಳ್ಳೆಯ ಸೇವೆ ಮಾಡುಬಹುದು, ಇಲ್ಲಿಯ ಜನರಿಗೆ ತುಂಬಾ ಹೆಚ್ಚು ಹೆಚ್ಚು ಸೇವೆ ಮಾಡುವುದುಕ್ಕೆ ಅವಕಾಶಗಳಿವೆ. ಇದು ಬಹಳ ಖುಷಿಯಾಯಿತು ಎಂದರು.




ಮಾನವ–ಪ್ರಾಣಿ ಸಂಘರ್ಷ ತಡೆಗೆ ಒತ್ತು:ಜಿಲ್ಲೆಯು ಶೇ. 50ಅರಣ್ಯ ಪ್ರದೇಶವನ್ನು ಹೊಂದಿದ್ದು..ಮಾನವ–ಪ್ರಾಣಿ ಸಂಘರ್ಷದಿಂದ ತಕ್ಷಣಕ್ಕೆ ಕಾನೂನು ಸುವ್ಯವಸ್ಥೆ ಸಮಸ್ಯೆ ಬರುತ್ತದೆ. ಅದಕ್ಕೋಸ್ಕರ ನಾವೂ ಜಿಲ್ಲಾಡಳಿತದ ಜೊತೆ, ಅರಣ್ಯ ಇಲಾಖೆಯವರ ಜೊತೆ ಅನೇಕ ಸಭೆ ಮಾಡಲಾಗಿದೆ. ಅಲ್ಲದೆ ನಮ್ಮ ಡಿಜಿ, ಐಜಿ ಅವರು ಕೂಡ ಮಾನವ–ಪ್ರಾಣಿ ಸಂಘರ್ಷದಲ್ಲಿ ಏನು ತಕ್ಷಣಕ್ಕೆ ಕ್ರಮಕೈಗೊಳ್ಳಬೇಕು, ಯಾವ ಇಲಾಖೆಯ ಜ ಜೊತೆಯೊಂದಿಗೆ ಸಹಕಾರ ತೆಗೆದುಕೊಳ್ಳಬೇಕು ಎಂದು ಒಂದು ಸ್ಟ್ಯಾಂಡಿಂಗ್ ಆರ್ಡರ್ ಕೂಡ ಇದೆ. ಪ್ರಕಾರ ಈಗಾಗಲೇ ಎಲ್ಲ ಮಾನವ– ಪ್ರಾಣಿ ಸಂಘರ್ಷ ನಿಯಂತ್ರಿಸಲು ಒತ್ತು. ನೀಡಲಾಗಿದೆ ಎಂದರು.

### ಅಂತಾರಾಜ್ಯ ಕಳ್ಳತನ ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ

ಜಿಲ್ಲೆಯು ಒಂದು ಕಡೆ ಕೇರಳ, ಮತ್ತೊಂದು ಕಡೆ ತಮಿಳುನಾಡು ಗಡಿ ಇದೆ. 6 ಅಂತರಾಜ್ಯ ಗಡಿಗಳು ಬರುತ್ತದೆ. ಮೊದಲು ಅಂತರಾಜ್ಯ ಗಡಿಗಳಿಗೆ ಹೋಗಿ ಅಲ್ಲಿ ನಿರಂತರ ಪೊಲಿಸ್ ಭದ್ರತೆ ನಿಯೋಜಿಸಲಾಗಿದೆ. ಚೆಕ್‌ಪೋಸ್ಟ್‌ಗಳಲ್ಲಿ 24 ಗಂಟೆಯೂ ತಪಾಸಣೆ ನಡೆಯುತ್ತಿದೆ. ಸಿಸಿ ಕ್ಯಾಮರ ಅಳವಡಿಸಲಾಗಿದೆ. ಅಲ್ಲಿ ಯಾವುದೇ ಅಕ್ರಮ ಸಾಗಾಟ ಆಗಬಾರದು. ಒಂದು ರಾಜ್ಯದಿಂದ ಮತ್ತೊಂದು ರಾಜ್ಯಕ್ಕೆ ಅಂತಾರಾಜ್ಯ ಕಳ್ಳತನ ಆಗಬಾರದು ಅದಕ್ಕಾಗಿ ಹೆಚ್ಚಿನ ಪ್ರಾಮುಖ್ಯತೆ ನೀಡಲಾಗಿದೆ. ಕಟ್ಟುನಿಟ್ಟಿನ ಕ್ರಮ ವಹಿಸಲಾಗಿದೆ. ಸಂವಾದದಲ್ಲಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಆರ್.ಎನ್.ಸಿದ್ದಲಿಂಗಸ್ವಾಮಿ, ಪ್ರಧಾನ ಕಾರ್ಯದರ್ಶಿ ಪ್ರಸಾದ್ ಎಸ್.ಲ್ಲಕ್ಕೂರು ಹಾಗೂ ಪದಾಧಿಕಾರಿಗಳು, ಸದಸ್ಯರು ಹಾಜರಿದ್ದರು.

# ಕೇಂದ್ರ ಬಜೆಟ್ ದೇಶದ ಅಭಿವೃದ್ಧಿಗೆ ಪೂರಕ



ಚಾಮರಾಜನಗರ : ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು 2026–27ನೇ ವರ್ಷಕ್ಕಾಗಿ ಮಂಡಿಸಿದ ಮುಂಗಡಪತ್ರ ದೇಶದ ಅಭಿವೃದ್ಧಿಗೆ ಪೂರಕವಾಗಿದೆ ಎಂದು ಪ್ರೊ.ಚಿಂತಾಮಣಿ ಅಭಿಪ್ರಾಯಪಟ್ಟರು.

ನಗರದ ರೋಟರಿ ಭವನದಲ್ಲಿ ಪ್ರತಿವರ್ಷದಂತೆ ಈ ಬಾರಿಯು ರೋಟರಿ ಸಂಸ್ಥೆಯ ಮಂಗಳವಾರದ ವಿಶೇಷ ಸಭೆಯಲ್ಲಿ ಕೇಂದ್ರ ಮುಂಗಡಪತ್ರದ ವಿಷಯ ಕುರಿತು ಮಾತನಾಡಿದ ಅವರು, ಯಾವುದೇ ಬಜೆಟ್‌ನಲ್ಲಿ ಲೋಷದೋಷಗಳು ಇದ್ದೆ ಇರುತ್ತದೆ. ಸ್ವಾತಂತ್ರ್ಯ ಭಾರತದ ಮುಂಗಡಪತ್ರ ಇತಿಹಾಸವನ್ನು ತೆಗೆದುಕೊಂಡರೆ 1947ರ ನಂತರ ಸೆಪ್ಟೆಂಬರ್ ತಿಂಗಳಲ್ಲಿ ಅಂದಿನ ಹಣಕಾಸು ಮಂತ್ರಿ ಆರ್.ಕೆ. ಷಣ್ಮುಖಂ ಚೆಟ್ಟಿ ಅವರು ಪ್ರಥಮ ಮುಂಗಡಪತ್ರ ಮಂಡಿಸಿದರು. ಅದರ ಗಾತ್ರ 159 ಕೋಟಿ ರೂಪಾಯಿಗಳ ಮಾತ್ರ ಎಂದರು.

1967–68ರ ಮುಂಗಡಪತ್ರ ಗಾತ್ರ 4751 ಕೋಟಿ ರೂಪಾಯಿಗಳು. ಈಗಿನ ಹಣಕಾಸು ಮಂಡಿಸಿದ ಮುಂಗಡಪತ್ರ ಗಾತ್ರ 53 ಲಕ್ಷ 65 ಸಾವಿರದ 315 ಕೋಟಿ ರೂ ಆಗಿದೆ. 165 ಕೋಟಿ ರೂಪಾಯಿಗಳಿಗಿಂತ ಕಡಿಮೆ ಇದ್ದ ಮುಂಗಡ ಪತ್ರ ಇವತ್ತು 53 ಲಕ್ಷ 65 ಸಾವಿರಗಿಂತ ಹೆಚ್ಚು ಗಾತ್ರಕ್ಕೆ ಹೋಗಿದೆ. ನಾವು ಈ.. ಅವಧಿಯಲ್ಲಿ ಅಭಿವೃದ್ಧಿ ಹೊಂದಿದ್ದೇವೆ. ದೇಶದಲ್ಲಿ ಸಾಕಷ್ಟು ಬದಲಾವಣೆಯಾಗಿದೆ. ಪ್ರಜಾಪ್ರಭುತ್ವ ಬಲವಾಗಿ ಬೇರೂರಿದೆ ಎಂದು ನಾವೆಲ್ಲರೂ ತಿಳಿದುಕೊಂಡಿದ್ದೇವೆ. ಬಡತನ ರೇಖೆ ಕೆಳಗಿರುವವ ಸಂಖ್ಯೆ ಸುಮಾರು 40ರ ಮೇಲಿದ್ದಂತಹ ಈಗ ಕೇವಲ 12ರಿಂದ 14ರ ವರೆಗೂ ಬಡತನರೇಖೆ ಅಂದರೆ ಬಹಳ ಜನರನ್ನು ಆರ್ಥಿಕವಾಗಿ, ಸಾಮಾಜಿಕವಾಗಿ, ಮೇಲೆ ತರಲಾಗಿದೆ ಎಂದರು. ನಮ್ಮ ಕೇಂದ್ರ ಹಣಕಾಸು ಮಂತ್ರಿಗಳು 53 ಲಕ್ಷ 65 ಸಾವಿರ ಕೋಟಿ ರೂಪಾಯಿಗಳ ಮುಂಗಡಪತ್ರ ಮಂಡಿಸಿದಾಗ ಅಭಿವೃದ್ಧಿಗಾಗಿ ಹಲವಾರು ಯೋಜನೆಗಳನ್ನು ರೂಪಿಸಿದ್ದಾರೆ. ಅದೇ ರೀತಿ ಸಂಪನ್ಮೂಲ ಕ್ರೋಢೀಕರಿಸಲು ಸಾಕಷ್ಟು ಪ್ರಯತ್ನವನ್ನು ಮಾಡಿದ್ದಾರೆ. ಬಹುಸಂಖ್ಯೆಯ ಜನರ ಮೇಲೆ ಹೊರೆಯಾಗದಂತೆ ಆದಾಯಯ ತೆರಿಗೆಯನ್ನು ಬಹತೇಕ ಏನು ಬದಲಾವಣೆ ಮಾಡಿಲ್ಲ. ಅಂತಾರಾಷ್ಟ್ರೀಯ ಹೂಡಿಕೆಗಳು, ವ್ಯಾಪಾರ, ವಿದೇಶಿವಿನಿಮಯ ಮಾರುಕಟ್ಟೆಯಲ್ಲಿ ಭಾರತೀಯ ವಿತ್ತಿ ಬೇರೆಬೇರೆ ಕರೆಸ್ಸಿಗಳ ಖರೀದಿ ಮಾರಾಟ ವ್ಯವಹಾರ ಇವುಗಳ ಮೇಲೆ ವಿದೇಶಿಯರಿಗೆ, ಭಾರತೀಯರಿಗೆ ಸ್ವಲ್ಪ ತೆರಿಗೆ ಬದಲಾವಣೆ ಮಾಡಿದ್ದಾರೆ. ಒಟ್ಟಾರೆ ತೆರಿಗೆ ಸಂಗ್ರಹ ಹೆಚ್ಚಿಸಲು ಪ್ರಯತ್ನ ಮಾಡಿದ್ದಾರೆ. ಇದು ದೇಶದ ಅಭಿವೃದ್ಧಿಗೆ ಪೂರಕವಾಗಿದೆ. ಯಾವುದೇ ಬಜೆಟ್‌ನಲ್ಲಿ ಲೋಪದೋಷ ಇದ್ದೆ ಇರುತ್ತದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ರೋಟರಿ ಅಧ್ಯಕ್ಷ ಕಾಗಲವಾಡಿ ಚಂದ್ರು ಮಾತನಾಡಿ, ಪ್ರೊ.ಚಿಂತಾಮಣಿ ಅವರು ಕಳೆದ 55 ವರ್ಷಗಳಿಂದಲ್ಲೂ ಬಜೆಟ್ ವಿಶ್ಲೇಷಣೆ ಕುರಿತು ಮಾಹಿತಿ ಕಾರ್ಯಕ್ರಮ ನಡೆಸಿಕೊಂಡು ಬಂದಿದ್ದಾರೆ ಎಂದರು.

**ಸನ್ಮಾನ**

**ಇದೇ ಸಂದರ್ಭದಲ್ಲಿ ಪ್ರೊ.ಚಿಂತಾಮಣಿ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಕಾರ್ಯದರ್ಶಿ ಕೆಂಪನಪುರ ಸಿದ್ಧರಾಜು ಪದಾಧಿಕಾರಿಗಳು ಹಾಜರಿದ್ದರು.**

## 14ಕ್ಕೆ ಎಐ ಬಳಕೆ ವಿಚಾರಸಂಕಿರಣ



ಮೈಸೂರು: ಕಡಕೊಳದಲ್ಲಿನ ಶೇಷಾದ್ರಿಪುರಂ ತಾಂತ್ರಿಕ ಸಂಸ್ಥೆ ವತಿಯಿಂದ ಫೆ.14ರಂದು ಬೆಳಿಗ್ಗೆ 9.30ಕ್ಕೆ ಕಾಲೇಜು ಸಭಾಂಗಣದಲ್ಲಿ ಅಪಾಯಕಾರಿ ವಸ್ತುಗಳ ನಿರ್ವಹಣೆಗೆ ಕೃತಕ ಬುದ್ಧಿಮತ್ತೆ ಬಳಕೆಯ ಅಗತ್ಯ ಕುರಿತು ಭಾರತ–ಅಮೆರಿಕ ತಜ್ಞರು ಪಾಲ್ಗೊಂಡಂತೆ ವಿಚಾರ ಸಂಕಿರಣ ಆಯೋಜಿಸಲಾಗಿದೆ ಎಂದು ಪ್ರಾಚಾರ್ಯ ಡಾ.ಕೆ. ಪ್ರಹ್ಲಾದ್ ರಾವ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಇದಕ್ಕೂ ಮುನ್ನ ಫೆ. 13 ರಂದು ಪೂರ್ವಭಾವಿ ಸಭೆ ಇರಲಿದೆ. ಮುಖ್ಯವಾದ ವಿಚಾರ ಸಂಕಿರಣ ನಡೆಯುವ ಫೆ. 14 ರಂದು ಅಮೆರಿಕದಿಂದ ಆಗಮಿಸಿರುವ ತಜ್ಞರು, ಹವಾಮಾನ ವೈಪರೀತ್ಯ ತಡೆಗಟ್ಟುವ ಹಿನ್ನೆಲೆಯಲ್ಲಿ ಇ–ತ್ಯಾಜ್ಯ, ಪ್ಲಾಸ್ಟಿಕ್ ಮೊದಲಾದ ಅಪಾಯಕಾರಿ ವಸ್ತುಗಳನ್ನು ಹೇಗೆ ವಿಲೇವಾರಿ ಮಾಡಬೇಕೆಂಬ ಬಗ್ಗೆ ಮಾಹಿತಿ ನೀಡಲಿದ್ದಾರೆ. ಭಾರತೀಯ ತಜ್ಞರು ಸಹಾ ಮಾಹಿತಿ ನೀಡಲಿದ್ದಾರೆ. ಎಲ್ಲರಿಗೂ ಉಚಿತ ಪ್ರವೇಶವಿದೆ ಎಂದು ಮಾಹಿತಿ ನೀಡಿದರು. ಫೆ.14 ರ ಜೆಎಸ್‌ಎಸ್ ತಂತ್ರಜ್ಞಾನ ಮತ್ತು ವಿಜ್ಞಾನ ವಿವಿಯ ಉಪ ಕುಲಪತಿ ಡಾ.ಎನ್.ಎನ್. ಸಂತೋಷ್ ಕುಮಾರ್, ಡಾ.ಆರ್. ವಿಶ್ವನಾಥ್ ಇನ್ನಿತರರು ಅತಿಥಿಗಳಾಗಿರುವರು, ನಾಡೋಜ ಡಾ. ವೂಡೆ ಪಿ. ಕೃಷ್ಣ ಅಧ್ಯಕ್ಷತೆ ವಹಿಸುವರೆಂದದರು. ಡಾ.ಶೇಷ ನಾರಾಯಣ, ಪ್ರೊ.ಕೆ.ಎನ್.ರಾಜಾರಾವ್ ಹಾಜರಿದ್ದರು.

## ಕಟ್ಟಡ ತ್ಯಾಜ್ಯ ಸಂಸ್ಕರಣಾ ಘಟಕ ಸ್ಥಳಾಂತರಕ್ಕೆ ಗ್ರಾಮಸ್ಥರ ಆಗ್ರಹ



ಮೈಸೂರು: ಮಹಾನಗರಪಾಲಿಕೆಯೂ ಹಂಚ್ಯಾ–ಸಾತಗಳ್ಳಿ ವಲಯದಲ್ಲಿ ನಿರ್ಮಿಸಲು ಮುಂದಾಗಿರುವ ಕಟ್ಟಡ ತ್ಯಾಜ್ಯ ಘಟಕವನ್ನು ಬೇರೆಗೆ ಸ್ಥಳಾಂತರಿಸಬೇಕೆಂದು ಹಂಚ್ಯಾಗ್ರಾಮಸ್ಥರು ಆಗ್ರಹಿಸಿದರು.

ಈ ಸಂಬಂಧ ರಮ್ಮನಹಳ್ಳಿ ಪಟ್ಟಣ ಪಂಚಾಯಿತಿ ಅಧಿಕಾರಿಗಳು ಮನವಿ ಸಲ್ಲಿಸಿದ ಗ್ರಾಮದ ಮುಖಂಡರಾದ ಶ್ರೀನಿವಾಸ್ ಮಾತನಾಡಿ, ರಿಂಗ್ ರಸ್ತೆ ಸಮೀಪದಲ್ಲಿ ಇಂತಹ ಕಟ್ಟಡ ತ್ಯಾಜ್ಯ ಘಟಕ ನಿರ್ಮಾಣದಿಂದ ಸ್ಥಳೀಯರಿಗೆ ತೊಂದರೆ ಆಗಲಿದೆ. ಪ್ರಮುಖವಾಗಿ ಇದು ಬಡಾವಣೆ ಆಗಿರುವುದರಿಂದ ಇಲ್ಲಿನ ಧೂಳು, ಪರಿಸರ ಮಾಲಿನ್ಯ ದುಷ್ಪರಿಣಾಮ ಸ್ಥಳೀಯರಿಗೆ ತೊಂದರೆ ಉಂಟು ಮಾಡಲಿದೆ. ಇಂತಹ ಘಟಕಗಳನ್ನು ಬಡಾವಣೆಯ ದೂರ ಮತ್ತು ಈಗಾಗಲೇ ಪಾಲಿಕೆ ಒಳಪಡುವ ಜಾಗದ ಹೊರಗೆ ಅದರಲ್ಲೂ ಪೆರಿಪಲ್ ರಿಂಗ್ ರಸ್ತೆಯಿಂದಾಚೆಗೆ ನಿರ್ಮಿಸಬೇಕು. ಈ ಕೂಡಲೇ ಇದನ್ನು ಸ್ಥಳಾಂತರಿಸಬೇಕು ಎಂದರು.

ಹದಿನೈದು ದಿನಗಳಲ್ಲಿ ಇದನ್ನು ವರ್ಗಾವಣೆ ಮಾಡದಿದ್ದರೆ ಗ್ರಾಮಸ್ಥರು ಸೇರಿ ಒಟ್ಟುಗೂಡಿ ಅಧಿಕಾರಿಗಳ ನಡೆ ವಿರುದ್ಧ ಉಗ್ರ ಹೋರಾಟ ಮಾಡಲಾಗುವುದು ಎಂದು ಹೇಳಿದರು.

ಗ್ರಾಮದ ಮುಖಂಡರಾದ ಎಚ್.ವಿ.ವೆಂಕಟೇಗೌಡ, ಬೋರೇಗೌಡ, ತಮ್ಮೇಗೌಡ, ಮಹದೇವು, ಉಮೇಶ್, ಗವಿಸಿದ್ದೇಗೌಡ, ಸಿ.ಕುಮಾರ,ಅನಿಲ್ ಕುಮಾರ, ಸಿದ್ದರಾಜು, ದೇವೇಗೌಡ, ಚಾಮುಂಡಿ, ನಂದೀಶ, ಪ್ರತಾಪಕುಮಾರ್, ನಾಗಣ್ಣ, ಮಹೇಶ್, ಚಾಮೇಗೌಡ ಇನ್ನಿತರರು ಉಪಸ್ಥಿತರಿದ್ದರು.

# ಸಾವಿರಾರು ಭಕ್ತರಿಂದ ಕಾಲ್ನಡಿಗೆ ಯಾತ್ರೆ

### ಮಲೇಮಹದೇಶ್ವರ ಸ್ವಾಮಿಯ ದರ್ಶನಕ್ಕೆ ಪಾದಯಾತ್ರೆ | ದಾರಿಯುದ್ದಕ್ಕೂ ಸಂಘ–ಸಂಸ್ಥೆಗಳಿಂದ ಬಗೆ ಬಗೆ ಸೇವೆ | ಪೊಲೀಸ್, ಅರಣ್ಯ ಇಲಾಖೆ ಸಿಬ್ಬಂದಿಯಿಂದ ಅಗತ್ಯ ಸಹಕಾರ

ರಾಮನಗರ: ಶಿವರಾತ್ರಿ ಹಬ್ಬದ ಹಿನ್ನೆಲೆಯಲ್ಲಿ ಶ್ರೀ ಮಲೆಮಹದೇಶ್ವರ ಬೆಟ್ಟಕ್ಕೆ ಪಾದಯಾತ್ರೆ ಮೂಲಕ ಸಾವಿರಾರು ಮಂದಿ ಭಕ್ತರು ತೆರಳಿ ತಮ್ಮ ಭಕ್ತಿ ಸಮರ್ಪಿಸಿಕೊಳ್ಳುವುದು ಸಂಪ್ರದಾಯ. ಪ್ರತಿ ವರ್ಷವೂ ಭಕ್ತರ ಸಂಖ್ಯೆ ಏರುತ್ತಲೇ ಇದೆ. ಈ ಬಾರಿಯೂ ಭಕ್ತರ ಸಂಖ್ಯೆಗೆ ಕೊರತೆ ಏನಿಲ್ಲ. ಸಾವಿರಾರು ಭಕ್ತರು ಮಲೇ ಮಹದೇಶ್ವರ ದರ್ಶನಕ್ಕೆ ಪಾದಯಾತ್ರೆಯಲ್ಲಿ ತೆರಳುತ್ತಿರುವುದು ನಿತ್ಯ ಕಾಣಸಿಗುತ್ತಿದೆ.

ಬೆಂಗಳೂರು ನಗರ ಸೇರಿದಂತೆ ಬೆಂಗಳೂರು ದಕ್ಷಿಣ (ರಾಮನಗರ) ಜಿಲ್ಲೆ, ಬೆಂಗಳೂರು ಗ್ರಾಮಾಂತರ, ಮಂಡ್ಯ, ಮೈಸೂರು ಜಿಲ್ಲೆಗಳು ಸೇರಿದಂತೆ ರಾಜ್ಯದ ವಿವಿಧ ಭಾಗಗಳಲ್ಲಿ ಮಹದೇಶ್ವರನ ಭಕ್ತರಿದ್ದಾರೆ.

ಕಾಲ್ನಡಿಗೆಯಲ್ಲಿ ಮಕ್ಕಳು, ಹಿರಿಯರು, ಕಿರಿಯರು ಎಂಬ ಬೇದಭಾವವಿಲ್ಲದೆ ಎಲ್ಲರೂ ಅರೆಕೆ ಹೊತ್ತು ಕಾಲ್ನಡಿಗೆಯಲ್ಲಿ ಸಾಗುತ್ತಿದ್ದಾರೆ. ಅನೇಕ ಭಕ್ತರು ಕನಕಪುರ ತಾಲ್ಲೂಕು ಏಳಗಳ್ಳಿ ಗ್ರಾಮದ ಪುರದರಸಿ ಮುದ್ದಮ್ಮ, ಮಾರಮ್ಮ ಮತ್ತು ಆಂಜನೇಯಸ್ವಾಮಿ ದೇವಾಲಯಗಳಲ್ಲಿ ಪೂಜೆ ಸಲ್ಲಿಸಿ, ಈಡುಗಾಯಿ ಒಡೆದು ಪಾದಯಾತ್ರೆಯಲ್ಲಿ ಸಾಗುತ್ತಾರೆ. ಮುಂದೆ ಕಾವೇರಿ ನದಿ ದಾಟುವ ಮುಖೇನ ಸಂಗಮ ವನ್ಯ ಜೀವಿ ಪ್ರದೇಶದ ಕಾನನದ ಮಣ್ಣು ರಸ್ತೆಯಲ್ಲಿ ತೆರಳಿ ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಮಲ್ಲಯ್ಯನಪುರ, ಕೌದಳ್ಳಿ, ವಡಕೆಹಳ್ಳ, ತಾಳು ಬೆಟ್ಟದ ಮೂಲಕ ಬೆಟ್ಟದ ಬಸವದಾರಿಯಲ್ಲಿ ಬೆಟ್ಟ ಹತ್ತಿ ಪ್ರಸಿದ್ಧ ಮಾದಯ್ಯನಗಿರಿಗೆ ತಲುಪುತ್ತಾರೆ. ಪಾದಯಾತ್ರೆಯಲ್ಲಿ ಅನೇಕರು ಭಕ್ತಿ ಗೀತೆಗಳುನ್ನ ಹಾಡುವುದುಂಟು, ಕೆಲವರು ಶ್ಲೋಕ, ಕೀರ್ತನೆಗಳನ್ನು ಹಾಡುತ್ತಾರೆ ಶಿವನನ್ನು ಸ್ತುತಿಸುತ್ತಾ ಸಾಗುತ್ತಾರೆ.



**ಜಿಲ್ಲಾಡಳತದಿಂದಲೂ ಸಹಕಾರ**

ಪಾದಯಾತ್ರೆಯ ವೇಳೆ ಯಾವುದೇ ಅವಘಡಗಳಿಗೆ ಅವಕಾಶವಾಗದಂತೆ ಜಿಲ್ಲಾಡಳಿತವೂ ನಿಗಾವಹಿಸಿದೆ. ಪೊಲೀಸ್ ಇಲಾಖೆ, ಅರಣ್ಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಕೆಲವೊಂದು ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸಹ ಈ ವಿಚಾರದಲ್ಲಿ ಮಾಹಿತಿ ಪಡೆದುಕೊಳ್ಳುತ್ತಿದ್ದಾಋುಎ. ಪಾದಯಾತ್ರಿಗಳ ಕಾವೇರಿ ನದಿ ದಾಟಲು ಅನುಕೂಲವಾಗುವಂತೆ ನದಿಯಲ್ಲಿ ನೀರಿನ ಹರಿವು ಕಡಿಮೆ ಮಾಡಿದ್ದು, ಹಗ್ಗ ಹಿಡಿದು ನದಿ ದಾಟಲು ಎನ್‌ಡಿಆರ್‌ಎಫ್ ತಂಡ ನೆರವಿಗೆ ನಿಂತಿದೆ.

ಡ್ರೋಣ್ ಕ್ಯಾಮೆರಾ ಅಳವಡಿಕೆ ಮಾಡಿದ್ದಾರೆ. ಅಲ್ಲದೆ ಅರಣ್ಯ ಪ್ರದೇಶದಲ್ಲಿ ಹಗಲು ಸಮಯದಲ್ಲಿ ಮಾತ್ರ ಗುಂಪಿನಲ್ಲಿ ಪಾದ ಯಾತ್ರೆ ಮಾಡುವ ಬಗ್ಗೆ ಹಲವು ಸುರಕ್ಷತಾ ಸೂಚನೆಗಳ ಬಗ್ಗೆ ಬೆಂಗಳೂರು ದಕ್ಷಿಣ ಮತ್ತು ಚಾಮ ರಾಜ ನಗರ ಜಿಲ್ಲೆಗಳ ಅಧಿಕಾರಿಗಳು ಭಕ್ತಾಧಿಗಳಿಗೆ ಅರಿವು ಮೂಡಿಸುವ ಕೆಲಸದಲ್ಲಿ ನಿರತರಾಗಿದ್ದಾರೆ.

**ಭಕ್ತರ ಸೇವೆಗೆ ಸಂಘ–ಸಂಸ್ಥೆಗಳ ತಯಾರಿ**

**ಹರಕೆ ಹೊತ್ತ ಭಕ್ತರು ಕಾಲ್ನಡಿಗೆ ಸಾಗುವ ರಸ್ತೆಯ ಇಕ್ಕೆಲಗಳಲ್ಲಿ ಸಂಘ ಸಂಸ್ಥೆಗಳು ಬೃಹತ್ ಪೆಂಡಾಲ್‌ಗಳನ್ನು ಹಾಕಿದ್ದು ಬೆಟ್ಟಕ್ಕೆ ತೆರಳುವ ಭಕ್ತರಿಗೆ ಕುಡಿಯುವ ನೀರು, ಕಲ್ಲಂಗಡಿ ಹಣ್ಣು, ಬಿಸ್ಕೆಟ್, ಟೀ, ಪಾನಕ, ಮಜ್ಜಿಗೆ, ಕಡಲೆಕಾಯಿ, ಬಜ್ಜಿ ಬೋಂಡಾ, ಹೋಳಿಗೆ ಊಟ, ವಿವಿಧ ತಂಪು ಪಾನಿಯಗಳು, ಶೌಚಾಲಯ ಗಳು, ತಾತ್ಕಾಲಿಕ ಆಸ್ಪತ್ರೆಗಳು, ವಿಶ್ರಾಂತಿಗೆ ವ್ಯವಸ್ಥೆಗಳನ್ನು ಮಾಡಿದ್ದಾರೆ.**

**ರೋಟರಿ: 7 ವರ್ಷಗಳಿಂದ ನಿರಂತರ ಸೇವೆ**

ಕಳೆದ ಏಳು ವರ್ಷಗಳಿಂದ ರಾಮನಗರದ ರೋಟರಿ ಸಿಲ್ಕ್ ಸಿಟಿಯ ಎಲ್ಲ ಪದಾಧಿಕಾರಿಗಳ ಸಹಕಾರದಲ್ಲಿ ಮಲೈ ಮಹದೇಶ್ವರ ಬೆಟ್ಟಕ್ಕೆ ತೆರಳುವ ಪಾದಯಾತ್ರಿಗಳಿಗೆ ಮಲ್ಲಯ್ಯನಪುರದ ರಾಮಯ್ಯನವರ ಸ್ಥಳದಲ್ಲಿ ನಾಲ್ಕು ದಿನಗಳ ಕಾಲ ಅಡಿಗೆಗೆ ಹಚ್ಚಿದ ಒಲೆಯನ್ನು ಕೆಡಿಸುವುದಿಲ್ಲ. ದಿನ 24 ಗಂಟೆ ಟೀ, ಕಾಫಿ, ಊಟೋಪಚಾರ, ವೀಳ್ಯದೆಲೆ ಅಡಿಕೆ, ಔಷಧಿಗಳ ವಿತರಣೆ, ತಂಗಲು ವ್ಯವಸ್ಥೆ ಮಾಡುತ್ತೇವೆ.

**ಎಂ.ಬಿ.ಪರಮೇಶ್**
ಕಾರ್ಯದರ್ಶಿ, ರೋಟರಿ ಸಿಲ್ಕ್ ಸಿಟಿ.

**16ನೇ ವರ್ಷದ ದಾಸೋಹ ಸೇವೆ**

ಶ್ರೀ ಮಲೈಮಹದೇಶ್ವರ ಬೆಟ್ಟಕ್ಕೆ ಏಳಗಳ್ಳಿಯಿಂದ ಕಾಲ್ನಡಿಗೆಯಲ್ಲಿ ತೆರಳುವ ಭಕ್ತರಿಗೆ ತಾಳು ಬೆಟ್ಟದಲ್ಲಿ ಬಮೂಲ್ ನಂದಿನಿ ಗ್ರೂಪ್ ಮತ್ತು ಎಂಪಿಸಿಎಸ್‌ಗಳ ಸಹಕಾರದಲ್ಲಿ 16ನೇ ವರ್ಷದ ದಾಸೋಹ ಸೇವೆ ಮತ್ತು ಭಕ್ತರಿಗೆ ಅಗತ್ಯ ಸೌಲಭ್ಯಗಳನ್ನು ನೀಡುತ್ತಿದ್ದೇವೆ, ಮಾದಪ್ಪನ ಸೇವೆ ಮಾಡಲು ಸಿಕ್ಕಿರುವ ಅವಕಾಶ ಪುಣ್ಯದ ಕೆಲಸವಾಗಿದೆ.

**ಎಚ್.ಎಸ್.ಹರೀಶ್ ಕುಮಾರ್**
ನಿರ್ದೇಶಕರು, ಬಮೂಲ್

## 5ಕೋಟಿ ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕರಿಂದ ಭೂಮಿ ಪೂಜೆ




ಹನೂರು:– ಗ್ರಾಮೀಣಾಭಿರುದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಲೋಕೋಪಯೋಗಿ ಇಲಾಖೆಯ ಅನುದಾನದಲ್ಲಿ ಹುಗ್ಯಮ್ ಹಾಗೂ ಮಿಣ್ಯಮ್ ಗ್ರಾಮ ಪಂಚಾಯತ್ ವ್ಯಾಪ್ತಿಯ ಹಲವಾರು ಗ್ರಾಮಗಳಲ್ಲಿ ಒಟ್ಟು 5 ಕೋಟಿ ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಕ್ಷೇತ್ರದ ಶಾಸಕ ಎಂ ಆರ್ ಮಂಜುನಾಥ್ ರವರು ಗುದ್ದಲಿ ಪೂಜೆ ನೆರವೇರಿಸಿದರು.

ಪೆದ್ದನ ಪಾಳ್ಯ, ಅಂಜಿ ಪಾಳ್ಯ, ಮಿನ್ಯಮ್, ಹುಗ್ಯಮ್, ಹಾಗೂ ನಕ್ಕುಂದಿ ಗ್ರಾಮಗಳಲ್ಲಿ ಸುಮಾರು ಐದು ಕೋಟಿ ವೆಚ್ಚದಲ್ಲಿ ಸಿಸಿ ರಸ್ತೆ,ಡಾಂಬರು ರಸ್ತೆ ಅಭಿವೃದ್ಧಿ ಹಾಗೂ ಸೇತುವೆ ನಿರ್ಮಾಣ ಕಾರ್ಯಕ್ಕೆ ಶಾಸಕ ಎಂ ಆರ್ ಮಂಜುನಾಥ್ ರವರು ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು. ಸ್ವತಂತ್ರ ಬಂದು 78 ವರ್ಷಗಳು ಹಾಗಿದ್ದರು ನಮ್ಮ ಹನೂರು ಕ್ಷೇತ್ರದ ಹಲವಾರು ಗ್ರಾಮಗಳಲ್ಲಿ ಸಮರ್ಪಕವಾಗಿ ಮೂಲ ಭೂತ ಸೌಲಭ್ಯ ನೀಡಲು ಸಾಧ್ಯವಾಗಿಲ್ಲ. ಸರ್ಕಾರದ ಸಹಕಾರದಿಂದ ಸಿಸಿ ರಸ್ತೆಗಳು ಹಾಗೂ ಸೇತುವೆ ಕಾಮಗಾರಿ ಕೈಗೊಳ್ಳಲು 5 ಕೋಟಿ ಅನುದಾನ ಬಂದಿದೆ ಮುಂದಿನ ದಿನಗಳಲ್ಲಿ ಕ್ಷೇತ್ರದಲ್ಲಿ ಆಗಬೇಕಿರುವ ಬಹುತೇಕ ಕೆಲಸ ಕಾರ್ಯಗಳು ಆಗಲಿವೆ ಎಂದರು. ಈ ಸಂದರ್ಭದಲ್ಲಿ ಜೆಡಿಎಸ್ ಪಕ್ಷದ ಮುಖಂಡರುಗಳಾದ ಹುಗ್ಯಮ್ ಮುನಿಯಪ್ಪ, ಗುತ್ತಿಗೆದಾರ ಹುಚ್ಚಪ್ಪ, ಮಹೇಶ್, ಹುಗ್ಯಮ್ ಪಂಚಾಯತ್ ಮಾಜಿ ಅಧ್ಯಕ್ಷರು ಮುರುಗೇಶ್,ಪಿಡಿಓ ನಂಜುಂಡ ಸ್ವಾಮಿ,ಹಾಗೂ ವಿವಿಧ ಗ್ರಾಮದ ಮುಖಂಡರುಗಳು ಇದ್ದರು.

## ಫೆ.14ರಂದು ಉಚಿತ ರಕ್ತದಾನ ಶಿಬಿರ

ಮೈಸೂರು: ಕೆ.ಜಿ. ಕೊಪ್ಪಲಿನ ಟಿಟಿಕೆ ಕಾಲೇಜು ವತಿಯಿಂದ ಫೆ. 14 ರಂದು ಬೆಳಗ್ಗೆ 8.30 ರಿಂದ ಮಧ್ಯಾಹ್ನ 1.30 ರವರೆಗೆ ಕಾಲೇಜಿನಲ್ಲಿ ನಮ್ಮ ಸೈನಿಕರಿಗೆ ಗೌರವ ಸಲ್ಲಿಸುವ ಉದ್ದೇಶದಿಂದ ಉಚಿತ ರಕ್ತದಾನ ಶಿಬಿರ ಆಯೋಜಿಸಲಾಗಿದೆ ಎಂದು ಆಯೋಜಕರಾದ ನಿಮಿಷಾಂಬ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ ಆಶ್ರಯದಲ್ಲಿ ಈ ಶಿಬಿರ ಆಯೋಜಿಸಲಾಗಿದೆ ಎಂದು ಮಾಹಿತಿ ನೀಡಿದರು. ಮಹದೇವಸ್ವಾಮಿ, ಕಿಶೋರ್ ಇದ್ದರು.




## ಇತಿಹಾಸ ಅರಿತು ಜೀವನದಲ್ಲೂ ಅಳವಡಿಸಿಕೊಳ್ಳಿ

ಮೈಸೂರು: ಸಮಾಜದ ಅಸ್ಪೃಶ್ಯತೆಯನ್ನು ಹೋಗಲಾಡಿಸಲು ಶಿವ ಶರಣರು ತಮ್ಮ ತಮ್ಮ ವಚನಗಳ ಮೂಲಕ ಪ್ರಯತ್ನಿಸಿದರು. ಸಮಾಜದಲ್ಲಿ ಮುಂದಿನ ಪೀಳಿಗೆಗೆ ಇವರ ವಿಚಾರಧಾರೆ ಮತ್ತು ಸಮಾಜದ ಅಸಮಾನತೆ ಬಗ್ಗೆ ತಿಳಿದುಕೊಳ್ಳಬೇಕು. ವಚನ ಇತಿಹಾಸವು ಮರೆಯಾಗುತ್ತಿದ್ದು. ಪ್ರವಚನ ಪ್ರಶ್ನೋತ್ತರ ಮತ್ತು ವಚನಗಳು ಪುಸ್ತಕಗಳನ್ನು ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ವಚನ ಇತಿಹಾಸವನ್ನು ಬೋಧನೆ ಮಾಡಬೇಕು ಎಂದು ಶಾಸಕ ಕೆ.ಹರೀಶ್ ಗೌಡ ತಿಳಿಸಿದರು.

ಜಿಲ್ಲಾಡಳಿತ , ಕನ್ನಡ ಮತ್ತು ಸಂಸ್ಕೃತ ಇಲಾಖೆ, ಮೈಸೂರು ಮಹಾನಗರ ಪಾಲಿಕೆ ವತಿಯಿಂದ ಕಲಾಮಂದಿರದಲ್ಲಿ ಆಯೋಜಿಸಲಾಗಿದ್ದ ಕಾಯಕ ಶರಣರ ಜಯಂತಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಸಮಾಜದಲ್ಲಿ ವಚನಕಾರರ ಸಂದೇಶವನ್ನು ಇಟ್ಟುಕೊಂಡು ಇಂದು ಜೀವನ ನಡೆಸಬೇಕು. ಸಮಾಜ ಉತ್ತಮವಾದ ರೀತಿಯಲ್ಲಿ ಇರಬೇಕಾದರೆ ಹಿಂದಿನ ಶಿವಶರಣ ವಚನಗಳ ಸಂದೇಶ ಮಹತ್ವವನ್ನು ತಿಳಿದು ಬದುಕಿನಲ್ಲಿ ಮಾನಸಿಕವಾಗಿ ಸದೃಢವಾಗಿ ತಮ್ಮ ಕಾಯಕವನ್ನು ನಡೆಸಬೇಕು ಎಂದು ಹೇಳಿದರು

ಶಾಸಕ ತನ್ವೀರ್ ಸೇಠ್ ಮಾತನಾಡಿ ಇತಿಹಾಸವನ್ನು ತಿದ್ದುಪಡಿ ಮಾಡಲು ಯಾರಿಗೂ ಶಕ್ತಿ ಇಲ್ಲ ಅದನ್ನು ಅರ್ಥಮಾಡಿಕೊಳ್ಳಬೇಕು. ಭಾಷೆ, ಧರ್ಮ ಜಾತಿ ಇವುಗಳನ್ನು ಸಮಾಜದಲ್ಲಿ ಸಮಸ್ಯೆಗಳನ್ನಾಗಿ ನಾವೇ ಸೃಷ್ಟಿಸಿಕೊಂಡಿದ್ದೇವೆ. ಸಮಾಜದಲ್ಲಿ ಏಳುಬೀಳುಗಳನ್ನು ತಿಳಿದು ಜೀವನ ನಡೆಸಬೇಕು ಇದು ಅತ್ಯಗತ್ಯ. ಇಂದು ನಾವು ಸಮಾಜದಲ್ಲಿ ಬೇರೆಯವರ ಪೈಪೋಟಿಗೆ ಜೀವನ ಮಾಡುತ್ತಿದ್ದೇವೆ ಇಂದು ಮಾನವ ಅತಿಯಾದ ದುರಾಸೆಗಳಿಂದ ತುಂಬಿದ್ದಾನೆ ಎಂದರು.



ವಿಧಾನ ಪರಿಷತ್ತಿನ ಶಾಸಕ ಡಿ.ತಿಮ್ಮಯ್ಯ, ಲೇಖಕ ಕೆ.ಪಿ.ರಾಜಯ್ಯ, ಗಾಂಧಿ ಅಧ್ಯಯನ ಉಪನ್ಯಾಸಕ ಡಾ.ಟಿ.ಮಂಜು, ವಿಧಾನ ಪರಿಷತ್ತಿನ ಸದಸ್ಯ ಸಿ.ಎನ್.ಮಂಚೇಗೌಡ, ಶಿವ ಶರಣರ ಹರಳಯ್ಯ ಮಹಾಸಂಸ್ಥಾನ ಮಠದ ಶ್ರೀ ರುದ್ರಪ್ಪ ಹರಳಯ್ಯ ಸ್ವಾಮೀಜಿ, ಕನ್ನಡ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಎಂ.ಡಿ.ಸುದರ್ಶನ್, ಎಡತೊರ ನಿಂಗರಾಜು ಪಾಳ್ಯ ರಾಜಪ್ಪ, ಕೆ.ಆರ್.ನಗರದ ಮಹದೇವ ಮತ್ತಿತರರು ಉಪಸ್ಥಿತರಿದ್ದರು.

## 28ರಂದು ರಾಜ್ಯ ಮಟ್ಟದ ಶೈಕ್ಷಣಿಕ ಸಮ್ಮೇಳನ

ಚಾಮರಾಜನಗರ, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ವತಿಯಿಂದ ಫೆ.28 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯುವ ರಾಜ್ಯ ಮಟ್ಟದ ಶೈಕ್ಷಣಿಕ ಮಹಾ ಸಮ್ಮೇಳನ, ಧನ್ಯತಾ ಸಮಾರಂಭ, ಸಂಘದ ಸುವರ್ಣ ಮಹೋತ್ಸವ ಹಾಗೂ ಗುರುವಂದನಾ ಸಮಾರಂಭಕ್ಕೆ ತಾಲೂಕಿನಿಂದ ಶಿಕ್ಷಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಿಕೊಡಬೇಕು ಎಂದು ಸಂಘದ ತಾಲೂಕು ಅಧ್ಯಕ್ಷ ಸಿ.ಕೆ.ರಾಮಸ್ವಾಮಿ ಮನವಿ ಮಾಡಿದರು.

ನಗರದ ಶಿಕ್ಷಕರ ಭವನದಲ್ಲಿ ನಡೆದ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಸಮಿತಿ ಪದಾಧಿಕಾರಿಗಳು ಕಾರ್ಯಕಾರಿಣಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಂದು ನಡೆಯುವ ಸಮಾರಂಭದಲ್ಲಿ ಮುಖ್ಯಮಂತ್ರಿಗಳು, ಉಪ ಮುಖ್ಯಮಂತ್ರಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಮಧುಬಂಗಾರಪ್ಪ ಭಾಗವಹಿಸಲಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವ ರಾಜ್ಯ ಸರ್ಕಾರ ಸಂಘದ ಅನೇಕ ಬೇಡಿಕೆಗಳ ಈಡೇರಿಸಿರುವುದಕ್ಕೆ ಸಂಘದ ವತಿಯಿಂದ ಅವರಿಗೆ ಹೃದಯಸ್ಪರ್ಶಿ ಅಭಿನಂದನೆ ಸಲ್ಲಿಸಲಾಗುತ್ತದೆ. ಈ ಸಮಾರಂಭಕ್ಕೆ ಸಂಘದ ಪದಾಧಿಕಾರಿಗಳು, ಸದಸ್ಯ ರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.



**ಸನ್ಮಾನ:** ಇದೇ ಸಂದರ್ಭದಲ್ಲಿ ಹಿರಿಯ ಮುಖ್ಯ ಶಿಕ್ಷಕರಾಗಿ ಬಡ್ತಿ ಹೊಂದಿದ್ದ ಶಿವನಂಜಯ್ಯ, ಶಿವಕುಮಾರ್ ಅವರನ್ನು ಸಂಘದ ವತಿಯಿಂದ ಸನ್ಮಾನಿಸಲಾಯಿತು. ಜಿಲ್ಲಾಧ್ಯಕ್ಷ ಕೆ.ಎಸ್.ಮಾದಪ್ಪ, ಪ್ರಧಾನ ಕಾರ್ಯದರ್ಶಿ ಮಹದೇವಸ್ವಾಮಿ, ಮೈಸೂರು ವಿಭಾಗ ಕಾರ್ಯದರ್ಶಿ ಎಂ.ಡಿ.ಮಹದೇವಯ್ಯ, ಕರ್ನಾಟಕ ಸರ್ಕಾರಿ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಭರತ್‌ಭೂಷಣ್, ಗೌರವಾಧ್ಯಕ್ಷ ಹೆಚ್.ಜಿ.ರಾಜು, ಖಜಾಂಚಿ ಕೃಷ್ಣಮೂರ್ತಿ, ತಾಲೂಕು ಪ್ರಧಾನ ಕಾರ್ಯದರ್ಶಿ ಎನ್.ಸುಧಾ, ಮುರುಗೇಶ್ ಕುಮಾರ್, ಭವಾನಿದೇವಿ, ಸಬಾನಅಜಂ, ಸಹ ಕಾರ್ಯದರ್ಶಿಗಳಾದ ಸವಿತಾರಾಣಿ, ಮಹದೇವ ಸ್ವಾಮಿ, ಶಿವಕುಮಾರ್, ಶಿವನಂಜಯ್ಯ, ಭಾಗವಹಿಸಿದ್ದರು.

### ಪ್ರಧಾನಿ ಮೋದಿಗೆ ಅವಮಾನ

## ಕಾಂಗ್ರೆಸ್ ವಿರುದ್ಧ ಕ್ರಮಕ್ಕೆ ರಾಜ್ಯಪಾಲರಿಗೆ ಮನವಿ

ಚಾಮರಾಜನಗರ, ಪ್ರಧಾನಿ ನರೇಂದ್ರ ಮೋದಿಯವರಿಗೆ ಅಪಮಾನ ಮಾಡುತ್ತಿರುವ ಕಾಂಗ್ರೆಸ್ ಪಕ್ಷದ ನಾಯಕ ರಾಹುಲ್ ಗಾಂಧಿ, ಪಕ್ಷದ ಪದಾಧಿಕಾ ರಿಗಳು, ಕಾರ್ಯಕರ್ತರ ವಿರುದ್ಧ ಸೂಕ್ತ ಕಾನೂನು ಕ್ರಮಕೈಗೊಳ್ಳಬೇಕು ಎಂದು ಒತ್ತಾಯಿಸಿ ಜಿಲ್ಲಾ ಬಿಜೆಪಿ ಮಹಿಳಾ ಮೋರ್ಚಾದ ವತಿಯಿಂದ ನಗರದ ಜಿಲ್ಲಾಧಿಕಾರಿ ಶ್ರೀರೂಪ ಅವರ ಮುಖಾಂತರ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.



ಕಾಂಗ್ರೆಸ್ ನ ನಾಯಕ ರಾಹುಲ್ ಗಾಂಧಿ ಅವರು ವಿದೇಶಕ್ಕೆ ಹೋದ ಸಂದರ್ಭದಲ್ಲಿ ದೇಶದ ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದಿಯವರ ಕುರಿತು ತನ್ನ ಅವಹೇಳನಕಾರಿ ಮಾತುಗಳಿಂದ ಅವಮಾನಿಸುತ್ತಾ ಬಂದಿ ದ್ದಾರೆ. ಕಳೆದ ವಾರ ಲೋಕಸಭೆಯಲ್ಲಿ ಅಧಿವೇಶನ ನಡೆಯುತ್ತಿದ್ದಾಗ ರಾಹುಲ್ ಗಾಂಧಿಯವರು ತಮ್ಮ ಪಕ್ಷದ ಮಹಿಳಾ ಸಂಸದರ ಮೂಲಕ ಪ್ರಧಾನ ಮಂತ್ರಿ ಅವರಿಗೆ ದೈಹಿಕವಾಗಿ ಹಲ್ಲೆ ನಡೆಸಲು ಷಡ್ಯಂತ್ರವನ್ನು ರೂಪಿಸಿತ್ತು. ಎಂದು ಪತ್ರಿಕೆಗಳಲ್ಲಿ ವರದಿ ಆಗಿವೆ. ಹಾಗೆಯೇ ಕಾಂಗ್ರೆಸ್ ನ ನಾಯಕರು ರೂಪಿಸಿರುವ ಸಂಚಿನ ಭಾಗವಾಗಿ ಫೆ.8 ರಂದು ಕರ್ನಾಟಕ ಯೂತ್ ಕಾಂಗ್ರೆಸ್‌ನ ಪದಾಧಿಕಾರಿಗಳು ದೇಶದ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ಭಾವಚಿತ್ರವನ್ನು ಬಳಸಿ ದೇಶದ ಸಂಸತ್ತಿಗೆ ಬರಲು ಧೈರ್ಯವಿಲ್ಲದ ಪುಕ್ಕಲ ದೇಶವನ್ನು ಹೇಗೆ ರಕ್ಷಿಸುತ್ತಾರೆ? ಎಂಬ ಸುಳ್ಳು ಸುದ್ದಿಯ ಬ್ಯಾನರನ್ನು ವಿಧಾನ ಸೌಧದ ಮುಂದೆ ಹಾಕಿರುತ್ತಾರೆ.

ದೇಶದ ಆರ್ಥಿಕತೆಯನ್ನು ಜಾಗತಿಕ ಮಟ್ಟದಲ್ಲಿ 5ನೇ ಸ್ಥಾನದಿಂದ 3ನೇ ಸ್ಥಾನಕ್ಕೆ ತರಲು ಅಪರೇಷನ್ ಸಿಂಧೂರ್ ಅಂತಹ ಐತಿಹಾಸಿಕ ತರಲು ಹಗಲಿರುಳು ಶ್ರಮಿಸುತ್ತಿರುವ ಮತ್ತು ಕಾರ್ಯಾಚರಣೆಯ ನಿರ್ಧಾರ ಮಾಡಿದ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರನ್ನು ಅವಮಾನಿಸುತ್ತಿರುವ ಕಾಂಗ್ರೆಸ್ ಪಕ್ಷದ ನಾಯಕರ ಮತ್ತು ಕಾರ್ಯಕರ್ತರ ನಡೆಯನ್ನು ಭಾರತೀಯ ಜನತಾ ಪಾರ್ಟಿ ಮಹಿಳಾಮೋರ್ಚಾ ತೀವ್ರವಾಗಿ ಖಂಡಿಸುತ್ತದೆ. ಹಾಗೂ ದೇಶದ ಪ್ರಧಾನಿಗಳನ್ನು ಅವಮಾನಿಸುವ ಕಾಂಗ್ರೆಸ್ ಪಕ್ಷದ ನಾಯಕರು ಮತ್ತು ಕಾರ್ಯಕರ್ತರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಮೋರ್ಚಾದ ಜಿಲ್ಲಾಧ್ಯಕ್ಷೆ ಮಲೆಯೂರು ಕಮಲಮ್ಮ ಒತ್ತಾಯಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಮೂಡ್ನಾಕೂಡು ಪ್ರಕಾಶ್, ಮಹಿಳಾ ಮೋರ್ಚಾದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ.ಶೈಲಾ, ಉಪಾಧ್ಯಕ್ಷರಾದ ಮಮತಬಾಲಸುಬ್ರಹ್ಮಣ್ಯಂ, ಪಾರ್ವತಮ್ಮ, ರಾಜ್ಯ ಕಾರ್ಯಕಾರಿಣಿ ಸಮಿತಿ ಸದಸ್ಯೆ

# ಸಂಕ್ಷಿಪ್ತ ಸುದ್ದಿ

## ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ರಾಮನಗರ:** ಬೆಂಗಳೂರು ದಕ್ಷಿಣ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ 2026–27ನೇ ಸಾಲಿನ 6ನೇ ತರಗತಿಗೆ ಉಚಿತ ಪ್ರವೇಶ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

ಬೆಂಗಳೂರು ದಕ್ಷಿಣ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಡಾ. ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ, ಪಿ.ಎಸ್.ವಿ. ನಗರ್, ರಾಮನಗರ ಟೌನ್, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಹೊನ್ನನಾಯಕನಹಳ್ಳಿ, ಚನ್ನಪಟ್ಟಣ ತಾಲ್ಲೂಕು ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಯಲ್ಲಾಪುರ, ಮಾಗಡಿ ತಾಲ್ಲೂಕಿನ ಶಾಲೆಗಳಿಗೆ 6ನೇ ತರಗತಿಗೆ ಉಚಿತ ಪ್ರವೇಶ ಪ್ರಾರಂಭವಾಗಿದೆ.

ಪ್ರವೇಶ ಪಡೆಯಲು ಆಸಕ್ತಿವುಳ್ಳ ವಿದ್ಯಾರ್ಥಿಗಳು ಸೇವಾ ಸಿಂಧು ಪೋರ್ಟಲ್ ಮುಖಾಂತರ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಫೆ. 28ರ ವರೆಗೆ ಅವಧಿ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ರೂಮ್ ನಂ. 308, 2ನೇ ಮಹಡಿ, ಕಂದಾಯ ಭವನ, ಬಿ.ಎಂ. ರಸ್ತೆ, ರಾಮನಗರ–562159. ದೂ.080–27271104 ಸಂಪರ್ಕಿಸಬಹುದಾಗಿದೆ.

## ನೀರು ಸರಬರಾಜಿನಲ್ಲಿ ವ್ಯತ್ಯಯ ಇಂದು

**ರಾಮನಗರ:** 220/66/11 ಕೆವಿ ಚನ್ನಪಟ್ಟಣ ಸ್ವೀಕರಣ ಕೇಂದ್ರದ ಮಾರ್ಗದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಫೆ.12 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗುವುದರಿಂದ ಚನ್ನಪಟ್ಟಣದಲ್ಲಿರುವ ನೀರು ಸರಬರಾಜು ಪಂಪ್‌ಗಳು ಕಾರ್ಯನಿರ್ವಹಿಸಲು ಸಾಧ್ಯವಿಲ್ಲದ ಕಾರಣ ಕಾವೇರಿ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗುತ್ತದೆ. ಆದ್ದರಿಂದ ಸಾರ್ವಜನಿಕರು ಚನ್ನಪಟ್ಟಣ ನಗರಸಭೆ ಮತ್ತು ಜಲಮಂಡಳಿರವರೊಂದಿಗೆ ಸಹಕರಿಸುವಂತೆ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಚನ್ನಪಟ್ಟಣ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ.ಜಾ–ಪ.ಪ ಆಯೋಗದ ಅಧ್ಯಕ್ಷರ ಜಿಲ್ಲಾ ಪ್ರವಾಸ

**ತುಮಕೂರು:** ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷ ಡಾ. ಮೂರ್ತಿ. ಎಲ್ ಅವರು ಫೆಬ್ರವರಿ 17 ಮತ್ತು 18, ರಂದು ತುಮಕೂರು ಜಿಲ್ಲೆಗೆ ಭೇಟಿ ನೀಡಿ, ವಿವಿಧ ಇಲಾಖಾವಾರು ಪರಿಶೀಲನೆ ಹಾಗೂ ಸಂವಾದ ಕಾರ್ಯಕ್ರಮಗಳನ್ನು ನಡೆಸಲಿದ್ದಾರೆ. ಈ ಹಿನ್ನೆಲೆಯಲ್ಲಿ ಜಿಲ್ಲೆಯ ವಿವಿಧ ಇಲಾಖೆಗಳಿಂದ ಸಂಬಂಧಿಸಿದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸಿದ್ಧತೆ ಕೈಗೊಳ್ಳುವಂತೆ ಸೂಚಿಸಲಾಗಿದೆ. ತುಮಕೂರು ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಸಿಟಿ ಕಾರ್ಪೋರೇಷನ್, ನಗರಸಭೆ, ಪುರಸಭೆಗಳಲ್ಲಿ ಕೈಗೊಳ್ಳಲಾಗುತ್ತಿರುವ ವಿವಿಧ ಯೋಜನೆಗಳ ವಿವರ ಮತ್ತು ತೆರಿಗೆ ಹಣದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನಾಂಗದ ಅಭಿವೃದ್ಧಿಗೆ ವಿನಿಯೋಗಿಸುತ್ತಿರುವ ವಿವರಗಳ ಮಾಹಿತಿ ಕುರಿತು 17 ಮತ್ತು 18ರಂದು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ತುಮಕೂರು ಜಿಲ್ಲೆಯಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ. ಯೋಜನೆಗಳ ಅನುಷ್ಠಾನದ ಕುರಿತು ಸಮಗ್ರ ಪರಿಶೀಲನಾ ಸಭೆ ನಡೆಸಲಾಗುವುದು. ಜಿಲ್ಲಾ ಮಟ್ಟದ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ. ಅನುಷ್ಠಾನಾಧಿಕಾರಿಗಳು ಯೋಜನೆಯಡಿ ಬಿಡುಗಡೆಯಾದ ಅನುದಾನದಿಂದ ಕೈಗೊಂಡಿರುವ ಕಾಮಗಾರಿಗಳ ವಿವರ, ಇದುವರೆಗೆ ಸಾಧಿಸಿದ ಪ್ರಗತಿ ಹಾಗೂ ಅನುದಾನ ಬಳಕೆಯ ಸ್ಥಿತಿಗತಿ ಕುರಿತು ಚರ್ಚೆ.

ಜಿಲ್ಲೆಯಾದ್ಯಂತ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ನಡೆಸುತ್ತಿರುವ ವಿದ್ಯಾರ್ಥಿ ನಿಲಯಗಳ ಕುರಿತು ಸ್ವಂತ ಕಟ್ಟಡ ಮತ್ತು ಬಾಡಿಗೆ ಕಟ್ಟಡಗಳ ವಿವರಗಳನ್ನು ಪರಿಶೀಲಿಸಲಾಗುವುದು. ಜೊತೆಗೆ ತುಮಕೂರು ಜಿಲ್ಲಾ ವ್ಯಾಪ್ತಿಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಜನಾಂಗದವರಿಗೆ ಸ್ಮಶಾನ ಭೂಮಿಯನ್ನು ಹೊಂದಿರುವ ಮತ್ತು ಹೊಂದಿರದ ಗ್ರಾಮಗಳ ವಿವರಗಳ ಕುರಿತು ಚರ್ಚೆ ನಡೆಯಲಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಕಾಲೋನಿಗಳಲ್ಲಿ ಸಿ.ಸಿ. ರಸ್ತೆ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸಿರುವ ಬಗ್ಗೆ ಪ್ರಗತಿ ವರದಿ ಪಡೆಯಲಾಗುವುದು. ಈ ಸಂಬಂಧ ಲೋಕೋಪಯೋಗಿ ಇಲಾಖೆ (ತುಮಕೂರು ಮತ್ತು ಮಧುಗಿರಿ ಉಪವಿಭಾಗ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ (ತುಮಕೂರು ಮತ್ತು ಮಧುಗಿರಿ ಉಪವಿಭಾಗ), ಸಣ್ಣ ನೀರಾವರಿ ಇಲಾಖೆ, ಕಾವೇರಿ ನೀರಾವರಿ ನಿಗಮ ನಿಯಮಿತ, ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ ಹಾಗೂ ಹೇಮಾವತಿ ನಾಲಾ ವಲಯದ ಅಧಿಕಾರಿಗಳು ತಮ್ಮ ಇಲಾಖಾ ಮಟ್ಟದ ಕಾಮಗಾರಿಗಳ ವಿವರಗಳನ್ನು ಮಂಡಿಸಲಾಗುವುದು.

ದೌರ್ಜನ್ಯ ಪ್ರಕರಣಗಳ ಸ್ಥಿತಿ ಹಾಗೂ ಜಿಲ್ಲೆಗೆ ಸಂಬಂಧಪಟ್ಟಂತೆ ಪಿ.ಟಿ.ಸಿ.ಎಲ್. ಕಾಯ್ದೆಯಡಿ ಜಿಲ್ಲಾಧಿಕಾರಿಗಳ ನ್ಯಾಯಾಲಯ, ತಹಶೀಲ್ದಾರ್ ನ್ಯಾಯಾಲಯ ಮತ್ತು ಉಪವಿಭಾಗಾಧಿಕಾರಿಗಳ ನ್ಯಾಯಾಲಯಗಳಲ್ಲಿ 2023–24, 2024–25 ಮತ್ತು 2025–26ನೇ ಸಾಲಿನಲ್ಲಿ ದಾಖಲಾಗಿರುವ ಒಟ್ಟು ಪ್ರಕರಣಗಳು ಹಾಗೂ ಬಾಕಿ ಇರುವ ಪ್ರಕರಣಗಳ ವಿವರಗಳ ಕುರಿತೂ ಚರ್ಚೆ ನಡೆಯಲಿದೆ.

# ನದಿಯ ಪಾವಿತ್ರ್ಯತೆ ಮತ್ತು ಪರಿಸರ ರಕ್ಷಣೆಗಾಗಿ ಅಗತ್ಯ ಕ್ರಮ ಕೈಗೊಳ್ಳಬೇಕು

## ಅಸ್ಥಿ ವಿಸರ್ಜನೆಯ ಜೊತೆಗೆ ಬಟ್ಟೆ ಮತ್ತು ಪೂಜಾ ಸಾಮಗ್ರಿಗಳನ್ನು ನದಿಗೆ ಬಿಡುವುದು ಸಂಪೂರ್ಣ ನಿಷೇಧ

**ಮಂಡ್ಯ:** ಅವೈಜ್ಞಾನಿಕವಾಗಿ ಅಸ್ಥಿ ವಿಸರ್ಜನೆ ಮಾಡುವುದರಿಂದ ನದಿಗಳು ಕಲುಷಿತಗೊಳ್ಳುತ್ತಿವೆ. ಈ ಹಿನ್ನೆಲೆಯಲ್ಲಿ ಕಾವೇರಿ ಪಾತ್ರದಲ್ಲಿ ವೈಜ್ಞಾನಿಕ ರೀತಿಯಲ್ಲಿ ಧಾರ್ಮಿಕ ವಿಧಿವಿಧಾನಗಳ ಆಚರಣೆ ಹಾಗೂ ಅಸ್ಥಿ ವಿಸರ್ಜನೆ ಮಾಡುವಾಗ ನೈರ್ಮಲ್ಯ ಕಾಪಾಡುವ ಕ್ರಮಗಳನ್ನು ಕೈ ಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅವರು ತಿಳಿಸಿದರು.

ಇಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಗರಾಭಿವೃದ್ಧಿ ಇಲಾಖೆಯ ಪ್ರಗತಿ ಪರಿಶೀಲನೆ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.

ಅಸ್ಥಿ ವಿಸರ್ಜನೆಯ ಜೊತೆಗೆ ಬಟ್ಟೆ ಮತ್ತು ಪೂಜಾ ಸಾಮಗ್ರಿಗಳನ್ನು ನದಿಗೆ ಎಸೆಯುವುದರಿಂದ ಮಾಲಿನ್ಯ ಹೆಚ್ಚಾಗುತ್ತಿದ್ದು, ಇದನ್ನು ತಡೆಯಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿಗಳು ಶ್ರೀರಂಗಪಟ್ಟಣ ಮುಖ್ಯಾಧಿಕಾರಿಗಳಿಗೆ ಸೂಚಿಸಿದರು.

ಕಾವೇರಿ ನದಿಯಲ್ಲಿ ಅಸ್ಥಿ ವಿಸರ್ಜನೆ ಮಾಡಲು ಪಶ್ಚಿಮವಾಹಿನಿ, ಸ್ನಾನಘಟ್ಟ, ಗೋಸಾಯಿ ಘಾಟ್ ಮತ್ತು



ಸಂಗಮ ಸ್ಥಳಗಳಲ್ಲಿ ಅಸ್ಥಿ ವಿಸರ್ಜನೆ ಪ್ರಕ್ರಿಯೆಯನ್ನು ವ್ಯವಸ್ಥಿತವಾಗಿ ನಡೆಸಲು ಪುರೋಹಿತರಿಗೆ ನಿರ್ದಿಷ್ಟ ದರ ನಿಗದಿಪಡಿಸಬೇಕು ಹಾಗೂ ಆ ಸ್ಥಳಗಳಲ್ಲಿ ಸಿಸಿ ಟಿವಿ ಅಳವಡಿಸಬೇಕು ಎಂದು ಅವರು ತಿಳಿಸಿದರು.

ನದಿಯ ಪಾವಿತ್ರ್ಯತೆ ಮತ್ತು ಪರಿಸರ ರಕ್ಷಣೆಗಾಗಿ ಪರಿಸರ ಮಾಲಿನ್ಯ ನಿಯಂತ್ರಣಾಧಿಕಾರಿ ಅವರು ಸ್ಥಳಕ್ಕೆ ಭೇಟಿ ನದಿ ಪಾತ್ರವು ಮಲಿನ ಆಗದಂತೆ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅವರು ತಿಳಿಸಿದರು.

ಶ್ರೀರಂಗಪಟ್ಟಣ ತಾಲ್ಲೂಕಿನ ಮುಖ್ಯಾಧಿಕಾರಿಗಳು ಅಲ್ಲಿನ ಪುರೋಹಿತರನ್ನು ಕರೆದು ಸಭೆ ಕರೆದು ವೈಜ್ಞಾನಿಕ ರೀತಿಯಲ್ಲಿ ಧಾರ್ಮಿಕ ವಿಧಿವಿಧಾನ ಕೈ ಗೊಳ್ಳುವಂತೆ ತಿಳಿಸಲು ಜಿಲ್ಲಾಧಿಕಾರಿ ಗಳು ತಿಳಿಸಿದರು.

ನದಿಯ ಪಾವಿತ್ರ್ಯತೆ ಮತ್ತು ಪರಿಸರ ರಕ್ಷಣೆಗಾಗಿ ಪ್ರತ್ಯೇಕ ವಾದ ಮಾರ್ಗಸೂಚಿ ಸಿದ್ಧಪಡಿಸಿ ಹಾಗೂ ನದಿ ಪಾತ್ರವು ಮಲೀನವಾಗದಂತೆ ಅಗತ್ಯಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾಧಿಕಾರಿ ನರಸಿಂಹಮೂರ್ತಿ, ಕಾರ್ಯಪಾಲಕ ಅಭಿಯಂತರರಾದ ಪ್ರತಾಪ್ ಹಾಗೂ ಮುಖ್ಯಾಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

## ಫೆ.14 ಚಂದ್ರಶೇಖರನಾಥ ಮಹಾಸ್ವಾಮೀಜಿಯವರ ಅಭಿನಂದನಾ ಗ್ರಂಥ ಲೋಕಾರ್ಪಣೆ



ಮಂಡ್ಯ: ಒಕ್ಕಲಿಗ ಯುವ ಬ್ರಿಗೇಡ್ ವತಿಯಿಂದ ವಿಶ್ವ ಒಕ್ಕಲಿಗ ಮಹಾಸಂಸ್ಥಾನ ಮಠದ ಆಶ್ರಯದಲ್ಲಿ ಹಾಗೂ ಮಠದ ಪೀಠಾಧ್ಯಕ್ಷ ಡಾ.ನಿಶ್ಚಲಾನಂದನಾಥ ಮಹಾಸ್ವಾಮೀಜಿ ದಿವ್ಯ ಸಾನಿಧ್ಯದಲ್ಲಿ ಭೈರವೈಕ್ಯ ಶ್ರೀಕುಮಾರ ಚಂದ್ರಶೇಖರನಾಥ ಮಹಾಸ್ವಾಮೀಜಿಯವರ ಅಭಿನಂದನಾ ಗ್ರಂಥ ಲೋಕಾರ್ಪಣೆ ಮತ್ತು ವಿವಿಧ ಸಾಮಾಜಿಕ ಸೇವಾ ಕಾರ್ಯಕ್ರಮಗಳನ್ನು ಫೆ.14 ಮತ್ತು 15ರಂದು ಕೆಂಗೇರಿಯಲ್ಲಿನ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಆವರಣದಲ್ಲಿ ಆಯೋಜಿಸಲಾಗಿದೆ ಎಂದು ಯುವ ಬ್ರಿಗೇಡ್‌ನ ಜಿಲ್ಲಾಧ್ಯಕ್ಷ ಬಸವರಾಜ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದಲ್ಲಿ ಸಾವಯವ ಸಂತೆ, ವಿಜ್ಞಾನ ಮತ್ತು ತಂತ್ರಜ್ಞಾನ ವಸ್ತು ಪ್ರದರ್ಶನ, ಉಚಿತ ಆರೋಗ್ಯ ತಪಾಸಣಾ ಶಿಬಿರ, ಸರ್ವ ಜನಾಂಗದ ವಧು–ವರರ ಮುಖಾ–ಮುಖಿ ಅನ್ವೇಷಣೆ, ಹಾಗೂ ಮಲೆನಾಡು ಗಿಡ್ಡಗಳ ಉಚಿತ ವಿತರಣೆ ಮಾಡಲಾಗುವುದು ಎಂದರು.

ಫೆ.14ರ ಬೆಳಿಗ್ಗೆ 10 ಗಂಟೆಗೆ ಉದ್ಘಾಟನಾ ಸಮಾರಂಭವು ನಡೆಯಲಿದ್ದು, ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷ ಶ್ರೀ. ಡಾ.ನಿರ್ಮಲಾನಂದನಾಥ ಸ್ವಾಮೀಜಿ ದಿವ್ಯಸಾನಿಧ್ಯದಲ್ಲಿ, ಕೈಲಾಸಾಶ್ರಮ ಮಹಾ ಸಂಸ್ಥಾನದ ಶ್ರೀ ಜಯೇಂದ್ರಪುರಿ ಮಹಾಸ್ವಾಮೀಜಿ ಘನ ಸಾನಿಧ್ಯವನ್ನು ಹಾಗೂ ಚಂದ್ರವನ ಆಶ್ರಮದ ಶ್ರೀಡಾ.ತ್ರಿನೇಂದ್ರಮಹಾಂತ ಶಿವಯೋಗಿ ಸ್ವಾಮೀಜಿ, ಸಾಲೂರು ಮಠದ ಶ್ರೀಶಾಂತ ಮಲ್ಲಿಕಾರ್ಜುನ ಸ್ವಾಮೀಜಿ, ಕುಂಚಟಿಗರ ಮಹಾಸಂಸ್ಥಾನ ಮಠದ ಹನುಮಂತನಾಥ ಮಹಾಸ್ವಾಮೀಜಿ, ಸಾಯಿ ಸಂಸ್ಥಾನದ ಗುರುಮೂರ್ತಿ ಗುರೂಜಿ ಸಾನಿಧ್ಯ ವಹಿಸುವರು.

ಕಂದಾಯ ಸಚಿವ ಕೃಷ್ಣಬೈರೇಗೌಡ ಕಾರ್ಯಕ್ರಮ ಉದ್ಘಾಟಿಸಲಿದ್ದು, ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದಗೌಡ ಅಧ್ಯಕ್ಷತೆ ವಹಿಸುವರು. ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಸಂಸ್ಮರಣಾ ಗ್ರಂಥ ಲೋಕಾರ್ಪಣೆ ಮಾಡಲಿದ್ದು, ಕುಣಿಗಲ್ ಶಾಸಕ ಮಲೆನಾಡು ಗಿಡ್ಡಗಳ ವಿತರಣೆ ಮಾಡುವರು, ಬೇಲೂರು ಶಾಸಕ ಹುಲ್ಲಹಳ್ಳಿ ಸುರೇಶ್ ಸಾವಯವ ಸಂತೆಯನ್ನು, ಮಾಜಿ ಸಚಿವ, ಶಾಸಕ ಎಸ್.ಟಿ.ಸೋಮಶೇಖರ್ ಆರೋಗ್ಯ ತಪಾಸಣಾ ಶಿಬಿರ, ಮಂಡ್ಯ ಶಾಸಕ ಪಿ.ರವಿಕುಮಾರ್ ಗೌಡ ಅವರು ರಾಜ್ಯ ಮಟ್ಟದ ಸರ್ವ ಜನಾಂಗದ ವಧು ವರರ ಸಮಾವೇಶ ಉದ್ಘಾಟಿಸಲಿದ್ದಾರೆ. ವೇದಿಕೆಯಲ್ಲಿ ಹಲವು ಗಣ್ಯರು ಭಾಗವಹಿಸಲಿದ್ದು, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಅಂಕೇಗೌಡರನ್ನು ಇದೇ ವೇಳೆ ಸನ್ಮಾನಿಸಲಾಗುವುದು ಎಂದು ಹೇಳಿದರು.

ಫೆ.15ರಂದು ಸಂಜೆ. 5 ಗಂಟೆಗೆ ಸಮಾರೋಪ ಸಮಾರಂಭ ನಡೆಯಲಿದ್ದು, ಸ್ಫಟಿಕಪುರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಶ್ರೀ ನಂಜಾವಧೂತ ಮಹಾಸ್ವಾಮೀಜಿ ದಿವ್ಯ ಸಾನಿಧ್ಯದಲ್ಲಿ, ಯಾದವ ಮಹಾಸಂಸ್ಥಾನ ಮಠದ ಶ್ರೀಕೃಷ್ಣಯಾದವನಂದ ಮಹಾಸ್ವಾಮೀಜಿ, ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ವಿಶ್ವಮಾನವ ಕೇಂದ್ರದ ಶ್ರೀ ಪುರುಷೋತ್ತಮಾನಂದನಾಥ ಮಹಾಸ್ವಾಮೀಜಿ, ಶ್ರೀರಾಮಕೃಷ್ಣ ಸೇವಾ ಕೇಂದ್ರದ ಶ್ರೀನಾದಾನಂದನಾಥ ಸ್ವಾಮೀಜಿ, ಭಕ್ತಮುನೇಶ್ವರ ಕ್ಷೇತ್ರದ ಶ್ರೀರಂಗನಾಥಸ್ವಾಮೀಜಿ ಘನ ಸಾನಿಧ್ಯ ವಹಿಸುವರು.

ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಹಾಗೂ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಕಾರ್ಯಕ್ರಮ ಉದ್ಘಾಟಿಸುವರು. ಮಾಜಿ ಉಪಮುಖ್ಯಮಂತ್ರಿ, ಶಾಸಕ ಡಾ.ಅಶ್ವಥ್ ನಾರಾಯಣ ಅವರು ಕಂದಾಯ ಕಳಕಳಿ ಆವೃತ್ತಿ–2 ಕೃತಿಯ ಲೋಕಾರ್ಪಣೆ ಮಾಡುವರು. ಕೃತಿಯ ಕುರಿತು ವರಪ್ರಸಾದ್ ರೆಡ್ಡಿ ಮಾತನಾಡುವರು. ಸಂಸದ ಡಾ.ಸಿ.ಎನ್. ಮಂಜುನಾಥ್ ಅಧ್ಯಕ್ಷತೆ ವಹಿಸಲಿದ್ದು, ಹಲವು ಗಣ್ಯರು ಭಾಗವಹಿಸಲಿದ್ದಾರೆ. ಮಹಾರಾಷ್ಟ್ರ ಮ್ಯಾರಿಟೈಮ್‌ನ ಸಿಇಓ ಪ್ರದೀಪ್ ಪ್ರಭಾಕರ್ ಅವರನ್ನು ಇದೇ ವೇಳೆ ಸನ್ಮಾನಿಸಲಾಗುವುದು ಎಂದು ವಿವರಿಸಿದರು.

ಗೋಷ್ಠಿಯಲ್ಲಿ ಯುವ ಬ್ರಿಗೇಡ್‌ನ ಮಹಿಳಾ ಜಿಲ್ಲಾಧ್ಯಕ್ಷೆ ಸುಶ್ಮಿತಗೌಡ, ಸಂಘಟನಾ ಪೋಷಕರಾದ ಡಿ.ಸಿ.ರಾಜೇಂದ್ರ ಪ್ರಸಾದ್, ವೆಂಕಟೇಶ್ ಇದ್ದರು.

## ಚಂದ್ರಶೇಖರಸ್ವಾಮಿಗಳ ಹೆಸರಿನಲ್ಲಿ ವಿದ್ಯಾರ್ಥಿನಿಲಯ ಸ್ಥಾಪನೆ



**ಕೆ.ಆರ್.ಪೇಟೆ:** ಕೆಂಗೇರಿ ವಿಶ್ವ ಒಕ್ಕಲಿಗರ ಮಠದ ಸಂಸ್ಥಾಪಕ ಸ್ವಾಮೀಜಿಗಳಾದ ಭೈರವೈಕ್ಯ ಕುಮಾರ ಚಂದ್ರಶೇಖರನಾಥ ಸ್ವಾಮೀಜಿಗಳು ಕೆ.ಆರ್.ಪೇಟೆ ಪಟ್ಟಣದ ಮಣ್ಣಿನಲ್ಲಿ ಹುಟ್ಟಿ ಬೆಳೆದವರು. ಪಟ್ಟಣದ ಬಸ್ ತಿಮ್ಮೇಗೌಡರ ಕುಟುಂಬದಲ್ಲಿ ಜನಿಸಿ ಅಂದಿನ ಕಾಲದಲ್ಲಿಯೇ ಲೆಕ್ಕಪರಿಶೋಧಕ (ಸಿ.ಎ) ಪದವೀಧರರಾಗಿದ್ದರೂ ಎಲ್ಲವನ್ನೂ ತ್ಯಜಿಸಿ ಸಂನ್ಯಾಸ ದೀಕ್ಷೆ ಪಡೆದು ಧಾರ್ಮಿಕ ಸುದಾರಣೆಯ ಮೂಲಕ ಸಮಾಜ ಸೇವೆಗೆ ತಮ್ಮನ್ನು ಅರ್ಪಿಸಿಕೊಂಡವರು. ಕುಮಾರ ಚಂದ್ರಶೇಖರನಾಥ ಸ್ವಾಮೀಜಿಗಳ ನೆನಪಿನಲ್ಲಿ ಕೆ.ಆರ್.ಪೇಟೆ ಪಟ್ಟಣದ ಯಾವುದಾದರೊಂದು ಪ್ರಮುಖ ರಸ್ತೆಗೆ ಅಥವಾ ವೃತ್ತಕ್ಕೆ ಶ್ರೀಗಳ ಹೆಸರನ್ನಿಡಬೇಕು.

ಪುರಸಭೆ ಒಂದು ನಿವೇಶನ ನೀಡಿದರೆ ಕೆಂಗೇರಿ ಮಠದ ವತಿಯಿಂದ ಚಂದ್ರಶೇಖರನಾಥ ಸ್ವಾಮೀಜಿಗಳ ಹೆಸರಿನಲ್ಲಿ ಒಂದು ಯೋಗ ಶಾಲೆ ಮತ್ತು ಬಡ ವಿದ್ಯಾರ್ಥಿಗಳಿಗಾಗಿ ವಿದ್ಯಾರ್ಥಿ ನಿಲಯವನ್ನು ಸ್ಥಾಪಿಸಲಾಗುವುದೆಂದು ಕೆಂಗೇರಿ ವಿಶ್ವ ಒಕ್ಕಲಿಗರ ಮಠದ ಪೀಠಾಧಿಪತಿ ಡಾ.ನಿಶ್ಚಲಾನಂದನಾಥ ಶ್ರೀಗಳು ತಿಳಿಸಿದರು.

ಅವರು ಪಟ್ಟಣದ ಟಿ.ಎ.ಪಿ.ಸಿ.ಎಂ.ಎಸ್ ಸಮುದಾಯ ಭವನದ ಆವರಣದಲ್ಲಿ ತಾಲೂಕಿನ ವಿವಿಧ ಸಂಘ ಸಂಸ್ಥೆಗಳು ಒಗ್ಗೂಡಿ ಆಯೋಜಿಸಿದ್ದ ಕುಮಾರ ಚಂದ್ರಶೇಖರನಾಥ ಶ್ರೀಗಳ ಮೊದಲನೆ ವರ್ಷದ ಪುಣ್ಯಸ್ಮರಣೆ ಮತ್ತು ಡಾ.ನಿಶ್ಚಲಾನಂದನಾಥ ಶ್ರೀಗಳ ಗುರುವಂದನೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಗುರುವಂದನೆ ಸ್ವೀಕರಿಸಿ ಮಾತನಾಡಿದರು.

ನಾನು ಕೆಂಗೇರಿ ಮಠದ ಪೀಠಾಧಿಪತಿಯಾಗಿದ್ದರೂ ನನಗೆ ಆದಿ ಚುಂಚನಗಿರಿ ಮಹಾಸಂಸ್ಥಾನ ಮಠದ ಋಣವಿದೆ. ಆದಿಚುಂಚನಗಿರಿ ಮಠದ ಭೈರವೈಕ್ಯ ಡಾ.ಬಾಲಗಂಗಾಧರನಾಥ ಶ್ರೀಗಳು ಮತ್ತು ಕೆಂಗೇರಿ ವಿಶ್ವ ಒಕ್ಕಲಿಗರ ಮಠದ ಬೈರವೈಕ್ಯ ಕುಮಾರ ಚಂದ್ರಶೇಖರನಾಥ ಶ್ರೀಗಳಿಬ್ಬರೂ ನನಗೆ ಆರಾಧ್ಯ ದೇವರುಗಳು. ಚಂದ್ರಶೇಖರನಾಥ ಶ್ರೀಗಳು ನನಗೆ ಮಠದ ಪೀಠ ನೀಡಿ ಸೇವಾ ದೀಕ್ಷೆ ನೀಡಿದರೆ ಡಾ.ಬಾಲಗಂಗಾಧರನಾಥ ಶ್ರೀಗಳು ಧರ್ಮದ ದಾರಿಯನ್ನು ತೋರಿಸಿದವರು. ಮಠಗಳು ಎಂದಿಗೂ ಪರಸ್ಪರ ಪೈಪೋ?ಟಿಗೆ ಇಳಿಯಬಾರದು ಎಂದರು.

## ಗ್ರಾಹಕರು ವಸ್ತುಗಳನ್ನು ಖರೀದಿಸುವಾಗ ಎಚ್ಚರ ವಹಿಸಿ: ಹೆಚ್.ಎನ್. ಶ್ರೀನಿಧಿ

**ಚಾಮರಾಜನಗರ:** ಗ್ರಾಹಕರು ಯಾವುದೇ ವಸ್ತುಗಳನ್ನು ಖರೀದಿಸುವಾಗ ಎಚ್ಚರವಹಿಸಬೇಕು, ವಸ್ತುಗಳ ಮೇಲಿನ ದಿನಾಂಕ ದಿನಾಂಕವನ್ನು ಪರಿಶೀಲಿಸಿದರೆ ಉತ್ತಮ ಆ ವಸ್ತುವು ನಿಗಧಿತ ದಿನಾಂಕವನ್ನು ಮೀರಿದ್ದರೆ ಆ ವಸ್ತುವು ತನ್ನ ಗುಣವನ್ನು ಕಳೆದು ಕೊಂಡಂತೇ ಎಂದು ಚಾಮರಾಜನಗರ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಹೆಚ್. ಎಸ್. ಶ್ರೀನಿಧಿ ತಿಳಿಸಿದರು.

ನಗರದ ಶ್ರೀಗಂಧ ಮಹಿಳಾ ಅಭಿವೃದ್ಧಿ ಸಂಘ, ಜಿಲ್ಲಾ ಗ್ರಾಹಕ ಮಾಹಿತಿ ಕೇಂದ್ರ, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರ ಇಲಾಖೆ, ಕಾನೂನು ಮಾಪನ ಶಾಸ್ತ್ರ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಹಾಗೂ ಸರ್ಕಾರಿ ಪ್ರೌಢಶಾಲೆ ದೊಡ್ಡರಾಯಪೇಟೆ ಇವರ ಸಹಯೋಗದಲ್ಲಿ ತಾಲ್ಲೂಕಿ ದೊಡ್ಡರಾಯಪೇಟೆ ಸರ್ಕಾರಿ ಪ್ರೌಢಶಾಲೆಯಲ್ಲಿ ಮಂಗಳವಾರ ನಡೆದ ಗ್ರಾಹಕ ಹಕ್ಕುಗಳು ಮತ್ತು ಜಾಗೃತಿ ಕುರಿತು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮನುಷ್ಯನು ಜನಿಸಿದ ದಿನದಿಂದ ಗ್ರಾಹಕನೆ ಎಂದು ತಿಳಿದಿರಬೇಕು. ಯಾವುದೇ ವಸ್ತುಗಳನ್ನು ಅಂಗಡಿಗಳಲ್ಲಿ ಕೊಂಡುಕೊಳ್ಳುವಾಗ ಅಳತೆ ನೋಡಿಕೊಳ್ಳಬೇಕು.



ಜೊತೆಗೆ ರಶೀತಿ ಪಡೆಯಬೇಕು. ಎಂದು ಹೇಳೀದರು. ಭಾರತ ಸರ್ಕಾರವು 1986 ರಂದು ಒಂದು ಕಾನೂನು ಹೊರಡಿಸಿ ನಮ್ಮ ದೇಶದ ಗ್ರಾಹಕರಿಗೆ ವ್ಯಾಪಾರ ಮಾಡುವಾಗ ಅವರಿಗಾಗುವ ಅನೇಕ ಮೋಸ ವಂಚನೆ ಹಾಗೂ ಸೇವೆಗಳಲ್ಲಿ ನ್ಯೂನ್ಯತೆ ಗಳನ್ನು ಸರಿಪಡಿಸವ ಈ ನಿಟ್ಟಿನಲ್ಲಿ ಗ್ರಾಹಕರಿಗೆ ಶೀಘ್ರ ನ್ಯಾಯ ಒದಗಿಸುವ ದೃಷ್ಟಿಯಿಂದ ಗ್ರಾಹಕರ ಸಂರಕ್ಷಣಾ ಕಾಯ್ದೆ 1986ನ್ನು ಜಾರಿಗೆ ತಂದಿದೆ ಮೋಸದಿಂದ ಗ್ರಾಹಕರ ರಕ್ಷಣೆಗಾಗಿ ಕಾನೂನುಗಳನ್ನು ರೂಪಿಸುವ ಉದ್ದೇಶದಿಂದ ಗ್ರಾಹಕ ಸಂರಕ್ಷಣೆ ಕಾನೂನು 2019 ತಂದಿದ್ದು ಈ ಕಾಯ್ದೆಯು ದಿನಾಂಕ 24–07–2020ರಂದು ಜಾರಿಗೆ ಬಂದಿರುತ್ತದೆ ಇಂತಹ ಮಾಹಿತಿಗಳನ್ನು ವಿದ್ಯಾರ್ಥಿಗಳು ತಿಳಿದಿರಬೇಕು ಎಂದು ಹೇಳಿದರು. ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದ ಮಹಿಳಾ ಸದಸ್ಯರಾದ ಭಾರತಿ ಮಾತನಾಡಿ ವಿದ್ಯಾರ್ಥಿಗಳು ಶಾಲೆಯ ಮುಂಭಾಗದಲ್ಲಿ ಮಾರಾಟ ಮಾಡುವ ತಿಂಡಿಗಳನ್ನು ತಿನ್ನುವ ಮೊದಲು ಅದು ಉತ್ತಮ ಗುಣಮಟ್ಟದ ಪದಾರ್ಥವ ಎಂದು ತಿಳಿಯಬೇಕು. ನಂತರ ಪ್ಯಾಕಿನ ಮೇಲೆ ದಿನಾಂಕವನ್ನು ನೋಡಬೇಕು ನಂತರ ಪಡೆಯಬೇಕು. ಯಾವುದೇ ವಸ್ತುಗಳನ್ನು ಕೊಳ್ಳಬೇಕಾದರೆ ರಶೀತಿಯನ್ನು ಪಡೆದರೆ ಮಾತ್ರ ದಾವೆ ಹೂಡಲು ಸಾಧ್ಯವಾಗುತ್ತದೆ ಎಂದರು.

ವೇದಿಕೆಯಲ್ಲಿ ಕಾರ್ಯಕ್ರಮದಲ್ಲಿ ಜಿಲ್ಲಾ ಗ್ರಾಹಕ ಮಾಹಿತಿ ಕೇಂದ್ರದ ಸಂಯೋಜಕರಾದ ಶಿವರಾಜಮ್ಮ, ಮಾತನಾಡಿ ಶಾಲೆಯ ವಿದ್ಯಾರ್ಥಿಗಳಲ್ಲಿ ಹರಿವು ಮೂಡಿಸುವ ಉದ್ದೇಶದಿಂದ ಇಂತಹ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗುತ್ತಿದೆ. ವಿದ್ಯಾರ್ಥಿಗಳು ಸಹ ಗ್ರಾಹಕರೇ ಅಂಗಡಿಗಳಲ್ಲಿ ಖರೀದಿಸುವ ವಸ್ತುಗಳಿಗೆ ರಶೀತಿಯನ್ನು ಪಡೆದರೆ ಉತ್ತಮ ಎಂದು ಹೇಳಿದರು.

ಪ್ರೌಢಶಾಲಾ ಮುಖ್ಯ ಶಿಕ್ಷಕಿ ವನಜಾಕ್ಷಿ ಎನ್.ವಿ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ ಶ್ರೀಗಂಧ ಮಹಿಳಾ ಅಭಿವೃದ್ಧಿ ಸಂಘದ ಅಧ್ಯಕ್ಷೆ ಉಮಾ ವಹಿಸಿದ್ದರು ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕರಾದ ರೇಚಣ್ಣ, ಕೆಂಪಣ್ಣ, ಜಗನ್ ಮೋಹನ್ ಹಾಗೂ ವಿದ್ಯಾರ್ಥಿಗಳು ಇದ್ದರು.


## ಆರೋಗ್ಯ ಶಿಬಿರ; ಕನ್ನಡಕ ವಿತರಣೆ

**ಮೈಸೂರು:** ತಾಲ್ಲೂಕಿನ ಕಡಕೋಳ ಹೋಬಳಿಯ ಕೆ.ಎಂ.ಹುಂಡಿ ಗ್ರಾಮದಲ್ಲಿ ಸಿರಿನ್ ಇಂಡಿಯಾ ಕಂಪೆನಿಯು ಸಿಎಸ್‌ಆರ್ ಯೋಜನೆಯಡಿ ಉಚಿತ ಆರೋಗ್ಯ ಶಿಬಿರ ಏರ್ಪಡಿಸಿತ್ತು.

ರಕ್ತದ ಒತ್ತಡ, ಮಧುಮೇಹ ಪರೀಕ್ಷೆ, ಇಸಿಜಿ ಜೊತೆಗೆ ಕಣ್ಣಿನ ತಪಾಸಣೆ ನಡೆಸಿ 83 ಗ್ರಾಮೀಣರಿಗೆ ಉಚಿತವಾಗಿ ಕನ್ನಡಕ ವಿತರಿಸಲಾಯಿತು.

ತಪಾಸಣಾ ಶಿಬಿರದಲ್ಲಿ ಸಿರಿನ್ ಇಂಡಿಯಾ ಕಂಪೆನಿಯ ಮಾನವ ಸಂಪನ್ಮೂಲ ವಿಭಾಗದ ಹಿರಿಯ ವ್ಯವಸ್ಥಾಪಕ ಎನ್.ಪದ್ಮನಾಭ, ಸಿರಿನ್ ಕಂಪೆನಿಯ ಹಣಕಾಸು ಮತ್ತು ಲೆಕ್ಕ ವಿಭಾಗದ ಎಜಿಎಂ

ಸಂತೋಷ್, ಸಿರಿನ್ ಕಂಪೆನಿಯ ಉಪ ವ್ಯವಸ್ಥಾಪಕ ಅಮಿತ್ ಚಂದ್ರ, ಅಪೊಲೊ ಆಸ್ಪತ್ರೆಯ ಡಾ.ಸುದರ್ಶನ್ ಹಾಗೂ ಅವರ ಸಿಬ್ಬಂದಿ, ಜಿ.ಪಂ. ಮಾಜಿ ಸದಸ್ಯ ಜವರೇಗೌಡ, ಗ್ರಾ.ಪಂ. ಮಾಜಿ ಸದಸ್ಯ ಕೆ.ಪಿ.ಮಹಾದೇವ್, ಊರಿನ ಮುಖಂಡರಾದ ಮಾಲೇಗೌಡ, ಮಹದೇವ್, ಸುಬ್ಬೇಗೌಡ, ಚಂದ್ರಶೇಖರ್ ಹಾಜರಿದ್ದರು.




## ವಿದ್ಯಾರ್ಥಿಗಳು ಆತ್ಮವಿಶ್ವಾಸವನ್ನು ಬೆಳೆಸಿಕೊಳ್ಳಿ: ಕೆ.ಆರ್. ನಂದಿನಿ



**ಮಂಡ್ಯ:** ವಿದ್ಯಾರ್ಥಿಗಳು ಆತ್ಮವಿಶ್ವಾಸವನ್ನು ಕಳೆದುಕೊಳ್ಳಬಾರದು ವಿದ್ಯಾರ್ಥಿಗಳು ತಮ್ಮ ಗುರಿಯ ಕಡೆ ಆಲೋಚಿಸಿ ಎಂದು ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಕೆ. ಆರ್. ನಂದಿನಿ ಹೇಳಿದರು

ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ಮಂಡ್ಯ ಶಾಲಾ ಶಿಕ್ಷಣ ಇಲಾಖೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಶ್ರೀರಂಗಪಟ್ಟಣ ತಾಲ್ಲೂಕಿನ ಪರಿವರ್ತನಾ ವಸತಿ ಶಾಲೆ, ಪಿ.ಯು.ಕಾಲೇಜಿನಲ್ಲಿ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ"ನಾನು ಸಾಧಿಸುವೇ" ಪ್ರೇರಣಾ ಕಾರ್ಯಾಗಾರವನ್ನು ಉದ್ಘಾಟಿಸಿಮಾತನಾಡಿ ವಿದ್ಯಾರ್ಥಿಗಳು ಏಕಾಗ್ರತೆಯಿಂದ ಶಿಕ್ಷಣವನ್ನು ಪಡೆಯಬೇಕು. ಪಬ್ಲಿಕ್ ಶಾಲೆಗಳಿಗಿಂತ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳು ಹೆಚ್ಚು ಅಂಕ ಪಡೆದು ಸಮಾಜಕ್ಕೆ ಮಾದರಿಯಾಗುವಂತೆ ಶಿಕ್ಷಕರು ಮಕ್ಕಳಿಗೆ ಆತ್ಮಸ್ಥೈರ್ಯ ತುಂಬಬೇಕು ಎಂದು ಹೇಳಿದರು.

ಶಿಕ್ಷಕರ ಸಾರ್ಥಕತೆಗೆ ನಿಮ್ಮ ಆಸಕ್ತಿ ಬಹಳ ಮುಖ್ಯವಾಗಿರುತ್ತದೆ. ವಿದ್ಯಾರ್ಥಿಗಳಿಂದ ಶಾಲೆಗೆ ಒಳ್ಳೆಯ ಫಲಿತಾಂಶವನ್ನು ನೀಡುವ ನಿಟ್ಟಿನಲ್ಲಿ ಶಿಕ್ಷಕರು ಕಾರ್ಯನಿರ್ವಾಹಿಸಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ಜಿ.ಲೋಕೇಶ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಬಿ. ವಿ. ನಂದೀಶ್, ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕರು ಲಿಂಗಣ್ಣ ರವರು ಉಪಸ್ಥಿತರಿದ್ದರು.

## ಕನ್ನಡ ರಸಪ್ರಶ್ನೆ ಸ್ಪರ್ಧೆ

**ಮೈಸೂರು:** ಗೋಕುಲಂ 3 ನೇ ಹಂತದಲ್ಲಿನ ಕನಸು ರಂಗ ತಂಡದ ವತಿಯಿಂದನಮಮ್ ದೇಶದ ಧರ್ಮ, ಸಂಸ್ಕೃತಿ, ಪುರಾಣಗಳು ಮತ್ತು ಸಾಹಿತ್ಯ, ಕನ್ನಡ ಸಂಗೀತ, ಕನ್ನಡ ಜಾನಪದ ಲೋಕ, ಇಡೀ ವಿಶ್ವದ ಕ್ರೀಡೆಗಳು ಕುರಿತಂತೆ ಕನ್ನಡ ರಸಪ್ರಶ್ನೆ ಸ್ಪರ್ಧೆ ಆಯೋಜಿಸಲಾಗಿದೆ ಎಂದು ತಂಡದ ಮುಖ್ಯಸ್ಥ ಪಿ.ಶ್ರೇಯಸ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಪ್ರವೇಶ ಶುಲ್ಕ 200 ರೂ.ಗಳಾಗಿವೆ. ಹೆಚ್ಚಿನ ಮಾಹಿತಿಗೆ ದೂ. 97392 72627 ನ್ನು ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದರು. ಡಾ. ಪ್ರಶಾಂತ್ ಇದ್ದರು.



## ಸಂಕ್ಷಿಪ್ತ ಸುದ್ದಿ

### ಫೆ.13 ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

**ಹಾಸನ :** ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ಕಂದಲಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸವನ್ನು ಹಮ್ಮಿಕೊಂಡಿರುವುದರಿಂದ ಫೆ.13 ರಂದು ಬೆಳ್ಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಆಲೂರು ಟೌನ್, ಗುಡ್ಡೇನಹಳ್ಳಿ, ಹುಣಸೆವಳ್ಳಿ, ಬೈರಾಪುರ, ಕಂದಲಿ, ಶೆಟ್ಟಿಹಳ್ಳಿ, ಶಂಕರನಹಳ್ಳಿ, ಅಗಲಹಳ್ಳಿ, ಕಣತೂರು ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು ಸಾರ್ವಜನಿಕರು ಸಹಕರಿಸುವಂತೆ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಫೆ,25 ರಂದು ಕಾರ್ಯಗಾರ

**ಹಾಸನ:** ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ ಹಾಗೂ ಟೆಕ್ಸಾಕ್ ಬೆಂಗಳೂರುರವರ ಸಂಯುಕ್ತಾಶ್ರದಲ್ಲಿ ರ್‍ಯಾಂಪ್ ಯೋಜನೆಯಡಿ ಫೆ,25 ರಂದು ಬೆಳಗ್ಗೆ 10 ಗಂಟೆಗೆ ರಾಜೀವ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ (ಇಂಜಿನಿಯರಿಂಗ್ ಕಾಲೇಜು) ಒಂದು ದಿನದ ಇನ್ಕ್ಯುಬೇಷನ್ ಜಾಗೃತಿ ಕಾರ್ಯಗಾರವನ್ನು ಆಯೋಜಿಸಲಾಗಿದೆ.

ಉದ್ದಿಮೆದಾರರು ಕಾರ್ಯಗಾರದ ಸದುಪಯೋಗ ಪಡೆದುಕೊಳ್ಳಬೇಕೆಂದು ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೈಗಾರಿಕಾ ಕೇಂದ್ರ, ದೂರವಾಣಿ ಸಂಖ್ಯೆ–08172–296217, 240606 ಕಚೇರಿ ವೇಳೆಯಲ್ಲಿ ಸಂಪರ್ಕಿಸುವಂತೆ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

### ಫೆ.15ರಂದು ಶ್ರೀ ಸಂತ ಸೇವಾಲಾಲ್ ಜಯಂತಿ

**ಹಾಸನ:** ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಫೆ.15 ರಂದು ಹಾಸನಾಂಬ ಕಲಾಕ್ಷೇತ್ರದಲ್ಲಿ ಬೆಳಿಗ್ಗೆ 11 ಗಂಟೆಗೆ ಸಂತ ಸೇವಾಲಾಲ್ ಜಯಂತಿ ಕಾರ್ಯಕ್ರಮ ಆಯೋಜಿಸಲಾಗಿದೆ.

ಮಾಜಿ ಪ್ರಧಾನ ಮಂತ್ರಿಗಳು ಹಾಗೂ ರಾಜ್ಯಸಭಾ ಸದಸ್ಯರಾದ ಹೆಚ್.ಡಿದೇವೇಗೌಡ ಘನ ಉಪಸ್ಥಿತರಿರಲಿದ್ದು, ಕಂದಾಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೃಷ್ಣ ಭೈರೇಗೌಡ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ, ಕರ್ನಾಟಕ ರಾಜ್ಯ ಗೃಹ ಮಂಡಳಿಯ ಅಧ್ಯಕ್ಷರು ಹಾಗೂ ಅರಸೀಕೆರೆ ಕ್ಷೇತ್ರದ ಶಾಸಕರಾದ ಕೆ.ಎಂ ಶಿವಲಿಂಗೇಗೌಡ ಗೌರವ ಉಪಸ್ಥಿತರಿರಲಿದ್ದು, ಶಾಸಕ ಸ್ವರೂಪ್ ಪ್ರಕಾಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸಂಸದರಾದ ಶ್ರೇಯಸ್ ಎಂ. ಪಟೇಲ್, ಶಾಸಕರುಗಳಾದ ಹೆಚ್.ಡಿ ರೇವಣ್ಣ, ಸಿ.ಎನ್ ಬಾಲಕೃಷ್ಣ, ಎ.ಮಂಜು, ಹೆಚ್.ಕೆ ಸುರೇಶ್, ಸಿಮೆಂಟ್ ಮಂಜು, ವಿಧಾನ ಪರಿಷತ್ ಶಾಸಕರುಗಳಾದ ಸೂರಜ್ ರೇವಣ್ಣ, ಮಧು ಜಿ, ಮಾದೇಗೌಡ, ಕೆ,ವಿವೇಕಾನಂದ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ., ಜಿಲ್ಲಾ ಬಂಜಾರ ಸಂಘದ ಉಪಾಧ್ಯಕ್ಷ ಧರ್ಮಪ್ಪ ಉಪನ್ಯಾಸ ನೀಡಲಿದ್ದಾರೆ.

### ಅರ್ಜಿ ಆಹ್ವಾನ

**ಹಾಸನ:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ತಾಲ್ಲೂಕು ಮಟ್ಟದ ಪತ್ರಕರ್ತರು ತಮ್ಮ ವೃತ್ತಿ ನಿರತ ಚಟುವಟಿಕೆಗಳ ಸಂಬಂಧ ತಮ್ಮ ಜಿಲ್ಲಾದ್ಯಂತ ಉಚಿತವಾಗಿ ಸಂಚರಿಸಲು ಅನುಕೂಲವಾಗುವಂತೆ ಉಚಿತ ಬಸ್ ಪಾಸ್ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪತ್ರಕರ್ತರು ತಾವು ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಗಳಿಂದ ಸೇವಾ ಪ್ರಮಾಣಪತ್ರ, ಶಿಫಾರಸ್ಸು ಪತ್ರ ಮತ್ತು 11 ತಿಂಗಳುಗಳ ವೇತನಪತ್ರ (ಲೈನೇಜ್/ಸಂಭಾವನೆ/ಕಮೀಷನ್ ಪಡೆದಿರುವ ದಾಖಲೆ)ಗಳನ್ನು ಅಥವಾ ವೇತನ ಜಮಾ ಆಗಿರುವ ಮಾಹಿತಿ ಇರುವಂತಹ ಬ್ಯಾಂಕ್ ಸ್ಟೇಟಮೆಂಟ್ ಲಗತ್ತಿಸಿ "ಸೇವಾಸಿಂಧು" ಪೋರ್ಟಲ್ (https://sevasindhu.karnataka.gov.in)ಮೂಲಕ ಆನ್ ಲೈನ್ ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು.

ಆನ್ ಲೈನ್ ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಆಯಾ ಜಿಲ್ಲೆಯ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು.

# ಅಕ್ರಮ ಮಾದಕ ಮುಂದುವರೆದ ಪೊಲೀಸ್ ದಾಳಿ: ಐವರ ಬಂಧನ

**ಮೈಸೂರು:** ನಗರದಲ್ಲಿ ಅಕ್ರಮ ಮಾದಕ ವಸ್ತುಗಳ ಮಾರಾಟದ ವಿವಿಧ ಪ್ರಕರಣಗಳಲ್ಲಿ ಒಟ್ಟು ಐವರನ್ನು ಬಂಧಿಸಿ 3.14ಗ್ರಾಂ ಎಂಡಿಎಂಎ, 35ಗ್ರಾಂ ಮತ್ತು 550ಗ್ರಾಂ ಗಾಂಜಾ ಅನ್ನು ವಶಕ್ಕೆ ಪಡೆದು ಮುಂದಿನ ಕ್ರಮ ಕೈಗೊಂಡಿದ್ದಾರೆ.



ಪ್ರಕರಣ ಒಂದರಲ್ಲಿ ಅಕ್ರಮ ಮಾದಕ ವಸ್ತು ಮಾರಾಟ ಮತ್ತು ಸಾಗಾಟದ ಮೇಲೆ ನಿರಂತರ ಕಾರ್ಯಾಚರಣೆ ಕೈಗೊಂಡಿರುವ ಸಿಸಿಬಿ ಮತ್ತು ಮಂಡಿ ಠಾಣಾ ಪೊಲೀಸರು 3.14ಗ್ರಾಂ ಎಂಡಿಎಂಎ ಇಬ್ಬರೂ ಆರೋಪಿಗಳನ್ನು ಬಂದಿಸಿದ್ದಾರೆ. ಮಂಡಿಮೊಹಲ್ಲಾದ ಎಂಕೆಡಿಕೆ ರಸ್ತೆ 3ನೇ ಕ್ರಾಸ್ ನಿವಾಸಿ ಮೊಹಮ್ಮದ್ ಕರೀಂ(29), ಕಲ್ಯಾಣಗಿರಿ 2ನೇ ಕ್ರಾಸ್ ನಿವಾಸಿ ನಿಷಾದ್ ಪಾಷ(36)ರನ್ನು ದಸ್ತಗಿರಿ ಮಾಡಿ ನ್ಯಾಯಾಂಗ ಬಂಧನಕ್ಕೆ ಒಳಪಡಿಸಿರುತ್ತಾರೆ. ಮೊಹಮ್ಮದ್ ಕರೀಂ ಮೇಲೆ ಈಗಾಗಲೇ ಮಂಡಿ ಠಾಣೆ, ಎನ್. ಆರ್ ಪೊಲೀಸ್ ಠಾಣೆ ಹಾಗೂ ಸೆನ್ ಪೊಲೀಸ್ ಠಾಣೆಯಲ್ಲಿ ಒಟ್ಟು 5 ಎನ್.ಡಿ.ಪಿ.ಎಸ್ ಪ್ರಕರಣಗಳು ದಾಖಲಾಗಿರುತ್ತವೆ. ಹಾಗೂ ನಿಷಾದ್‌ಪಾಷ ಮೇಲೆ ಈಗಾಗಲೇ ಚನ್ನಪಟ್ಟಣ ನಗರ ಪೊಲೀಸ್ ಠಾಣೆಯಲ್ಲಿ 3 ಕಳ್ಳತನ ಮತ್ತು ಸುಲಿಗೆ ಪ್ರಕರಣಗಳು ಹಾಗೂ ನಜರಬಾದ್ ಪೊಲೀಸ್ ಠಾಣೆ ಮತ್ತು ಉದಯಗಿರಿ ಪೊಲೀಸ್ ಠಾಣೆಯಲ್ಲಿ 2 ಎನ್.ಡಿ.ಪಿ.ಎಸ್ ಪ್ರಕರಣ ಸೇರಿ ಒಟ್ಟು 5 ಕ್ರಿಮಿನಲ್ ಪ್ರಕರಣಗಳು ದಾಖಲಾಗಿರುತ್ತವೆ.

ಮತ್ತೊಂದು ಪ್ರಕರಣದಲ್ಲಿ ಸಿಸಿಬಿ ಪೊಲೀಸರು, ಮಂಡಿ ಹಾಗೂ ಉದಯಗಿರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕಾರ್ಯಾಚರಣೆ ನಡೆಸಿ ಪ್ರತ್ಯೇಕ ಪ್ರಕರಣಗಳಲ್ಲಿ 35ಗ್ರಾಂ ಮತ್ತು 550ಗ್ರಾಂ ಗಾಂಜಾ ವಶಪಡಿಸಿಕೊಂಡು ಬಂಬೂ ಬಜಾರ್ ನಿವಾಸಿ ಸಂಜಯ್(31), ನ್ಯೂ ಬಂಬೂ ಬಜಾರ್ ನಿವಾಸಿ ರಾಜ್‌ಕುಮಾರ್(30)ರನ್ನು ದಸ್ತಗಿರಿ ಮಾಡಿ ಮಾದಕ ವಸ್ತು ಗಾಂಜಾವನ್ನು ಮಾರಾಟ ಮಾಡುವ



ಉದ್ದೇಶಕ್ಕಾಗಿ ಸಾಗಾಟ ಮಾಡಲು ಉಪಯೋಗಿಸುತ್ತಿದ್ದ ದ್ವಿಚಕ್ರ ವಾಹನ ಟಿವಿಎಸ್ KA-09-JE-6223ವಾಹನವನ್ನು ವಶಪಡಿಸಿಕೊಂಡು ನ್ಯಾಯಾಂಗ ಬಂಧನಕ್ಕೆ ಒಳಪಡಿಸಿರುತ್ತಾರೆ.

### ಸಹಾಯವಾಣಿಗೆ ಕರೆ ಮಾಡಿ

ನಗರ ಪೊಲೀಸ್ ವತಿಯಿಂದ ನೂತನವಾಗಿ ಸ್ಥಾಪಿಸಲಾಗಿರುವ ?ವಿಮುಕ್ತಿ ಸಹಾಯವಾಣಿ ಸಂಖ್ಯೆ 8277948080? ಗೆ ಮಾದಕ ವಸ್ತು ಮಾರಾಟ, ಸಾಗಾಟ ಹಾಗೂ ಸೇವನೆಗೆ ಸಂಬಂಧಿಸಿದ ಮಾಹಿತಿಯನ್ನು ಸಾರ್ವಜನಕರು ಹಂಚಿಕೊಂಡು ಮೈಸೂರು ನಗರವನ್ನು ಮಾದಕವಸ್ತು ಮುಕ್ತ ನಗರವನ್ನಾಗಿಸಲು ಪೊಲೀಸರೊಂದಿಗೆ ಕೈ ಜೋಡಿಸಲು ಕೋರಿದ್ದಾರೆ.

ಇನ್ನೊಂದು ಪ್ರಕರಣದಲ್ಲಿ ರಾಜೀವ್ ನಗರ 5ನೇ ಕ್ರಾಸ್ ನಿವಾಸಿ ಮೊಹಮ್ಮದ್ ಅಫಾಕ್(23)ರನ್ನು ದಸ್ತಗಿರಿ ಮಾಡಿ ಪ್ರಕರಣ ದಾಖಲಿಸಿ ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಳಪಡಿಸಿರುತ್ತಾರೆ. ನಗರದಲ್ಲಿ ಮಾದಕ ವಸ್ತು ಮಾರಾಟ, ಸಾಗಾಟ ಹಾಗೂ ಸೇವನೆ ಮಾಡುವವರ ಮೇಲೆ ನಗರ ಪೊಲೀಸರ ಕಾರ್ಯಾಚರಣೆ ಮುಂದುವರೆದಿದ್ದು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದ್ದಾರೆ.

## ‘ಕೊಡವ ಭವನ’ ಉದ್ಘಾಟನೆ

**ಮಡಿಕೇರಿ:** ಮಡಿಕೇರಿ ತಾಲ್ಲೂಕಿನ ಅರೆಕಾಡ್ ಹೊಸ್ಕೇರಿಯಲ್ಲಿ ಕೊಡವ ವೆಲ್‌ಫೇರ್ ಮತ್ತು ರಿಕ್ರಿಯೇಷನ್ ಅಸೋಸಿಯೇಷನ್ ವತಿಯಿಂದ ನೂತನವಾಗಿ ನಿರ್ಮಾಣಗೊಂಡಿರುವ ‘ಕೊಡವ ಭವನ’ದ ಉದ್ಘಾಟನಾ ಸಮಾರಂಭ ಫೆಬ್ರುವರಿ 14 ರಂದು ಬೆಳಗ್ಗೆ 10 ಗಂಟೆಗೆ ನಡೆಯಲಿದೆ. ಕೊಡವ ವೆಲ್‌ಫೇರ್ ಮತ್ತು ರಿಕ್ರಿಯೇಷನ್ ಅಸೋಸಿಯೇಷನ್‌ನ ಅಧ್ಯಕ್ಷ ಕುಕ್ಕೇರ ಜಯ ಚೆಣ್ಣಪ್ಪ ಅವರ ಅಧ್ಯಕ್ಷತೆಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಮಡಿಕೇರಿ ಕ್ಷೇತ್ರದ ಶಾಸಕ ಡಾ.ಮಂತರ್ ಗೌಡ ಅವರು ‘ಕೊಡವ ಭವನ’ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ, ವಿರಾಜಪೇಟೆ ಕ್ಷೇತ್ರದ ಶಾಸಕ ಅಜ್ಜಿಕುಟ್ಟಿರ.ಎಸ್.ಪೊನ್ನಣ್ಣ ಹಾಗೂ ಮೈಸೂರು, ಕೊಡಗು ಕ್ಷೇತ್ರದ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಪಾಲ್ಗೊಳ್ಳಲಿದ್ದಾರೆ. ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಮಂಡೇಪಂಡ ಸುಜಾ ಕುಶಾಲಪ್ಪ, ರಾಜ್ಯ ಕ್ರೀಡಾ ಪ್ರಾಧಿಕಾರದ ಉಪಾಧ್ಯಕ್ಷ ಚೆಪ್ಪುಡಿರ ಅರುಣ್ ಮಾಚಯ್ಯ, ಭಾಗವಹಿಸಲಿದ್ದಾರೆ.

## ಶೀಳನೇರೆ ಸರ್ಕಾರಿ ಶಾಲೆಯಲ್ಲಿ ಅದ್ದೂರಿ ಯಾಗಿ ನೆಡೆದ ಮಕ್ಕಳ ಸಂತೆ



‘ಅಕ್ಕಾ ಬನ್ನಿ.. ಅಣ್ಣಾ ಬನ್ನಿ.. ಬನ್ನೀ ಸಾರ್ ಬನ್ನಿ.. ತಾಜಾ ತರಕಾರಿ... ತಾಜಾ ಸೊಪ್ಪು... ತಾಜಾ ಹಣ್ಣು.. ಇವೆ.. ನಮ್ಮಲ್ಲಿ ತಗೊಳ್ಳಿ ಕಡಿಮೆ ಬೆಲೆ.. ಇದೆ.. ಬನ್ನಿ ಬೇಗ ಬನ್ನಿ.. ಎಂದು ಕೂಗುತ್ತಾ ತಾವು ಮನೆಯಿಂದ ತಂದಿರುವ ತರಕಾರಿ, ಸೊಪ್ಪು ಸೇರಿದಂತೆ ಬಗೆ ಬಗೆಯ ವಸ್ತುಗಳನ್ನು ಹಾಗೂ ತಿಂಡಿ–ತಿನಿಸುಗಳನ್ನು ಪ್ರದರ್ಶನ ಮಾಡಿ ಗ್ರಾಹಕರನ್ನು ಆಕರ್ಷಿಸಿ ಮಾರಾಟ ಮಾಡುವ ಮೂಲಕ ವ್ಯಾಪಾರ ಮಾಡುವ ಮೂಲಕ ಲಾಭ ಗಳಿಸಿದರು. ಈ ಮೂಲಕ ಲಾಭ–ನಷ್ಟದ ಲೆಕ್ಕಾಚಾರ ಮತ್ತು ಗ್ರಾಹಕರನ್ನು ಸೆಳೆಯುವ ಕಲೆಯನ್ನು ಕಲಿತು ಕೊಂಡರು.

ಕೆ.ಆರ್.ಪೇಟೆ ತಾಲೂಕಿನ ಶೀಳನೆರೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ ಮಕ್ಕಳ ಸಂತೆ ಕಾರ್ಯಕ್ರಮದಲ್ಲಿ ಕಂಡು ಬಂದ ನೋಟವಿದು.

ತಾಜಾ ತರಕಾರಿ ಇದೆ ಬನ್ನಿ, ಟೊಮೋಟೋ ಇದೆ, ಮೂಲಂಗಿ ಇದೆ. ಕ್ಯಾರೆಟ್–ಬಿಟ್ರೂಟ್, ಅವರೇಕಾಯಿ, ಕೊತ್ತಂಬರಿ ಸೊಪ್ಪು, ದಂಟಿನಸೊಪ್ಪು, ಬಿನೀಸ್, ಬದನೇಕಾಯಿ, ಈರುಳ್ಳಿ, ಬೆಳ್ಳುಳ್ಳಿ ಇದೆ ಬನ್ನಿ, ತಗೊಳ್ಳಿ ತುಂಬಾ ಕಡಿಮೆ ಬೆಲೆ ಎಂದು ಕೂಗುತ್ತಾ ಪೈಪೋಟಿಯ ಮೇಲೆ ಗ್ರಾಹರಕರನ್ನು ಕರೆದು ಕರೆದು ಭರ್ಜರಿ ವ್ಯಾಪಾರ ಮಾಡಿದರು. ಇದರ ಜೊತೆಗೆ ಬೇಲ್‌ಪುರಿ, ರವೆ ಉಂಡೆ, ಚುರುಮುರಿ, ಬಜ್ಜಿ, ಬೊಂಡಾ, ಡ್ರೈಜಾಮೂನು, ಎಳೆನೀರು ಮಾರಾಟ ಜೋರಾಗಿಯೇ ನಡೆಯಿತು.

ಹಲವು ವಿಧದ ತರಕಾರಿ, ಕುರುಕಲು ತಿಂಡಿ ತಿನಿಸುಗಳ ಭರ್ಜರಿ ವ್ಯಾಪಾರ ನಡೆಯಿತು. ಗ್ರಾಹಕರಾದ ಪೋಷಕರು ಮಕ್ಕಳೊಂದಿಗೆ ಚೌಕಾಸಿ ಮಾಡಿ ಖರೀದಿ ಮಾಡಿ ಒಂದು ತಗೊಂಡ್ರೆ ಎಷ್ಟು 10ತಗೊಂಡ್ರೆ ಒಟ್ಟು ದುಡ್ಡು ಎಷ್ಟು ಆಗುತ್ತೆ ಎಂಬ ಲೆಕ್ಕಾಚಾರವನ್ನು ಸ್ಥಳದಲ್ಲೆ ಲೆಕ್ಕ ಹಾಕುವ ಬಗ್ಗೆ ಮಕ್ಕಳಿಗೆ ಅರಿವು ಮೂಡಿಸಿದರು. ವ್ಯಾಪಾರಿಗಳಂತೆಯೇ ಮಕ್ಕಳು ಸಹ ಟೋಮೆಟೋ, ಕ್ಯಾರೆಟ್, ಬದನೇಕಾಯಿ, ಈರುಳ್ಳಿ, ಬೆಳ್ಳುಳ್ಳಿ ಸೇರಿದಂತೆ ಹಲವು ತರಕಾರಿಗಳನ್ನು ರಾಶಿ ರಾಶಿ ಹಾಕಿಕೊಂಡು ಪೈಪೋಟಿ ಬಿದ್ದವರಂತೆ ಕೂಗುತ್ತಾ ಗ್ರಾಹಕರನ್ನು ತಮ್ಮ ಕಡೆ ಸೆಳೆದು ಭರ್ಜರಿ ವ್ಯಾಪಾರ ಮಾಡಿದರು.

ಶಾಲೆಯ ಮುಖ್ಯ ಶಿಕ್ಷಕ ಹೆಚ್.ಜಿ.ಅನಂತು ಮಾತನಾಡಿ ವ್ಯಾಪಾರ ವಹಿವಾಟಿನಿಂದ ಮಕ್ಕಳಲ್ಲಿ ನಿತ್ಯ ಜೀವನದ ಅನುಭವವಾಗುತ್ತದೆ. ತಂದೆ, ತಾಯಿ ಅಂಗಡಿಗೆ ಹೋಗಿ ತರಕಾರಿ, ತರಲು ತಿಳಿಸಿದರೆ ಯಾವ ರೀತಿ ವ್ಯಪಾರ ಮಾಡಬೇಕೆಂಬ ಅರಿವು ಸಿಗುತ್ತದೆ. ಮಕ್ಕಳು ಕೇವಲ ಆಟ ಪಠಕ್ಕೆ ಸೀಮಿತವಾಗದೆ ಲೋಕಜ್ಞಾನ, ವ್ಯವಹಾರಿಕ ಜ್ಞಾನ ತಿಳಿದುಕೊಳ್ಳಲು ಮಕ್ಕಳಸಂತೆ ಸಹಕಾರಿಯಾಗುತ್ತದೆ ಹಾಗಾಗಿ ನಮ್ಮ ಶಾಲೆಯಲ್ಲಿ ಹಲವು ವರ್ಷಗಳಿಂದ ಸರ್ಕಾರಿ ನಿಯಮದ ಪ್ರಕಾರ ಮಕ್ಕಳ ಸಂತೆಯನ್ನು ಆಯೋಜಿಸಲಾಗುತ್ತಿದೆ ಎಂದರು.

ದಾನಿಗಳು ಹಾಗೂ ರಾಜ್ಯ ಸಹಕಾರ ಮಹಾ ಮಂಡಲದ ನಿರ್ದೇಶಕ ಎಸ್.ಎಲ್.ಮೋಹನ್ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿ ಮಕ್ಕಳಿಗೆ ತಮ್ಮ ಪೋಷಕರ ಕಷ್ಟ ಸುಖಗಳು ತಿಳಿಯಬೇಕು. ಹೊರಗಿನ ಜಗತ್ತಿನಲ್ಲಿ ಹೇಗೆ ರೂಪಿಸಿಕೊಳ್ಳಬೇಕು ಎಂಬುದನ್ನು ತಿಳಿಸುವ ಉದ್ದೇಶದಿಂದ ಶಿಕ್ಷಣ ಇಲಾಖೆಯು ಮಕ್ಕಳ ಸಂತೆ ಆಯೋಜಿಸುತ್ತಿದೆ. ಪುಟಾಣಿ ಮಕ್ಕಳ ಈ ಸಂತೆಯಲ್ಲಿ ಭಾಗವಹಿಸಿರುವ ಪೋಷಕರೂ ಹಾಗೂ ಶಾಲಾ ಸಿಬ್ಬಂದಿ ಮಕ್ಕಳ ಸಂತೆಯಲ್ಲಿರುವ ಎಲ್ಲಾ ವಸ್ತುಗಳನ್ನು ಖರೀದಿಸುವ ಮೂಲಕ ಪ್ರೋತ್ಸಾಹ ನೀಡುತ್ತಿರುವುದು ಒಳ್ಳೆಯ ಬೆಳವಣಿಗೆಯಾಗಿದೆ ಎಂದರು.

ಶಿಕ್ಷಣ ಸಂಯೋಜಕ ಜೆ.ಎಸ್.ಸುರೇಶ್ ಮಾತನಾಡಿ ಮಕ್ಕಳಲ್ಲಿ ವ್ಯಾಪಾರ ಮನೋಭಾವ ಬೆಳೆಸುವುದು. ವಾಣಿಜ್ಯ ದೃಷ್ಟಿಕೋನ, ಹಾಗೂ ವಸ್ತುಗಳನ್ನು ಖರೀದಿಸಬೇಕಾದ ವ್ಯವಹಾರಿಕ ಜ್ಞಾನವನ್ನು ಪ್ರಾಯೋಜಿಕವಾಗಿ ಮಕ್ಕಳಲ್ಲಿ ಕಲಿಸಲು ಮಕ್ಕಳ ಸಂತೆ ಸಹಕಾರಿಯಾಗಿದೆ ಎಂದರು.

ಈ ಸಂದರ್ಭದಲ್ಲಿ ರಾಜ್ಯ ಸಹಕಾರ ಮಹಾ ಮಂಡಲದ ನಿರ್ದೇಶಕ ಎಸ್.ಎಲ್.ಮೋಹನ್, ರಾಷ್ಟ್ರೀಯ ಉತ್ತಮ ಶಿಕ್ಷಕ ಪ್ರಶಸ್ತಿ ವಿಜೇತರಾದ ಅಂಚೆ ಸಣ್ಣಸ್ವಾಮೀಗೌಡ, ಶಾಲೆಯ ಮುಖ್ಯ ಶಿಕ್ಷಕ ಹೆಚ್.ಜಿ.ಅನಂತು ಎಸ್.ಡಿ.ಎಂ.ಸಿ ಅಧ್ಯಕ್ಷ ಕುಮಾರ್, ಉಪಾಧ್ಯಕ್ಷ ನಾಗೇಶ್, ಗ್ರಾ.ಪಂ.ಅಧ್ಯಕ್ಷ ಯುವರಾಜ್, ಉಪಾಧ್ಯಕ್ಷ ಎಸ್.ಕೆ.ಪ್ರಕಾಶ್, ಶಿಕ್ಷಣ ಸಂಯೋಜಕ ಸುರೇಶ್, ಸಿ.ಆರ್.ಪಿ. ಅಣ್ಣಯ್ಯ, ಮಹೇಶ್, ಶಿಕ್ಷಕರಾದ ರಾಧ.ಸಿ, ಚಂದ್ರಕಲಾ, ವೀಣಾ, ಸುನಿತ, ಶ್ರೀನಿವಾಸ್, ಅನಿತ, ಚಂದನ ಸೇರಿದಂತೆ ಶಾಲೆಯ ಎಸ್.ಡಿ.ಎಮ್.ಸಿ ಸದಸ್ಯರು, ಪೋಷಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಮಕ್ಕಳ ಸಂತೆಯನ್ನು ಯಶಸ್ವಿಗೊಳಿಸಿದರು.

**ವರದಿ:ಎಸ್ ರವಿ ಹೊನ್ನೇನಹಳ್ಳಿ**

## ಆಹಾರ ಭದ್ರತಾ ಕಾಯ್ದೆ ಪರಿಣಾಮಕಾರಿಯಾಗಿ ಜಾರಿಗೊಳಿಸಿ: ಡಾ.ಎಚ್.ಕೃಷ್ಣ ಸೂಚನೆ



**ಮಡಿಕೇರಿ:** ಆಹಾರ ಭದ್ರತಾ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ.ಎಚ್.ಕೃಷ್ಣ ಅವರು ನಿರ್ದೇಶನ ನೀಡಿದ್ದಾರೆ.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳ ಜೊತೆ ನಡೆದ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಆಹಾರ ಇಲಾಖೆ ವ್ಯಾಪ್ತಿಯ ನ್ಯಾಯಬೆಲೆ ಅಂಗಡಿಯಲ್ಲಿ ಸಾರ್ವಜನಿಕ ವಿತರಣಾ ವ್ಯವಸ್ಥೆ ದುರುಪಯೋಗ ಆಗದಂತೆ ತಡೆಯಬೇಕು. ಮಧ್ಯಾಹ್ನದ ಉಪಹಾರ ಯೋಜನೆಯನ್ನು ವಿದ್ಯಾರ್ಥಿಗಳಿಗೆ ಸರಿಯಾಗಿ ತಲುಪಿಸಬೇಕು. ಪೂರಕ ಪೌಷ್ಠಿಕ ಆಹಾರ ವಿತರಿಸಬೇಕೆಂದು ಸೂಚಿಸಿದರು.

ಜಿಲ್ಲೆಯ ಹಾಡಿಗಳಲ್ಲಿರುವ ಮಕ್ಕಳಿಗೆ ಗುಣಮಟ್ಟದ ಪೌಷ್ಠಿಕ ಆಹಾರ ಪೂರೈಸಬೇಕು. ಅಪೌಷ್ಠಿಕತೆ ಉಂಟಾಗದಂತೆ ಗಮನ ಹರಿಸುವುದು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳ ಕರ್ತವ್ಯ ಆಗಿದೆ ಎಂದು ರಾಜ್ಯ ಆಹಾರ ಆಯೋಗದ ಅಧ್ಯಕ್ಷರು ಸ್ಪಷ್ಟ ನಿರ್ದೇಶನ ನೀಡಿದರು.

ಅಪೌಷ್ಠಿಕತೆ ಹೋಗಲಾಡಿಸುವ ನಿಟ್ಟಿನಲ್ಲಿ ಸರ್ಕಾರ ಅನ್ನಭಾಗ್ಯ ಯೋಜನೆ ಅಡಿ ಪಡಿತರ ವಿತರಿಸುತ್ತಿದೆ. ಇವುಗಳ ಸಮರ್ಪಕ ಬಳಕೆ ಆಗಬೇಕು ಎಂದು ಕೃಷ್ಣ ಅವರು ಹೇಳಿದರು.

ದುರ್ಬಲ ವರ್ಗಗಳಿಗೆ ಸರ್ಕಾರದ ಕಾರ್ಯಕ್ರಮ ತಲುಪಿಸುವುದು ಅತೀ ಮುಖ್ಯವಾಗಿದೆ. ವಿದ್ಯಾರ್ಥಿ ನಿಲಯಗಳು, ವಸತಿ ಶಾಲೆಗಳು, ಅಂಗನವಾಡಿ ಸೇರಿದಂತೆ ಎಲ್ಲೆಡೆ ಪೌಷ್ಠಿಕ ಆಹಾರ ಪೂರೈಕೆ ಆಗಬೇಕು ಎಂದರು.

ವಿದ್ಯಾರ್ಥಿಗಳಿಗೆ ಕಾಲಕಾಲಕ್ಕೆ ಆರೋಗ್ಯ ತಪಾಸಣೆ ಮಾಡಿಸಬೇಕು. ಸಮವಸ್ತ್ರ, ಲೇಖನ ಸಾಮಾಗ್ರಿ ವಿತರಿಸಬೇಕು. ಶಾಲಾ ಹಾಜರಾತಿ ವಹಿ ನಿರ್ವಹಣೆ ಸರಿಯಾಗಿ ಇರಬೇಕು. ಪೋಷಕರ ಸಭೆ ನಡೆಸಬೇಕು, ಚಲನವಲನ ವಹಿ ಸಮರ್ಪಕ ನಿರ್ವಹಣೆ ಮಾಡಬೇಕು. ಜೊತೆಗೆ ದಾಸ್ತಾನು ವಹಿ ಕ್ರಮಬದ್ಧವಾಗಿರಬೇಕು ಎಂದು ಕೃಷ್ಣ ಅವರು ಹೇಳಿದರು.

# ಆಹಾರ ಮತ್ತು ನಮ್ಮ ಬದುಕು



| ವೀಣಾ ಹೇಮಂತ್‌ಗೌಡ ಪಾಟೀಲ್

ಆಯುರ್ವೇದದಲ್ಲಿ ಆಹಾರಕ್ಕೆ ಬಹಳ ಮಹತ್ವದ ಪಾತ್ರ ಇದೆ. ನಮ್ಮ ಬದುಕಿನಲ್ಲಿ ನೀರು, ಗಾಳಿಯ ಜೊತೆಗೆ ಆಹಾರ ಕೂಡ ಮೂಲಭೂತ ಅವಶ್ಯಕತೆಗಳಲ್ಲಿ ಒಂದು. ಆಹಾರವಿಲ್ಲದಿದ್ದರೆ ಮನುಷ್ಯ ಬದುಕುವುದು ಅಸಾಧ್ಯ ಆದರೆ ಎಷ್ಟೋ ಬಾರಿ ನಮ್ಮದೇ ಆದ ತಪ್ಪು ತಿಳುವಳಿಕೆಗಳಿಂದ ಅದೇ ಆಹಾರದ ಕುರಿತಾದ ಅರಿವಿನ ಕೊರತೆಯಿಂದ, ಅತಿಯಾದ ಸೇವನೆಯ ಕಾರಣದಿಂದ ಮರಣವನ್ನಪ್ಪುವ ಸಾಧ್ಯತೆಗಳು ಕೂಡ ಇವೆ.

ಆಹಾರದಲ್ಲಿ ಮೂರು ವಿಧಗಳು ರಾಜಸ, ಥಾಮಸ ಹಾಗೂ ಸಾತ್ವಿಕ ಎಂದು.

ಬಗೆ ಬಗೆಯ ಸಿಹಿ ಪದಾರ್ಥಗಳು, ಕರಿದ ಪದಾರ್ಥಗಳು, ಹೆಚ್ಚಾಗಿ ಮಸಾಲೆ ಬಳಸಿ ಮಾಡಿದ ಹುರಿದ ಕರಿದ ತಿಂಡಿ ತಿನಿಸುಗಳು ರಾಜಸಿಕ ಆಹಾರದಲ್ಲಿ ಬರುತ್ತವೆ.

ಅತಿಯಾದ ಸಿಹಿ, ಖಾರ, ಈರುಳ್ಳಿ, ಬೆಳ್ಳುಳ್ಳಿಗಳನ್ನು ಬಳಸಿ ತಯಾರಿಸಿರುವ ಆಹಾರ ರಾಜಸಿಕ ಆಹಾರದ ವ್ಯಾಪ್ತಿಯಲ್ಲಿ ಕಾಣಸಿಗುತ್ತದೆ.

ಯಾವಾಗಲೋ ಒಮ್ಮೆ ಹಬ್ಬ ಹುಣ್ಣಿಮೆಗಳಲ್ಲಿ ರಾಜಸಿಕ ಆಹಾರವನ್ನು ಸೇವಿಸಿದಾಗ ಮನಸ್ಸಿಗೆ ತೃಪ್ತಿ ನೆಮ್ಮದಿ ದೊರೆಯುತ್ತದೆ ನಿಜ ಆದರೆ ಹಾಗೆಂದು ಪ್ರತಿದಿನ ರಾಜಸಿಕ ಆಹಾರವನ್ನು ಸೇವಿಸಿದರೆ ಆ ಆಹಾರವನ್ನು ಅರಗಿಸಿಕೊಳ್ಳಲು ಹೆಚ್ಚಿನ ಶ್ರಮದ ಕೆಲಸಗಳನ್ನು ಮಾಡಬೇಕು. ಪ್ರಸ್ತುತ ನಮ್ಮ ಬದುಕಿನ ಶೈಲಿ ಅತ್ಯಂತ ಆರಾಮದಾಯಕವಾಗಿದೆ.... ಬಹಳಷ್ಟು ಕೆಲಸಗಳಿಗೆ ಯಂತ್ರಗಳನ್ನು, ಓಡಾಡಲು ಮೋಟಾರ್ ವಾಹನಗಳನ್ನು ಅವಲಂಬಿಸಿರುವ ನಮ್ಮ ಬದುಕಿನಲ್ಲಿ ಶ್ರಮದ ಜೀವನಕ್ಕೆ ಯಾವುದೇ ಆಸ್ಪದವಿಲ್ಲವಾದ ಕಾರಣ ನಾವು ಸೇವಿಸಿದ ಆಹಾರವು ಬೊಜ್ಜಿನ ರೂಪದಲ್ಲಿ ದೇಹದ ಕೆಲಭಾಗಗಳಲ್ಲಿ ಪೇರಿಸಲ್ಪಡುತ್ತದೆ. ಪರಿಣಾಮವಾಗಿ ಮಧುಮೇಹ, ರಕ್ತದೊತ್ತಡ, ಬೊಜ್ಜು,



ಹೃದಯದ ತೊಂದರೆ ಕಾಣಿಸಿಕೊಳ್ಳುತ್ತದೆ.

ಮೊದಮೊದಲು ರಾಜಸಿಕ ಆಹಾರವನ್ನು ಸೇವಿಸಿದಾಗ ಉಂಟಾಗುವ ಕ್ರಿಯಾಶೀಲತೆ, ಉತ್ಸಾಹಗಳು ಕಡಿಮೆಯಾಗಿ ದೇಹಕ್ಕೆ ಈ ಆಹಾರವನ್ನು ಬಳಸಿಕೊಳ್ಳಲು ಸಾಧ್ಯವಾಗದೆ ದೇಹದ ಜೊತೆಗೆ ಮನಸ್ಸು ಕೂಡ ಭಾರವಾಗಿ ಕೋಪ, ಅಸಹನೆ, ಅಶಾಂತಿಗಳು ಹೆಚ್ಚಾಗುತ್ತವೆ.

ತಾಮಸಿಕ ಆಹಾರ.... ತಾಜಾ ಅಲ್ಲದ, ಮಾಂಸಹಾರ ಮದ್ಯ, ಅತಿಯಾದ ಉಪ್ಪು ಹುಳಿ ಕಾರಗಳನ್ನು ಬಳಸಿ ಮಾಡಿರುವ ಆಹಾರವನ್ನು ತಾಮಸಿಕ ಆಹಾರ ಎಂದು ಹೇಳಬಹುದು ಈ ರೀತಿಯ ಆಹಾರ ಸೇವನೆಯ ಮೂಲಕ ವ್ಯಕ್ತಿಯು ವಿಪರೀತ ರಾಗ ದ್ವೇಷಗಳಿಗೆ ಒಳಗಾಗುವ ಸಾಧ್ಯತೆಗಳು ಹೆಚ್ಚು. ಜೊತೆಗೆ ಸೋಮಾರಿತನ, ಮಬ್ಬಾಗುವಿಕೆ ಕೂಡ ಉಂಟಾಗುತ್ತವೆ. ಸೋಮಾರಿತನವು ಅಜ್ಞಾನಕ್ಕೆ, ಅಂಧಕಾರಕ್ಕೆ ಎಡೆ ಮಾಡಿಕೊಡುತ್ತದೆ.

ಪಾಲಿಶ್ ಮಾಡಿದ ಅಕ್ಕಿ ಮೈದಾ ಹಿಟ್ಟು ಸಕ್ಕರೆ ಸಂಸ್ಕರಿಸಲ್ಪಟ್ಟ ಆಹಾರ ಪದಾರ್ಥಗಳು ತಾಮಸ ಆಹಾರಗಳ ಪಟ್ಟಿಯಲ್ಲಿ ಬರುತ್ತವೆ. ಅತಿಯಾಗಿ ಸಂಸ್ಕರಿಸಲ್ಪಟ್ಟ ಆಹಾರ ಪದಾರ್ಥಗಳು ಅವುಗಳಲ್ಲಿನ ನಾರಿನ ಅಂಶವನ್ನು ಕಳೆದುಕೊಳ್ಳುವ ಕಾರಣ ಅಜೀರ್ಣ ಹೆಚ್ಚಾಗಬಹುದು.

ಅತಿಯಾದ ತಾಮಸಿಕ ಆಹಾರವನ್ನು ಸೇವಿಸುವುದರಿಂದ ಮನುಷ್ಯನಲ್ಲಿ ದೈಹಿಕ ಜಾಡ್ಯಗಳು ಪಿತ್ತ ಕೆರಳುವಿಕೆ ವಾಯು ಪ್ರಕೋಪ ಉದರಬಾಧೆ,

ಕರುಳಿಗೆ ಸಂಬಂಧಪಟ್ಟ ತೊಂದರೆಗಳು ಹೆಚ್ಚಾಗುತ್ತವೆ.

ಮೂರನೆಯದು ಸಾತ್ವಿಕ ಆಹಾರ ಪದ್ಧತಿ.... ತಾಜಾ ತರಕಾರಿಗಳು, ಸೊಪ್ಪುಗಳು, ಮೊಳಕೆಯೊಡೆದ ಕಾಳುಗಳು ಆಯಾ ಋತುಗಳಲ್ಲಿ ದೊರೆಯುವ ಹಣ್ಣು ಹಂಪಲುಗಳು ತಾಜಾ ಆಗಿ ತಯಾರಿಸಿದ ಆಹಾರ ಪದಾರ್ಥಗಳು ಸತ್ವಯುತ ಆಹಾರಗಳ ವ್ಯಾಪ್ತಿಯಲ್ಲಿ ಬರುತ್ತವೆ.

ನಮ್ಮ ಹಿಂದಿನ ಕಾಲದ ಋಷಿಮುನಿಗಳು ಹಸಿ ತರಕಾರಿ, ಹಣ್ಣು ಹಂಪಲು, ಗೆಡ್ಡೆ ಗೆಣಸುಗಳ ಮೇಲೆ ಬದುಕಿರುತ್ತಿದ್ದರು...ಆದ್ದರಿಂದಲೇ ಎಂತದ್ದೇ ವಾತಾವರಣವನ್ನು ಎದುರಿಸುವ ಶಕ್ತಿಯನ್ನು ಅವರ ದೇಹ ಪಡೆದಿರುತ್ತಿತ್ತು. ಹಿಮಾಲಯದ ತಪ್ಪಲಿರಲಿ ಕಡು ಬೇಸಿಗೆಯ ಮರಳುಗಾಡಿರಲಿ ಕೇವಲ ಒಂದು ತುಂಡು ಅರಿವೆಯನ್ನು ಸೊಂಟಕ್ಕೆ ಸುತ್ತಿಕೊಂಡ ಅವರು ಯಾವುದೇ ರೀತಿಯ ದೈಹಿಕ ತೊಂದರೆಗಳು ಬಾಧಿಸದಂತೆ ತಡೆಗಟ್ಟುವ ರೋಗ ನಿರೋಧಕ ಶಕ್ತಿಯನ್ನು ಹೊಂದಿದ್ದರು.

ಆಯಾ ಕಾಲಮಾನಕ್ಕೆ ದೊರೆಯುವ ಹಣ್ಣುಗಳು,ಕಾಳುಗಳು, ತರಕಾರಿಗಳ ಸೇವನೆ ಒಳ್ಳೆಯದು. ಗೋದಿ, ರಾಗಿ,ಜೋಳ, ಅಕ್ಕಿಯಂತಹ ಏಕದಳ ಧಾನ್ಯಗಳ ಸೇವನೆ ಆರೋಗ್ಯಕ್ಕೆ ಅತ್ಯುತ್ತಮ ಆಹಾರ.

ಆಹಾರದಲ್ಲಿ ಪೋಷಕಾಂಶಗಳ ಅವಶ್ಯಕತೆ ಇದ್ದು

ಪ್ರೋಟೀನ್‌ಗಳು ದೇಹದ ಬೆಳವಣಿಗೆ ಮತ್ತು ದುರಸ್ತಿ ಕಾರ್ಯಕ್ಕೆ ಅತ್ಯವಶ್ಯಕ.

ಕಾರ್ಬೋಹೈಡ್ರೇಟ್‌ಗಳು ಶಕ್ತಿ ನೀಡುವ ಮೂಲ.

ಕೊಬ್ಬುಗಳಾಗಿವೆ. ದೇಹದ ತಾಪಮಾನ ನಿಯಂತ್ರಣ ಮತ್ತು ವಿಟಮಿನ್ ಹೀರಿಕೊಳ್ಳುವಿಕೆಗೆ ನೀರು ಅವಶ್ಯಕ. ದೇಹದಿಂದ ವಿಷವನ್ನು ಹೊರಹಾಕಲು ನೀರು ಬೇಕೇ ಬೇಕು. ಹೀಗೆ ದೇಹದ ವಿವಿಧ ಕ್ರಿಯೆಗಳಿಗೆ ಸೂಕ್ಷ್ಮ



ಪೋಷಕಾಂಶಗಳು ವಿಟಮಿನ್‌ಗಳು ಮತ್ತು ಖನಿಜಗಳು ಬೇಕು.


ಅಸಮತೋಲಿತ ಆಹಾರ, ಅತಿಯಾದ ತೂಕ, ವ್ಯಾಯಾಮದ ಕೊರತೆ, ಮಾನಸಿಕ ಒತ್ತಡ ಮತ್ತು ಮಾದಕ ವಸ್ತುಗಳ ಬಳಕೆ ಅನಾರೋಗ್ಯದ ಮೂಲವಾಗಿದೆ.

ಹಣ್ಣುಗಳು, ತರಕಾರಿಗಳು, ಧಾನ್ಯಗಳು ಮತ್ತು ಪ್ರೋಟೀನ್ ಮೂಲಗಳನ್ನು ಸೇವಿಸುವುದು.

ಜಂಕ್ ಫುಡ್ ಮತ್ತು ಎಣ್ಣೆಯುಕ್ತ ಆಹಾರವನ್ನು ಕಡಿಮೆ ಮಾಡುವುದು.

ಸಮತೋಲಿತ ಆಹಾರದ ಜೊತೆಗೆ ನಿಯಮಿತ ವ್ಯಾಯಾಮ, ಶುದ್ಧ ವಾತಾವರಣ, ನಿದ್ರೆ ಮತ್ತು ಮಾನಸಿಕ ಶಾಂತಿಗೆ ಆರೋಗ್ಯಕರ ಜೀವನಶೈಲಿ ಅಗತ್ಯವಾಗಿದ್ದು ಈ ನಿಟ್ಟಿನಲ್ಲಿ ಕಾರ್ಯ ಪ್ರವೃತ್ತರಾಗಬೇಕು.

ಆಹಾರ ಮತ್ತು ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುವುದು ಸಮಾಜದ ಒಟ್ಟಾರೆ ಆರೋಗ್ಯ ಸುಧಾರಣೆಗೆ ಸಹಕಾರಿ.... ಏನಂತೀರಾ ಸ್ನೇಹಿತರೇ?



Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,